RNI.KAR/KAN/2009/31934 ಬೆಂಗಳೂರು ಸಂಪುಟ: 16 ಸಂಚಿಕೆ: 66 ಪುಟ: 06 ಸೋಮವಾರ 03-02-2025

Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB) Executive Editor: L P Babu Honourary Editor: Venkatesh



ಶ್ರುತಿಗೆ ಶಾಕ್ ಕೊಟ್ಟ ನಿವೇದಿತಾ ಗೌಡ

ಶಿವಕಾರ್ತಿಕೇಯನ್ ದೊಡ್ಡ ನಟ ಹೇಗಾದ್ರು

ಕುಂಭಮೇಳದಲ್ಲಿ ಅಮೃತಸ್ನಾನ ಮಾಡಿದ ಸ್ಟಾರ್ ನಟಿ! ಪುಟ 6

# ಬಹಿರಂಗ ಪ್ರಚಾರಕ್ಕೆ ತೆರೆ

## ದೆಹಲಿ ವಿಧಾನಸಭೆ ಫೆ.5ಕ್ಕೆ ಮತದಾನ; ಫೆ.8ಕ್ಕೆ ಮತ ಎಣಿಕೆ

**ನವದೆಹಲಿ:** ಪ್ರತಿಷ್ಠೆ ಪಡೆದುಕೊಂಡಿರುವ ದೆಹಲಿ ವಿಧಾನಸಭಾ ಚುನಾವಣೆಯ ಬಹಿರಂಗ ಪ್ರಚಾರಕ್ಕೆ ಇಂದು ಕೊನೆಯ ದಿನವಾಗಿದ್ದು, ಸಂಜೆ 5ರ ಬಳಿಕ ಮನೆ ಮನೆ ಪ್ರಚಾರ ಶುರುವಾಗಲಿದೆ. ಫೆ. 5ರಂದು ಮತದಾನ ನಡೆಯಲಿದೆ. ಅಂತಿಮ ಪ್ರಚಾರದ ದಿನವಾದ ಇಂದು ದೆಹಲಿಯಲ್ಲಿ ಬಿಜೆಪಿ 22 ರೋಡ್‌ಶೋ ಮತ್ತು ರ‍್ಯಾಲಿಗಳನ್ನು ಏರ್ಪಡಿಸಿದ್ದು, ಕಡೆಯ ಹಂತದಲ್ಲಿ ಮತದಾರರ ಸೆಳೆಯಲು ಇನ್ನಿಲ್ಲದ ಪ್ರಯತ್ನ ನಡೆಸಿದೆ. ಆಮ್‌ಆದ್ಮಿ ಪಕ್ಷ ಕೂಡ ಮತ್ತೊಮ್ಮೆ ಅಧಿಕಾರದ ಗದ್ದುಗೆ ಏರುವ ಭರವಸೆಯಿಂದ ಚುನಾವಣಾ ಪ್ರಚಾರ ಮುಂದುವರೆಸಿದೆ. ಕಾಂಗ್ರೆಸ್‌ಕೂಡ ಹಿಂದೆ ಬೀಳದಂತೆಸಮರದಲ್ಲಿ ಭಾಗವಹಿಸಿದೆ.

ಎಲ್ಲಾ ರಾಜಕೀಯ ಪಕ್ಷಗಳು ಎಲ್ಲಾ ಸಾರ್ವಜನಿಕ ಸಭೆಗಳು, ಚುನಾವಣಾ ಸಂಬಂಧಿತ ಕಾರ್ಯಗಳು ಮತ್ತು ಪ್ರಚಾರವನ್ನು ಮತದಾನಕ್ಕೆ 48 ಗಂಟೆಗಳ ಮುನ್ನವೇ ನಿಲ್ಲಿಸಬೇಕು ಎಂದು ಚುನಾವಣಾ ಆಯೋಗ ಕಟ್ಟುನಿಟ್ಟಿನ ಸೂಚನೆ ನೀಡಿದೆ. ಈಗಾಗಲೇ ಹಲವು ಮಾತಿನ ಯುದ್ಧ, ಆರೋಪ– ಪ್ರತ್ಯಾರೋಪಗಳ ಮೂಲಕ ಮತದಾರರ ಗಮನ ಸೆಳೆದಿರುವ ಪ್ರಮುಖ ಮೂರು ರಾಜಕೀಯ ಪಕ್ಷಗಳು ಹಲವು ಭರ್ಜರಿ ಘೋಷಣೆ ಮತ್ತು ಭರವಸೆಗಳನ್ನು ನೀಡಿದ್ದಾರೆ.

ದೆಹಲಿ ಮುಖ್ಯ ಚುನಾವಣಾ ಅಧಿಕಾರಿಗಳು ನೀಡಿರುವ ದತ್ತಾಂಶದ ಪ್ರಕಾರ, ಫೆ 5ರಂದು 13,766 ಮತಗಟ್ಟೆಗಳಲ್ಲಿ 1.56 ಕೋಟಿ ಜನರು ಮತ ಚಲಾಯಿಸಲಿದ್ದಾರೆ. ಇದರಲ್ಲಿ 83.76 ಲಕ್ಷ ಪುರುಷರಾದರೆ, 72.36 ಮಹಿಳಾ ಮತದಾರರಿದ್ದಾರೆ. 1,267 ತೃತೀಯ ಲಿಂಗಿಗಳು ತಮ್ಮ ಹಕ್ಕು ಚಲಾಯಿಸಲಿದ್ದಾರೆ. ಸರಾಗ ಮತದಾನ ಪ್ರಕ್ರಿಯೆಗೆ ವ್ಯವಸ್ಥೆ ಮಾಡಲಾಗಿದ್ದು, 733 ಮತಗಟ್ಟೆಗಳನ್ನು ವಿಕಲಚೇತನರಿಗೆ ವಿನ್ಯಾಸ ಮಾಡಲಾಗಿದೆ.

ಚುನಾವಣಾ ಆಯೋಗ ಇದೇ ಮೊದಲ ಬಾರಿಗೆ ಮತದಾರರ ಸಮೂಹದ ನಿರ್ವಹಣೆಗೆ ಕ್ಯೂ ಮ್ಯಾನೇಜ್‌ಮೆಂಟ್‌ಸಿಸ್ಟಂ ಪರಿಚಯಿಸಿದ್ದು, ಇದು ನೈಜ ಸಮಯದಲ್ಲಿನ ಜನ ಸಂದಣಿ ಪರಿಶೀಲಿಸಲು ಮತದಾರರಿಗೆ ಆ್ಯಪ್‌ಮೂಲಕ ಅವಕಾಶ ನೀಡಲಿದೆ. ಈಗಾಗಲೇ ಹಿರಿಯ ನಾಗರಿಕರು ಮತ್ತು ಅಂಗವಿಕಲರಿಗೆ ಮನೆಯಿಂದಲೇ ಮತದಾನದ ಸೌಲಭ್ಯದಡಿ 6,980 ಜನರು ಈಗಾಗಲೇ ಮತ ಚಲಾಯಿಸಿದ್ದಾರೆ.



ಜನವರಿ 24ರಿಂದ ಆರಂಭವಾದ ಈ ಸೇವೆ ಫೆಬ್ರವರಿ 4ರವರೆಗೆ ಮುಂದುವರಿಯಲಿದೆ. ನ್ಯಾಯ ಸಮ್ಮತ ಮತ್ತು ಮುಕ್ತ ಚುನಾವಣೆಗಾಗಿ 220 ಪ್ಯಾರಾ ಮಿಲಿಟರಿ ಪಡೆ, 19,000 ಹೋಮ್‌ಗಾರ್ಡ್‌ಮತ್ತು 35,626 ದೆಹಲಿ ಪೊಲೀಸ್‌ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಜೊತೆಗೆ 21,584 ಮತ ಘಟಕ, 20,692 ನಿಯಂತ್ರಿಕ ಘಟಕ, 18,943 ವಿವಿಪ್ಯಾಟ್‌ಗಳನ್ನು ಸಿದ್ಧ ಪಡಿಸಲಾಗಿದೆ.

ಫೆ. 5ರಂದು ದೆಹಲಿ ವಿಧಾನಸಭಾ ಕ್ಷೇತ್ರದ ಮತದಾನ ನಡೆಯಲಿದ್ದು, ಫೆ 8ರಂದು ಮತ ಎಣಿಕೆ ನಡೆದು ಫಲಿತಾಂಶ ಹೊರ ಬೀಳಲಿದೆ.



**ಬೆಂಗಳೂರಿನ ಅರಮನೆ ಮೈದಾನದಲ್ಲಿ ಇದೇ ಫೆ. 11 ರಿಂದ 14 ರವರೆಗೆ ನಡೆಯಲಿರುವ ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶ "ಇನ್ವೆಸ್ಟ್ ಕರ್ನಾಟಕ 2025" ಕುರಿತು ವಿಧಾನಸೌಧದಲ್ಲಿ ಸೋಮವಾರ ನಡೆದ ಪೂರ್ವಭಾವಿ ಸಿದ್ಧತೆ ಪರಿಶೀಲನೆ ಸಭೆ ನಂತರ ಡಿಸಿಎಂ ಡಿ ಕೆ ಶಿವಕುಮಾರ್ ಅವರು ಮಾಧ್ಯಮದವರನ್ನು ಉದ್ದೇಶಿಸಿ ಮಾತನಾಡಿದರು. ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರಾದ ಎಂ ಬಿ ಪಾಟೀಲ್, ಕಂದಾಯ ಸಚಿವ ಕೃಷ್ಣ ಬೈರೇಗೌಡ, ಗ್ರಾಮೀಣಾಭಿವೃದ್ಧಿ, ಐಟಿ–ಬಿಟಿ ಸಚಿವ ಪ್ರಿಯಾಂಕ್ ಖರ್ಗೆ, ಕೃಷಿ ಸಚಿವ ಚಲುವರಾಯಸ್ವಾಮಿ, ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಉಪಸ್ಥಿತರಿದ್ದರು.**

## 1 ವಾರದಲ್ಲಿ ಎಲ್ಲವೂ ಸರಿಯಾಗುತ್ತೆ, ಮತ್ತೆ ನಾನೇ ರಾಜ್ಯಾಧ್ಯಕ್ಷ



**ಶಿವಮೊಗ್ಗ:** ಬಿಜೆಪಿಯಲ್ಲಿ ಆಂತರಿಕ ಪ್ರಜಾಪ್ರಭುತ್ವದ ವ್ಯವಸ್ಥೆ ಇದೆ. ಒಂದು ವಾರದ ಬಳಿಕ ಎಲ್ಲವೂ ಸರಿಯಾಗಲಿದೆ. ವ್ಯವಸ್ಥಿತವಾಗಿ ಸಂಘಟನೆ, ಚುನಾವಣೆ ನಡೆಯುವುದು ಬಿಜೆಪಿಯಲ್ಲಿ ಮಾತ್ರ. ಮಂಡಲ ಮಟ್ಟದಿಂದ ರಾಜ್ಯಮಟ್ಟದವರೆಗೂ ಚುನಾವಣೆ ನಡೆಯುತ್ತದೆ. ರಾಜ್ಯ, ರಾಷ್ಟ್ರೀಯ ಅಧ್ಯಕ್ಷರ ಚುನಾವಣೆ ವ್ಯವಸ್ಥಿತವಾಗಿ ನಡೆಯುತ್ತಿದೆ. ಪಕ್ಷದ ಕಾರ್ಯಕರ್ತರು ಹೋರಾಟ ಮಾಡಿಕೊಂಡು ಬಂದಿದ್ದಾರೆ. ರಾಜ್ಯದಲ್ಲಿ ಕಾಂಗ್ರೆಸ್ ಭ್ರಷ್ಟ ಸರ್ಕಾರದ ವಿರುದ್ಧ ನಿರಂತರ ಹೋರಾಟ ಮಾಡುತ್ತಿದ್ದೇವೆ. ನಾನು ಪುಟ 2

## ಮಹಾಕುಂಭ ಕಾಲ್ತುಳಿತ; ಚರ್ಚೆಗೆ ಆಗ್ರಹಿಸಿ ಪ್ರತಿಪಕ್ಷಗಳ ಸಭಾತ್ಯಾಗ

ನವದೆಹಲಿ: ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಮಹಾಕುಂಭದಲ್ಲಿ ಕಳೆದ ವಾರ ಸಂಭವಿಸಿದ ಕಾಲ್ತುಳಿತದಲ್ಲಿ ಹಲವಾರು ಮಂದಿ ಸಾವಿಗೀಡಾಗಿದ್ದು, ಈ ಬಗ್ಗೆ ತಕ್ಷಣವೇ ಚರ್ಚೆ ನಡೆಸಬೇಕೆಂಬ ತಮ್ಮ ಬೇಡಿಕೆಯನ್ನು ಸಭಾಪತಿ ಅಂಗೀಕರಿಸದ ಹಿನ್ನೆಲೆಯಲ್ಲಿ ಪ್ರತಿಪಕ್ಷಗಳು ರಾಜ್ಯಸಭೆಯಿಂದ ಹೊರನಡೆದವು.

ಮಹಾಕುಂಭ ಮೇಳದಲ್ಲಿ ಸಂಭವಿಸಿದ ಕಾಲ್ತುಳಿತ ವಿಚಾರ ಸೇರಿದಂತೆ ವಿವಿಧ ವಿಚಾರಗಳ ಕುರಿತು ಚರ್ಚಿಸಲು ಕಾರ್ಯಕಲಾಪದ ಪಟ್ಟಿಯನ್ನು ಅಮಾನತುಗೊಳಿಸುವಂತೆ ಕೋರಿ ನಿಯಮ 267ರ ಅಡಿಯಲ್ಲಿ ಒಂಭತ್ತು ನೋಟಿಸ್‌ಗಳನ್ನು ಸ್ವೀಕರಿಸಲಾಗಿದೆ ಎಂದು ಸಭಾಪತಿ ಜಗದೀಪ್ ಧನ್ಕರ್ ತಿಳಿಸಿದರು. ಕಾಂಗ್ರೆಸ್ ನಾಯಕರಾದ ಪ್ರಮೋದ್ ಮತ್ತು ದಿಗ್ವಿಜಯ ಸಿಂಗ್, ಟಿಎಂಸಿಯ ಸಾಗರಿಕಾ ಘೋಷ್, ಸಮಾಜವಾದಿ



ಪಕ್ಷದ ಜಾವೇದ್ ಅಲಿ ಮತ್ತು ರಾಮ್‌ಜಿ ಲಾಲ್ ಸುಮನ್ ಮತ್ತು ಸಿಪಿಐ ಪಕ್ಷಧ ಜಾನ್ ಬ್ರಿಟಾಸ್ ಅವರು ಮಹಾಕುಂಭ ವಿಷಯದ ಬಗ್ಗೆ ಚರ್ಚೆಗೆ ಒತ್ತಾಯಿಸಿ ನೋಟಿಸ್ ನೀಡಿದ್ದರು.

'ಸಂವಿಧಾನ ಮತ್ತು ಬಿಆರ್ ಅಂಬೇಡ್ಕರ್ ಅವರಿಗೆ ಅಗೌರವ ತೋರುವ ಘಟನೆಗಳು ಮತ್ತು ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಪುಟ 2

## ರಾಜಕೀಯ ಪ್ರೇರಿತ

**ಬೆಂಗಳೂರು:** ಪಿಎಸ್‌ಐ ನೇಮಕಾತಿ ಪರೀಕ್ಷೆ ಹಗರಣಕ್ಕೂ ನನಗೂ ಯಾವುದೇ ಸಂಬಂಧ ಇಲ್ಲ, ಇದೊಂದು ರಾಜಕೀಯ ಪ್ರೇರಿತ ಎಂದು ರಾಜ್ಯದ ಮಾಜಿ ಉಪಮುಖ್ಯಮಂತ್ರಿ ಅಶ್ವತ್ ನಾರಾಯಣ ಹೇಳಿದ್ದಾರೆ. ರಾಜ್ಯದಲ್ಲಿ ಸಂಚಲನ ಸೃಷ್ಟಿಸಿದ್ದ 545 ಪೊಲೀಸ್ ಸಬ್ ಇನ್‌ಸ್ಪೆಕ್ಟರ್‌ಗಳ ನೇಮಕಾತಿಗೆ ನಡೆದ ಪರೀಕ್ಷೆಯಲ್ಲಿನ ಅಕ್ರಮ ಪ್ರಕರಣಕ್ಕೆ ಸಂಬಂಧಿಸಿದಂತೆ ಮಲ್ಲೇಶ್ವರಂ ಕ್ಷೇತ್ರದ ಬಿಜೆಪಿ ಶಾಸಕ ಡಾ.ಅಶ್ವತ್ಥ್ ನಾರಾಯಣರನ್ನು ವಿಶೇಷ ತನಿಖಾ ತಂಡ ವಿಚಾರಣೆ ನಡೆಸಿದೆ. ಪುಟ 2

## ಮತ್ತೊಂದು ವಿಮಾನ ನಿಲ್ದಾಣಕ್ಕೆ ಮನವಿ

**ಬೆಂಗಳೂರು :** ಹೆಚ್.ಡಿ. ದೇವೇಗೌಡರು ಬೆಂಗಳೂರಿಗೆ ಮತ್ತೊಂದು ವಿಮಾನ ನಿಲ್ದಾಣಕ್ಕೆ ಅನುಮತಿ ನೀಡುವಂತೆ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಿದರು. ಕರ್ನಾಟಕ ಸರ್ಕಾರ ಈಗಾಗಲೇ ಮತ್ತೊಂದು ವಿಮಾನ ನಿಲ್ದಾಣದ ನಿರ್ಮಾಣಕ್ಕೆ ಪ್ರಸ್ತಾಪ ಸಲ್ಲಿಸಿದೆ. ಈ ವಿಚಾರದ ಬಗ್ಗೆ ಕೇಂದ್ರ ವಿಮಾನಯಾನ ಸಚಿವರೊಂದಿಗೆ ಚರ್ಚೆಯನ್ನು ನಡೆಸಿದೆ. ಆದರೆ ತಮಿಳುನಾಡು ಇದಕ್ಕೆ ಪುಟ 2

## ವಿಸಿ ನಾಲೆಗೆ ಕಾರು ಪಲ್ಟಿ: ಸಾವು

**ಮಂಡ್ಯ :** ವಿಸಿ ನಾಲೆಗೆ ಕಾರು ಪಲ್ಟಿಯಾಗಿ ಓರ್ವ ಸಾವನ್ನಪ್ಪಿರುವ ಘಟನೆ ಮಂಡ್ಯ ಜಿಲ್ಲೆ ಪಾಂಡವಪುರ ತಾಲ್ಲೂಕಿನ ತಿಬ್ಬನಹಳ್ಳಿ ಗ್ರಾಮದ ಬಳಿ ನಡೆದಿದೆ. ಪಾಂಡವಪುರ ತಾಲ್ಲೂಕಿನ ಶಿವಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ. ಪಾಂಡವಪುರದಿಂದ ಮಂಡ್ಯಕ್ಕೆ ಬರುವಾಗ ಈ ದುರಂತ ಸಂಭವಿಸಿದೆ. ಕಾರಿನಲ್ಲಿ ನಾಲ್ವರು ಇದ್ದರು ಎನ್ನಲಾಗಿದ್ದು, ಪುಟ 2

## ಪತ್ರಕರ್ತರಿಗೆ ಆದ್ಯತೆ ಮೇರೆಗೆ ನಿವೇಶನ ಹಂಚಿಕೆ

**ಬೆಂಗಳೂರು:** "ಸರ್ಕಾರದ ವಿವಿಧ ಯೋಜನೆಗಳ ಮೂಲಕ ಪತ್ರಕರ್ತರಿಗೆ ಆದ್ಯತೆ ಮೇರೆಗೆ ನಿವೇಶನ ಹಂಚುವ ಕಾರ್ಯಕ್ರಮ ರೂಪಿಸಲಾಗುವುದು. ಈ ಬಗ್ಗೆ ಚರ್ಚಿಸಿ ಶೀಘ್ರದಲ್ಲೇ ಅಧಿಕೃತ ಘೋಷಣೆ ಮಾಡಲಾಗುವುದು" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ಕರ್ನಾಟಕ ಮಾಧ್ಯಮ ಅಕಾಡೆಮಿ 2023 ಮತ್ತು 2024ನೇ ಸಾಲಿನ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಶಿವಕುಮಾರ್ ಅವರು ಮಾತನಾಡಿದರು."ನಮ್ಮ ಸರ್ಕಾರ ಪತ್ರಕರ್ತರಿಗೆ ನೀಡಿರುವ ಯೋಜನೆಗಳ ಬಗ್ಗೆ ಈಗಾಗಲೇ ಪ್ರಸ್ತಾಪ ಮಾಡಲಾಗಿದೆ. ಗ್ರಾಮೀಣ ಪತ್ರಕರ್ತರಿಗೆ ಬಸ್ ಪಾಸ್ ವಿತರಣೆ ಮಾಡಲಾಗಿದೆ. ಪತ್ರಕರ್ತರಿಗೆ ಆರೋಗ್ಯ ವಿಮೆ ನೀಡಲು ಚರ್ಚೆ ನಡೆಯುತ್ತಿದೆ. ಗ್ರಾಮೀಣ ಹಾಗೂ ನಗರ ಭಾಗದ ಪತ್ರಕರ್ತರಿಗೆ



ಆದ್ಯತೆ ಮೇರೆಗೆ ನಿವೇಶನ ನೀಡುವ ಬಗ್ಗೆ ಆಲೋಚನೆ ಮಾಡಲಾಗುತ್ತಿದೆ. ಪತ್ರಕರ್ತರು ಗೌರವಯುತವಾಗಿ ಬದುಕಲು ಈ ಕ್ರಮ ಕೈಗೊಳ್ಳಲಾಗುವುದು. ನಿವೇಶನ ಹಂಚಿಕೆ ಸಂದರ್ಭದಲ್ಲಿ ಬೇರೆಯವರಿಗೆ ನೀಡುವಂತೆ ಮಾಧ್ಯಮದವರಿಗೂ ಆದ್ಯತೆ ನೀಡಲು ಚರ್ಚೆ ಮಾಡು ತ್ತಿದ್ದೇವೆ. ಮುಂದಿನ ದಿನ ಗಳಲ್ಲಿ ಇದನ್ನು ಘೋಷಣೆ ಮಾಡುತ್ತೇವೆ. ಬೆಂಗಳೂರು ನಗರಾಭಿವೃದ್ಧಿ ಸಚಿವನಾಗಿ, ವಿವಿಧ ಯೋಜನಾ ಪ್ರಾಧಿಕಾರದ ಜವಾಬ್ದಾರಿ ವಹಿಸಿಕೊಂಡವನಾಗಿ ನಾನು ಈ ಭರವಸೆ ನೀಡುತ್ತಿದ್ದೇನೆ" ಎಂದು ತಿಳಿಸಿದರು.

**ನಮ್ಮಲ್ಲಿರುವಷ್ಟು ಸ್ವಾತಂತ್ರ್ಯ ಬೇರೆ ಎಲ್ಲೂ ಇಲ್ಲ:** "ನಾನು ಕೆಲವು ವರ್ಷಗಳ ಹಿಂದೆ ತಮಿಳುನಾಡಿನ ರಾಜ್ಯಪಾಲರನ್ನು ಪುಟ 2

## ಅಂಬೇಡ್ಕರ್ ಅವರ ಮೌಲ್ಯವನ್ನು ಕಾಪಾಡಬೇಕು



**ಬೆಂಗಳೂರು:** ಪತ್ರಿಕೋದ್ಯಮ ಜನರ ಪ್ರಾಣವಾಯು ಎನ್ನುವ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಮಾತು ಮತ್ತು ಮೌಲ್ಯವನ್ನು ಕಾಪಾಡಲು ಮತ್ತು ವಿಸ್ತರಿಸಲು ಪೂರಕವಾದ ಕಾರ್ಯಕ್ರಮಗಳನ್ನು ಮಾಧ್ಯಮ ಅಕಾಡೆಮಿ ರೂಪಿಸಬೇಕು ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್ ಅವರು ನುಡಿದರು.

ಕರ್ನಾಟಕ ಮಾಧ್ಯಮ ಅಕಾಡೆಮಿಯ ವಾರ್ಷಿಕ ಪ್ರಶಸ್ತಿ ವಿತರಣಾ ಕಾರ್ಯ ಕ್ರಮದಲ್ಲಿ ಪುರಸ್ಕೃತರಿಗೆ ಅಭಿನಂದಿಸಿ ಮಾತನಾಡಿದರು. ಜನರ, ಸಮಾಜದ ಪ್ರಾಣವಾಯು ಆಗಿರುವ ಪತ್ರಿಕಾ ವೃತ್ತಿಯ ಉಸಿರನ್ನು ಕಾಪಾಡಲು ನಮ್ಮ ಸಂವಿಧಾನ ಇದೆ. ನಮ್ಮ ಸಂವಿಧಾನ ಕತೃ ಆದ ಅಂಬೇಡ್ಕರ್ ಅವರೇ ಹೇಳಿರುವ ರೀತಿ ಪತ್ರಿಕಾ ವೃತ್ತಿ ನಿಜವಾದ ಪ್ರಾಣವಾಯು ಆಗಿ ಉಳಿಯಬೇಕು. ಪುಟ 2

## ಸಿಇಸಿ ಆದೇಶ ಪಾಲಿಸಿ ಎನ್ನುವುದು ದ್ವೇಷವೇ: ಎಚ್ಡಿಕೆಗೆ ಖಂಡ್ರೆ ಪ್ರಶ್ನೆ




**ಬೆಂಗಳೂರು:** : ಕುದುರೇಮುಖ ಕಬ್ಬಿಣದ ಅದಿರು ಕಂಪನಿ ವಿಚಾರದಲ್ಲಿ ಕೆಐಓಸಿಎಲ್ ತಪ್ಪು ಮುಚ್ಚಿಕೊಳ್ಳಲು ಕರ್ನಾಟಕ ಸರ್ಕಾರದ ಮೇಲೆ ಎಚ್.ಡಿ. ಕುಮಾರಸ್ವಾಮಿ ಮಿಥ್ಯಾರೋಪ ಮಾಡುತ್ತಿದ್ದಾರೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ತಿರುಗೇಟು ನೀಡಿದ್ದಾರೆ.

ಬೆಂಗಳೂರಿನಲ್ಲಿ ಮಾತನಾಡಿದ ಅವರು, ರಾಜ್ಯದ ಅಭಿವೃದ್ಧಿಯ ವಿಚಾರದಲ್ಲಿ ರಾಜಕೀಯ ಬೆರೆಸುವುದಿಲ್ಲ, ಆದರೆ ಕೆ.ಐ.ಓ.ಸಿ.ಎಲ್. ಈ ಹಿಂದೆ ಗಣಿಗಾರಿಕೆ ನಡೆಸುವಾಗ ಸರಿಪಡಿಸಲು ಸಾಧ್ಯವೇ ಆಗದಷ್ಟು ಪರಿಸರ ಹಾನಿ ಮಾಡಿದೆ, ಪರಿಸರ ಹಾನಿಯ ಮೊತ್ತ ಸೇರಿದಂತೆ 1400 ಕೋಟಿ ರೂ. ಬಾಕಿ ಕಟ್ಟಿಲ್ಲ. ತನ್ನ ತಪ್ಪು ಸರಿಪಡಿಸಿಕೊಳ್ಳಲು ತಯಾರಿಲ್ಲದ ಕಂಪನಿಗೆ ಮತ್ತಷ್ಟು ಪರಿಸರ ಹಾನಿ ಮಾಡಲು ಬಿಡಬೇಕೆ ಎಂದು ಪ್ರಶ್ನಿಸಿದ್ದಾರೆ.

ಸರ್ಕಾರಿ ಸ್ವಾಮ್ಯದ ಕೆಐಓಸಿಎಲ್ ಅಕ್ರಮವಾಗಿ ಲಕ್ಯಾ ಜಲಾಶಯದ ಎತ್ತರ ಹೆಚ್ಚಿಸಿ, ಅರಣ್ಯ ಮುಳುಗಡೆ ಮಾಡಿತ್ತು. ಕುದುರೆಮುಖ ಕಬ್ಬಿಣದ ಅದಿರು ಕಂಪನಿ ಎನ್.ಪಿ.ವಿ. ಮೊತ್ತ, ಬಡ್ಡಿ ಸೇರಿ ಸುಮಾರು 1349.52948 ಕೋಟಿ ರೂ.ಗಳನ್ನು ಅರಣ್ಯ ಇಲಾಖೆಗೆ ಪಾವತಿಸಬೇಕಿದೆ, ಇದರ ಜೊತೆಗೆ 1334.33 ಹೆಕ್ಟೇರ್ ಭೂಮಿಯನ್ನು ಅರಣ್ಯ ಇಲಾಖೆಗೆ ಹಿಂತಿರುಗಿಸಬೇಕಿದೆ. ಕರ್ನಾಟಕದ ಮುಖ್ಯಮಂತ್ರಿಗಳಾಗಿದ್ದ ಪುಟ 2

## ಮೂರನೇ ಅಮೃತ ಸ್ನಾನಕ್ಕೆ ಸಾಕ್ಷಿಯಾದ ಮಹಾಕುಂಭಮೇಳ: ಮತ್ತಷ್ಟು ಭದ್ರತೆ



**ಪ್ರಯಾಗ್ರಾಜ್:** ವಸಂತ ಪಂಚಮಿಯ ಶುಭ ಸಂದರ್ಭದಲ್ಲಿ ಮಹಾಕುಂಭ ತನ್ನ ಮೂರನೇ ಅಮೃತ ಸ್ನಾನಕ್ಕೆ ಸಾಕ್ಷಿಯಾಯಿತು.ಸೋಮವಾರ ಬೆಳಗ್ಗೆಯಿಂದಲೇ ವಿವಿಧ ಅಖಾರಗಳಿಂದ ಸಾಧುಗಳು, ನಾಗಸಾಧುಗಳು ತ್ರಿವೇಣಿ ಸಂಗಮದಲ್ಲಿ ಅಮೃತ ಸ್ನಾನ ಮಾಡುವ ಮೂಲಕ ಮಿಂದೆದ್ದರು. ಬೆಳಗ್ಗೆ 4 ಗಂಟೆಯ ಸಮಯಕ್ಕೆ 16.58 ಲಕ್ಷ ಭಕ್ತರು ಪವಿತ್ರ ಸ್ನಾನ ಮಾಡಿದ್ದಾರೆ. ಒಟ್ಟು ಪುಟ 2

## ನಿರ್ಮಾಲ ಹೇಳಿಕೆಗೆ ಪರಂ ಕಿಡಿ



**ಬೆಂಗಳೂರು:** ರಾಜ್ಯ ಸರ್ಕಾರ ದಿವಾಳಿಯಾಗಿದೆ ಎಂದು ಹೇಳಿರುವ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ವಿರುದ್ಧ ಕಿಡಿಕಾರಿರುವ ಗೃಹ ಸಚಿವ ಡಾ.ಜಿ. ಪರಮೇಶ್ವರ್, ರಾಜ್ಯದ ಪ್ರತಿನಿಧಿಯಾಗಿ ಕರ್ನಾಟಕದ ಹಿತ ಕಾಪಾಡಲು ವಿಫಲವಾಗಿರುವ ನಿರ್ಮಲಾ ಸೀತಾರಾಮನ್ ಅವರು ಕರ್ನಾಟಕಕ್ಕೆ ಏನು ಕೊಡುಗೆ ಕೊಟ್ಟಿದ್ದಾರೆ ಎಂಬುದನ್ನು ಮೊದಲು ಹೇಳಲಿ ಎಂದು ತಿರುಗೇಟು ನೀಡಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಿರ್ಮಲಾ ಸೀತಾರಾಮನ್ ಅವರು ರಾಜ್ಯದಿಂದ ರಾಜ್ಯಸಭೆಗೆ ಆಯ್ಕೆಯಾಗಿದ್ದಾರೆ. ದೇಶದ ಹಣಕಾಸು ಸಚಿವರೂ ಆಗಿದ್ದಾರೆ. ಅವರ ಬಗ್ಗೆ ನಮಗೆಲ್ಲಾ ಗೌರವ ಇರಬೇಕು. ಆದರೆ ಅವರು ರಾಜ್ಯದ ಹಿತ ಕಾಪಾಡಲು ಸಂಪೂರ್ಣ ವಿಫಲರಾಗಿದ್ದಾರೆ ಎಂದು ದೂರಿದರು.

ಈ ಬಜೆಟ್ ಅಷ್ಟೇ ಅಲ್ಲ ಕಳೆದ ಬಾರಿಯ ಬಜೆಟ್‌ನಲ್ಲೂ ಅವರು ರಾಜ್ಯಕ್ಕೆ ಹೇಳಿಕೊಳ್ಳುವಂತಹ ಒಂದೇ ಒಂದು ಯೋಜನೆಯನ್ನು ನೀಡಿಲ್ಲ. ಅವರು ರಾಜ್ಯಕ್ಕೆ ಕೊಡುಗೆ ಕೊಟ್ಟಿದ್ದರೆ ನಾನು ಸಹ ಅವರನ್ನು ಅಭಿನಂದಿಸುತ್ತೇನೆ ಎಂದು ವ್ಯಂಗ್ಯವಾಗಿ ಹೇಳಿದರು.

ಕೇಂದ್ರದ ವಿತ್ತ ಸಚಿವರು ಸುಖಾ ಸುಮ್ಮನೆ ಕರ್ನಾಟಕ ಸರ್ಕಾರದ ಬಳಿ ಹಣ ಇಲ್ಲ, ಹಾಗೆ– ಹೀಗೆ ಎಂದೆಲ್ಲಾ ಹೇಳುವುದು ಸರಿಯಲ್ಲ. ಭದ್ರಾ ಮೇಲ್ದಂಡೆ ಯೋಜನೆಗೆ 5 ಸಾವಿರ ಕೋಟಿ ರೂ. ಕೊಡುತ್ತೇವೆ ಎಂದಿದ್ದರು ಕೊಟ್ಟಿದ್ದಾರೆಯೇ ಎಂದು ಪ್ರಶ್ನಿಸಿದರು. ರಾಜ್ಯದಲ್ಲಿ ಬಡ ಜನರ ಹಿತವನ್ನು ಗಮನದಲ್ಲಿಟ್ಟುಕೊಂಡು ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನ ಪುಟ 2

# 15 ಸಾವಿರ ಶಾಲಾ ಶಿಕ್ಷಕರ ನೇಮಕಕ್ಕೆ ಕ್ರಮ: ಎಸ್. ಮಧು ಬಂಗಾರಪ್ಪ

**ತುಮಕೂರು:** ರಾಜ್ಯದಲ್ಲಿ ಹೊಸದಾಗಿ 15 ಸಾವಿರ ಶಾಲಾ ಶಿಕ್ಷಕರ ನೇಮಕಕ್ಕೆ ಕ್ರಮ ಕೈಗೊಳ್ಳಲಾಗಿದೆ, ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಶಿಕ್ಷಣ ಇಲಾಖೆಯಲ್ಲಿ ಖಾಲಿಯಿದ್ದ 13,500 ಶಾಲಾ ಶಿಕ್ಷಕರ ನೇಮಕಾತಿ ಮಾಡಲಾಗಿದೆಯಲ್ಲದೆ ಹೊಸದಾಗಿ 15000 ಶಾಲಾ ಶಿಕ್ಷಕರ ನೇಮಕಕ್ಕೆ ಕ್ರಮ ಕೈಗೊಳ್ಳಲಾಗಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಎಸ್. ಮಧು ಬಂಗಾರಪ್ಪ ತಿಳಿಸಿದ್ದಾರೆ. ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ಶನಿವಾರ ಶಿಕ್ಷಣ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯ ನಂತರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಶಿಕ್ಷಕರ ಕೊರತೆ ನೀಗಿ ಸಲು ಹೊಸದಾಗಿ ಶಿಕ್ಷಕರ ನೇಮಕಾತಿಗೆ ಸರ್ಕಾರ ಮುಂದಾಗಿದೆ. ಖಾಲಿಯಿರುವ ಶಿಕ್ಷಕರ ಹುದ್ದೆಗಳನ್ನು ಹಂತ-ಹಂತವಾಗಿ ಭರ್ತಿ ಮಾಡಲು ಕ್ರಮಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು. ಸರ್ಕಾರಿ



ಶಾಲೆಗಳಲ್ಲಿ ಗುಣಾತ್ಮಕ ಶಿಕ್ಷಣ ನೀಡಲು ಮಧ್ಯಾಹ್ನದ ಬಿಸಿಯೂಟ, ಉಚಿತ ಸಮವಸ್ತ್ರ ಪುಸ್ತಕ, ಶೂ, ಮತ್ತಿತರ ಸೌಲಭ್ಯಗಳನ್ನು ನೀಡಲಾಗುತ್ತಿದೆಯಲ್ಲದೆ, ಶಾಲೆಗಳನ್ನು ಕೆಪಿಎಸ್ ಶಾಲೆಗಳನ್ನಾಗಿ ಮೇಲ್ದರ್ಜೆಗೇರಿಸಲಾಗುವುದು. ಇದರಿಂದ ಪೋಷಕರು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗೆ ಸೇರಿಸಲು ಆಸಕ್ತಿ ತೋರುತ್ತಿದ್ದಾರೆ ಪ್ರಸಕ್ತ ವರ್ಷದಲ್ಲಿ ಪದವಿಪೂರ್ವ ಕಾಲೇಜು ಗಳನ್ನೂ ಸಹ ಮೇಲ್ದರ್ಜೆಗೇರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಸಚಿವರು ಹೇಳಿದರು. ಸರ್ಕಾರಿ ಶಾಲೆಗಳಲ್ಲಿ ಕ್ಷೀಣಿಸುತ್ತಿರುವ ಮಕ್ಕಳ ಸಂಖ್ಯೆ ಹೆಚ್ಚಿಸಲು ಹಲವಾರು ಕಾರ್ಯಕ್ರಮಗಳನ್ನು ರೂಪಿಸಿ ಅನುಷ್ಠಾನಕ್ಕೆ ತರಲಾಗಿದೆ. ಶಾಲೆಗಳಲ್ಲಿದ್ದ ನ್ಯೂನ್ಯತೆಗಳನ್ನು ಸರಿಪಡಿಸಲಾಗಿದೆ. ಶಾಲೆಗಳಿಗೆ ಹೆಚ್ಚಿನ ಸಂಖ್ಯೆ ಯಲ್ಲಿ ವಿಜ್ಞಾನ ಲ್ಯಾಬ್‌ಗಳನ್ನು ಮಂಜೂರು ಮಾಡಲಾಗಿದೆ ಎಂದು ತಿಳಿಸಿದರು.

ಸರ್ಕಾರಿ ಶಾಲೆಗಳಲ್ಲಿ ಖಾಲಿಯಿರುವ ಶಿಕ್ಷಕರ ಹುದ್ದೆಗಳಿಗೆ ತಾತ್ಕಾಲಿಕವಾಗಿ ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗುವುದು. ಇದರಿಂದ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚುತ್ತದೆ ಎಂದು ಮಧು ಬಂಗಾರಪ್ಪ ಅವರು ತಿಳಿಸಿದರು. ಇನ್ನೂ ಪದವಿಪೂರ್ವ ಕಾಲೇಜುಗಳಿಗೂ ಅತಿಥಿ ಉಪನ್ಯಾಸಕರ ನೇಮಕಕ್ಕೆ ಕ್ರಮವಹಿಸಲಾಗುವುದು ಎಂದು ಸಚಿವರು ತಿಳಿಸಿದ್ದು, ಜಿಲ್ಲೆಯಲ್ಲಿ ಶತಮಾನ ಕಂಡ ಶಾಲೆಗಳನ್ನೂ ಸಹ ಅಭಿವೃದ್ಧಿಪಡಿಸಲಾಗುವುದು, ವಿಶೇಷ ಅನುದಾನದಡಿ ಶತಮಾನ ಕಂಡ ಶಾಲೆಗಳು ಮುಂದಿನ ಪೀಳಿಗೆಗೆ ಮಾದರಿಯಾಗುವಂತ ಉಳಿಸಿಕೊಂಡು ಅಭಿವೃದ್ಧಿಪಡಿಸಲಾಗುವುದು ಎಂದು ಹೇಳಿದರು. ನಮ್ಮ ಶಾಲೆ ನಮ್ಮ ಜವಾಬ್ದಾರಿ ಕಾರ್ಯ ಕ್ರಮದಡಿ ತಾವು ಓದಿದ ಶಾಲೆಗಳ ಅಭಿವೃದ್ಧಿಗೆ ಹಲವಾರು ದಾನಿಗಳು ಆರ್ಥಿಕ ನೆರವು ನೀಡಲು ಮುಂದೆ ಬರುತ್ತಿದ್ದಾರೆ. ಶಾಲಾ ಪೀಠೋ ಪಕರಣ, ಲೇಖನ ಸಾಮಗ್ರಿ, ಸ್ಮಾರ್ಟ್ ತರಗತಿ ನಿರ್ಮಾಣಕ್ಕೆ ಸಹಾಯಹಸ್ತ ನೀಡುತ್ತಿದ್ದಾರೆ. ಅಲ್ಲದೆ ಈ ಕಾರ್ಯಕ್ರಮಕ್ಕೆ ಸಿಎಸ್‌ಆರ್ ನಿಧಿಯಿಂದ 1591 ಕೋಟಿ ರೂ.ಗಳನ್ನು ಸದ್ವಿನಿಯೋಗಿಸಲಾಗುತ್ತಿದೆ. ಜನಪ್ರತಿನಿಧಿಗಳು, ಅಧಿಕಾರಿಗಳೂ ಸಹ ತಾವು ಓದಿದ ಶಾಲೆಗಳ ಅಭಿವೃದ್ಧಿಗಾಗಿ ಕೊಡುಗೆಯನ್ನು ನೀಡಲು ಸಂಕಲ್ಪ ಮಾಡಬೇಕು ಎಂದು ಸಚಿವ ಎಸ್. ಮಧು ಬಂಗಾರಪ್ಪ ತಿಳಿಸಿದರು.

# ದೆಹಲಿಯಲ್ಲಿ ಯತ್ನಾಳ್ ಪಡೆ: ಇಂದೇ ಬಿಜೆಪಿ ರಾಜ್ಯಾಧ್ಯಕ್ಷ ಘೋಷಣೆ?

ನವದೆಹಲಿ: ಒಡೆದ ಮನೆಯಾಗಿರುವ ಕರ್ನಾಟಕ ಬಿಜೆಪಿಯಲ್ಲಿ ದಿನಕ್ಕೊಂದು ಮಹತ್ವದ ಬೆಳವಣಿಗೆ ನಡೆಯುತ್ತಿದೆ. ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನದ ಬದಲಾವಣೆ ವಿಚಾರವು ಬಣ ಬಡಿದಾಟದ ಕಿಡಿ ಹೊತ್ತಿಸಿದೆ. ಬಿಜೆಪಿ ರಾಜ್ಯಾಧ್ಯಕ್ಷ ಚುನಾವಣೆ ನಡೆಯಲಿರುವ ಹಿನ್ನೆಲೆ ಇಂದೇ ಅಭ್ಯರ್ಥಿ ಹೆಸರು ಘೋಷಣೆಯಾಗುವ ಸಾಧ್ಯತೆ ಇದೆ.

ವಿಜಯೇಂದ್ರ ವಿರುದ್ಧ ಸಮರ ಸಾರಿರುವ ಬಸನಗೌಡ ಪಾಟೀಲ್ ಯತ್ನಾಳ್ ಬಣವು ಹೈಕಮಾಂಡ್ ಭೇಟಿಯಾಗಲು ರಾಷ್ಟ್ರ ರಾಜಧಾನಿಗೆ ಆಗಮಿಸಿದೆ. ಬಸನಗೌಡ ಪಾಟೀಲ್ ಯತ್ನಾಳ್ ಹಾಗೂ ಅವರ ಬಣದಲ್ಲಿರುವ ರಮೇಶ್ ಜಾರಕಿಹೊಳಿ, ಕುಮಾರ್ ಬಂಗಾರಪ್ಪ, ಬಿ.ಪಿ.ಹರೀಶ್, ಜಿ.ಎಂ.ಸಿದ್ದೇಶ್ವರ್ ಸೇರಿದಂತೆ ಹಲವರು ನಗರಕ್ಕೆ ಬಂದಿದ್ದು, ಬಿಜೆಪಿ ಹೈಕಮಾಂಡ್ ಭೇಟಿಯಾಗಲಿದ್ದಾರೆ.

ಈ ನಾಯಕರೆಲ್ಲರೂ ದೆಹಲಿಯಲ್ಲೇ ಕೆಲದಿನ ವಾಸ್ತವ್ಯ ಹೂಡಲಿದ್ದಾರೆ. ಹೈಕಮಾಂಡ್ ನಾಯಕರನ್ನು ಭೇಟಿಯಾಗಿಯೇ ವಾಪಸ್ ಬರಲು ನಿರ್ಧರಿಸಿದ್ದಾರೆ. ಈಗಾಗಲೇ ಜೆ.ಪಿ.ನಡ್ಡಾ ಅವರಿಗೆ ಪತ್ರದ ಮೂಲಕ ವಿಜಯೇಂದ್ರ ಅವರ ಬಗ್ಗೆ ದೂರು ನೀಡಿರುವ ಯತ್ನಾಳ್ ಹಾಗೂ ಹಲವು ನಾಯಕರು ದೆಹಲಿಯಲ್ಲೇ ತಮ್ಮ ಬಣದಿಂದ ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನದ ಅಭ್ಯರ್ಥಿ ಹೆಸರು ಘೋಷಣೆ ಮಾಡಲು ಸಜ್ಜಾಗಿದ್ದಾರೆ.

ಭಾನುವಾರ ಯತ್ನಾಳ್ ಬಣದ ನಾಯಕರು ಮೈಸೂರಿನ ಚಾಮುಂಡಿ ಬೆಟ್ಟಕ್ಕೆ ತೆರಳಿ, ಚಾಮುಂಡೇಶ್ವರಿ ದೇವಿಯ ದರ್ಶನ ಪಡೆದು ಬೆಂಗಳೂರಿನಲ್ಲಿ ಮತ್ತೊಂದು ಸುತ್ತಿನ ಸಭೆ ನಡೆಸಿದ್ದರು ತಮ್ಮ ಬಣದಿಂದ ರಾಜ್ಯಾಧ್ಯಕ್ಷ ಸ್ಥಾನದ ಚುನಾವಣೆಗೆ ಯಾರನ್ನು ಸ್ಪರ್ಧೆಗೆ ಇಳಿಸಬೇಕು ಎಂಬುದು ಇಲ್ಲೇ ನಿರ್ಧಾರವಾಗಲಿದೆ, ಸದ್ಯ ಈ ಬಣದಿಂದ ಬಸನಗೌಡ ಪಾಟೀಲ್ ಯತ್ನಾಳ್ ಹಾಗೂ ಕುಮಾರ್ ಬಂಗಾರಪ್ಪ ಅವರ ಹೆಸರು ಮುನ್ನೆಲೆಯಲ್ಲಿದೆ. ದೆಹಲಿಯಲ್ಲಿ ಅಭ್ಯರ್ಥಿ ಹೆಸರು ಅಂತಿಮವಾಗಲಿದ್ದು, ಇಂದು ಅಥವಾ ನಾಳೆ ಘೋಷಣೆಯಾಗಲಿದೆ ಎನ್ನಲಾಗಿದೆ. ಕರ್ನಾಟಕ ಬಿಜೆಪಿಯಲ್ಲಿ ಪರಿಸ್ಥಿತಿ ಹದಗೆಟ್ಟಿದ್ದು, ಕೂಡಲೇ ವಿಜಯೇಂದ್ರ ಅವರನ್ನು ರಾಜ್ಯಾಧ್ಯಕ್ಷ ಸ್ಥಾನದಿಂದ ಬದಲಾಯಿಸಿ ಎಂದು ಕೇಳಿಕೊಂಡಿದ್ದಾರೆ, ಈ ಬಗ್ಗೆ ಗಂಭೀರವಾಗಿ ಪರಿಗಣಿಸುವುದಾಗಿ ಜೆ.ಪಿ.ನಡ್ಡಾ ಕೂಡ ಹೇಳಿದ್ದಾರೆ ಎನ್ನಲಾಗಿದೆ. ಹೈಮಾಂಡ್ ನಾಯಕರು ಯಾವ ನಿರ್ಧಾರ ತೆಗೆದುಕೊಳ್ಳಲಿದ್ದಾರೆ ಎನ್ನುವುದೇ ಸದ್ಯದ ಕುತೂಹಲ.

# 'ಮೈಸೂರು ಸಬರ್ಬನ್ ಬಸ್ ನಿಲ್ದಾಣ' ಸ್ಥಳಾಂತರಕ್ಕೆ ತೀವ್ರ ವಿರೋಧ

**ಮೈಸೂರು:** ಮೈಸೂರಿನ ನಗರದ ಹೃದಯ ಭಾಗದಲ್ಲಿರುವ ಸಬರ್ಬನ್ ಬಸ್ ನಿಲ್ದಾಣವನ್ನು ಬನ್ನಿ ಮಂಟಪಕ್ಕೆ ಸ್ಥಳಾಂತರ ಮಾಡುವುದಕ್ಕೆ ತೀವ್ರ ವಿರೋಧ ವ್ಯಕ್ತವಾಗಿದೆ.

ಈ ಕುರಿತು ಮೈಸೂರು ಕೆಎಸ್‌ಆರ್ ಟಿ ಸಿ ಸಬರ್ಬನ್ ಬಸ್ ನಿಲ್ದಾಣ ಉಳಿಸಿ ಹೋರಾಟ ಸಮಿತಿ ಅಧ್ಯಕ್ಷ ರವಿಶಾಸ್ತ್ರಿ ನೇತೃತ್ವದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದರು. ಮೈಸೂರಿನ ನಗರಕ್ಕೆ ಒಂದು ರೀತಿ ಕಳಸಪ್ರಾಯದಂತೆ ಹೃದಯ ಭಾಗದಲ್ಲಿರುವ ಬಸ್ ನಿಲ್ದಾಣ ಯಾವುದೇ ಕಾರಣಕ್ಕೂ ಸ್ಥಳಾಂತರ ಮಾಡಬಾರದು. ಈಗಾಗಲೇ ನರ್ಮ್ ಯೋಜನೆಯಡಿ ಸಾತಗಳ್ಳಿ, ನಾಯ್ಡು ನಗರ, ಇಲವಾಲ, ಕುವೆಂಪು ನಗರ ಬಸ್ ಡಿಪೋ ಬಳಿ ನಿರ್ಮಾಣ ಮಾಡಿದ ಬಸ್ ನಿಲ್ದಾಣ ಎಲ್ಲವೂ ಕೂಡ ನಿಷ್ಕ್ರಿಯಗೊಂಡಿದ್ದು, ನೂರಾರು ಕೋಟಿ ವೆಚ್ಚ ಮಾಡಿ ಕಟ್ಟಿ ನಿರುಪಯುಕ್ತವಾಗಿವೆ. ಈಗ ಸಬರ್ಬನ್ ಬಸ್ ನಿಲ್ದಾಣವನ್ನ ಬನ್ನಿಮಂಟಪಕ್ಕೆ ಸ್ಥಳಾಂತರ ಮಾಡಿದರೆ ಪ್ರಯಾಣಿಕರಿಗೆ ತುಂಬಾ ತೊಂದರೆಯಾಗುತ್ತದೆ. ಅದೂ ಕೂಡ ನಿರುಪಯುಕ್ತವಾಗುವ ಸಾಧ್ಯತೆ ಇದೆ. ಸಿಟಿ ಸೆಂಟರ್ನಲ್ಲಿರುವುದರಿಂದ ಎಲ್ಲದಕ್ಕೂ ಅನುಕೂಲವಾಗಿದೆ.

ದಸರಾ ಸಂಧರ್ಭದಲ್ಲಿ ಮಾತ್ರ ಒಂದಷ್ಟು ಜನ ದಟ್ಟಣೆಯಾಗುತ್ತದೆ ಹೊರತು ಉಳಿದ ಸಮಯದಲ್ಲಿ ಏನೂ ಸಮಸ್ಯೆ ಆಗುವುದಿಲ್ಲ. ಬನ್ನಿ ಮಂಟಪಕ್ಕೆ ಸ್ಥಳಾಂತರ ಮಾಡುವ ಬದಲು ಪಕ್ಕದಲ್ಲೇ ಇರುವ ಪೀಪಲ್ಸ್ ಪಾರ್ಕ್ ಮತ್ತು ಸರ್ಕಾರಿ ಗೆಸ್ಟ್ ಹೌಸ್ ಸ್ವಲ್ಪ ಜಾಗವನ್ನು ಪಡೆದು ವಿಸ್ತರಣೆ ಮಾಡಬಹುದು. ಈ ಮೂಲಕ ಯಾವುದೇ ಕಾರಣಕ್ಕೂ ಸ್ಥಳಾಂತರ ಮಾಡಬಾರದು ಎಂದು ಮುಖ್ಯಮಂತ್ರಿಗಳಿಗೂ ಮನವಿ ಮಾಡಿದ್ದೇವೆ. ಸಾರಿಗೆ ಸಚಿವರಿಗೂ ಮನವಿ ಮಾಡಿದ್ದೇವೆ. ಸಿಎಂ ಸಿದ್ದರಾಮಯ್ಯ ನಮ್ಮ ಮನವಿಗೆ ಸ್ಪಂದಿಸುವ ಭರವಸೆ ಇದೆ ಎಂದು ಸಬರ್ಬನ್ ಬಸ್ ನಿಲ್ದಾಣ ಹೋರಾಟ ಸಮಿತಿ ಒತ್ತಾಯಿಸಿತು.ಸುದ್ದಿಗೋಷ್ಠಿಯಲ್ಲಿ ಸಮಿತಿ ಅಧ್ಯಕ್ಷ ರವಿಶಾಸ್ತ್ರಿ, ಉಪಾಧ್ಯಕ್ಷ ನಿಂಗರಾಜು, ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ನಾರಾಯಣಗೌಡ, ಮೈಸೂರು ಸಂಘ ಸಂಸ್ಥೆಗಳ ಒಕ್ಕೂಟ ಅಧ್ಯಕ್ಷ ಬಿಎಸ್ ಪ್ರಶಾಂತ್ ಸೇರಿದಂತೆ ಹಲವರು ಭಾಗಿಯಾಗಿದ್ದರು.

# ದೌರ್ಜನ್ಯ ತಡೆಯಲು ಸುಗ್ರೀವಾಜ್ಞೆ



**ಬೆಂಗಳೂರು:** ಬಡವರ ರಕ್ಷಣೆ ನಮ್ಮ ಸರ್ಕಾರದ ಕರ್ತವ್ಯ. ಸಾಲ ವಸೂಲಿ ಹೆಸರಲ್ಲಿ ಮೈಕ್ರೊಫೈನಾನ್ಸ್ ಗಳಿಂದ ಬಡವರಿಗೆ ಆಗುತ್ತಿರುವ ಕಿರುಕುಳ ತಪ್ಪಿಸಲು ನಮ್ಮ ಸರ್ಕಾರ ಸುಗ್ರೀವಾಜ್ಞೆ ರೂಪಿಸಿದೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.

ಸದಾಶಿವನಗರ ನಿವಾಸದ ಬಳಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಪ್ರತಿಕ್ರಿಯೆ ನೀಡಿದರು.

ಸಾಲ ವಸೂಲಿ ಹೆಸರಲ್ಲಿ ಬಡವರ ಮೇಲೆ ಹೆಚ್ಚುತ್ತಿರುವ ದೌರ್ಜನ್ಯ ಹಾಗೂ ಸುಗ್ರೀವಾಜ್ಞೆ ಬಗ್ಗೆ ಕೇಳಿದಾಗ, "ಸಾಲ ವಸೂಲಿ ಮಾಡಲು ರೌಡಿಗಳ ಮೂಲಕ ಬೆದರಿಸಿ, ಕಾನೂನು ಕೈಗೆ ತೆಗೆದುಕೊಂಡು, ಬಡವರ ಮೇಲೆ ದಬ್ಬಾಳಿಕೆ ನಡೆಸಲು ನಮ್ಮ ಸರ್ಕಾರ ಅವಕಾಶ ನೀಡುವುದಿಲ್ಲ. ಇದನ್ನು ನಿಯಂತ್ರಿಸಲು ಪೊಲೀಸರಿಗೆ ಹೆಚ್ಚಿನ ಅಧಿಕಾರ ನೀಡಲಾಗುವುದು" ಎಂದು ತಿಳಿಸಿದರು.

ಎಚ್ಚರಿಕೆ ನೀಡಿದ್ದರೂ ಕಿರುಕುಳ ಮುಂದುವರಿದಿದೆ ಎಂದು ಕೇಳಿದಾಗ, "ಈಗಾಗಲೇ ಬೆಳಗಾವಿ, ಬೀದರ್, ಮೈಸೂರು, ರಾಮನಗರ ಸೇರಿದಂತೆ ಅನೇಕ ಜಿಲ್ಲೆಗಳಲ್ಲಿ ಇಂತಹ ಪ್ರಕರಣಗಳಲ್ಲಿ ಎಫ್ ಐಆರ್ ದಾಖಲಾಗಿವೆ. ಇಂತಹ ಪ್ರಕರಣಗಳಲ್ಲಿ ಕಠಿಣ ಕ್ರಮ ಕೈಗೊಳ್ಳುವಂತೆ ಮುಖ್ಯಮಂತ್ರಿಗಳು ಹಾಗೂ ಸಹಕಾರ ಸಚಿವರು ಸೂಚಿಸಿದ್ದಾರೆ.

ಇದನ್ನು ನಿಯಂತ್ರಿಸಲು ಸುಗ್ರೀವಾಜ್ಞೆ ಸಿದ್ಧಪಡಿಸಲಾಗಿದ್ದು, ಒಂದೆರಡು ದಿನಗಳಲ್ಲಿ ರಾಜ್ಯಪಾಲರಿಗೆ ಕಳುಹಿಸಲಾಗುವುದು. ಪ್ರತಿ ಜಿಲ್ಲಾ ಕಚೇರಿಯಲ್ಲಿ ಇಂತಹ ಕಿರುಕುಳ ಪ್ರಕರಣಗಳಿಗೆ ದೂರು ನೀಡಲು ಸಹಾಯವಾಣಿ ಆರಂಭಿಸಲಾಗಿದೆ. ಇಂತಹ ಪ್ರಕರಣಗಳು ನಿಮ್ಮ ಗಮನಕ್ಕೆ ಬಂದರೆ ಕೂಡಲೇ ಈ ಸಹಾಯವಾಣಿಗೆ ಸಂಪರ್ಕಿಸಿ, ಬಡವರಿಗೆ ನೆರವಾಗಬೇಕು ಎಂದು ಕಾಂಗ್ರೆಸ್ ಪಕ್ಷ ಹಾಗೂ ಇತರ ಪಕ್ಷಗಳ ಕಾರ್ಯಕರ್ತರಿಗೂ ಮನವಿ ಮಾಡುತ್ತೇನೆ.

ಮುಖ್ಯಮಂತ್ರಿಗಳು ತಮ್ಮ ವಿಶ್ರಾಂತಿ ಬಳಿಕ ಸಧ್ಯದಲ್ಲೇ ಪೊಲೀಸ್ ಅಧಿಕಾರಿಗಳು, ಆಯುಕ್ತರ ಜತೆ ಸಭೆ ನಡೆಸಲಿದ್ದಾರೆ. ನಂತರ ಜಿಲ್ಲಾಧಿಕಾರಿಗಳ ಜತೆ ಪ್ರತ್ಯೇಕ ಸಭೆ ನಡೆಸಲಿದ್ದಾರೆ" ಎಂದು ತಿಳಿಸಿದ್ದಾರೆ.

ಕರ್ನಾಟಕ ದಿವಾಳಿಯಾಗಿದೆ ಎಂಬ ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರ ಹೇಳಿಕೆ ಬಗ್ಗೆ ಕೇಳಿದಾಗ, "ಕೇಂದ್ರ ಸರ್ಕಾರ ಎಷ್ಟು ಲಕ್ಷ ಕೋಟಿಗಟ್ಟಲೆ ಸಾಲ ಮಾಡಿದೆ ಎಂಬುದನ್ನು ಅರಿಯಬೇಕು. ನಮ್ಮ ರಾಜ್ಯ ಸರ್ಕಾರ ಅಷ್ಟು ದೊಡ್ಡ ಪ್ರಮಾಣದ ಸಾಲ ಮಾಡಿಲ್ಲ. ನಾವು ಈ ಗ್ಯಾರಂಟಿ ಯೋಜನೆ ಘೋಷಣೆ ಮಾಡಿದಾಗ ಪ್ರಧಾನಮಂತ್ರಿಗಳು ಕೂಡ ನಮ್ಮ ರಾಜ್ಯ ದಿವಾಳಿಯಾಗಲಿದೆ ಎಂದು ಹೇಳಿದ್ದರು. ನಂತರ ನಡೆದ ಎಲ್ಲಾ ರಾಜ್ಯಗಳ ಚುನಾವಣೆಯಲ್ಲಿ ಅವರು ಗ್ಯಾರಂಟಿ ಯೋಜನೆ ನಕಲು ಮಾಡಿ ಯೋಜನೆಗಳನ್ನು ಘೋಷಿಸಿದ್ದಾರೆ. ನಮ್ಮ ಸರ್ಕಾರ ಬೆಲೆ ಏರಿಕೆ ಹಾಗೂ ನಿರುದ್ಯೋಗ ಸಮಸ್ಯೆಯಿಂದ ಬಳಲಿದ್ದ ಜನಸಾಮಾನ್ಯರಿಗೆ ನೆರವಾಗಲು ಗ್ಯಾರಂಟಿ ಯೋಜನೆ ಘೋಷಣೆ ಮಾಡಿದೆಯೇ ಹೊರತು, ಮತಕ್ಕಾಗಿ ಅಲ್ಲ. ನಮ್ಮ ಸರ್ಕಾರದ ಆರ್ಥಿಕ ಪರಿಸ್ಥಿತಿ ಹಾಗೂ ದಿವಾಳಿ ವಿಚಾರ ಪಕ್ಕಕ್ಕಿರಲಿ. ಕೇಂದ್ರ ಸರ್ಕಾರದ ಬಜೆಟ್ ನಲ್ಲಿ ಕರ್ನಾಟಕ ರಾಜ್ಯಕ್ಕೆ ಅವರು ಯಾವ ಕೊಡುಗೆ ನೀಡಿದ್ದಾರೆ ಎಂದು ಮೊದಲು ಪಟ್ಟಿ ನೀಡಲಿ" ಎಂದು ತಿರುಗೇಟು ನೀಡಿದರು.

ಮಾತು ಕೊಟ್ಟಂತೆ ನಡೆಯಬೇಕು

ಭದ್ರಾ ಮೇಲ್ದಂಡೆ ಯೋಜನೆಗೆ ಘೋಷಿಸಿದ್ದ ಅನುದಾನ ನೀಡಲಿಲ್ಲ ಎಂದು ಕೇಳಿದಾಗ, "ನಾಲಿಗೆಯಿಂದ ಒಂದು ಮಾತು ಬಂದರೆ ಅದನ್ನು ಉಳಿಸಿಕೊಂಡು, ಅದರಂತೆ ನಡೆಯಬೇಕು. ಇದನ್ನು ನೋಡಿದರೆ ನನಗೆ ನಾಚಿಕೆಯಾಗುತ್ತದೆ. ಅವರು ಮೊದಲು ತಮ್ಮ ಮಾತನ್ನು ಉಳಿಸಿಕೊಳ್ಳಲಿ" ಎಂದು ತಿಳಿಸಿದರು.

**ಯಾವ ಶಾಸಕರೂ ಸಂಪರ್ಕಿಸಿಲ್ಲ:**

ಜೆಡಿಎಸ್ ಶಾಸಕರು ನಿಮ್ಮ ಸಂಪರ್ಕದಲ್ಲಿ ಇದ್ದಾರಾ ಎಂದು ಕೇಳಿದಾಗ, "ನಾನು ಜೆಡಿಎಸ್ ಶಾಸಕರ ವಿಚಾರವಾಗಿ ಮಾತನಾಡಿಲ್ಲ, ಜೆಡಿಎಸ್ ಕಾರ್ಯಕರ್ತರು ತಮ್ಮ ಭವಿಷ್ಯವನ್ನು ತಾವು ನೋಡಿಕೊಳ್ಳಬೇಕು ಎಂದು ಕರೆ ನೀಡಿದ್ದೇನೆ. ಆ ಕಾರ್ಯಕರ್ತರು ಕೂಡ ಎಷ್ಟು ದಿನ ಎಂದು ಕಾಯಲು ಸಾಧ್ಯ? ಅವರಿಗೂ ಜಾತ್ಯಾತೀತ ಸಿದ್ಧಾಂತದ ರಾಷ್ಟ್ರೀಯ ಪಕ್ಷದ ಅಗತ್ಯವಿದೆ. ಅನೇಕ ಕಾರ್ಯಕರ್ತರು ನಮ್ಮ ಪಕ್ಷ ಸೇರಲು ಮುಂದಾಗಿದ್ದಾರೆ" ಎಂದು ತಿಳಿಸಿದರು.

ಶಾಸಕರು ನಿಮ್ಮ ಪಕ್ಷ ಸೇರಲು ಮುಂದೆ ಬಂದರೆ ಎಂದು ಕೇಳಿದಾಗ, "ಆ ವಿಚಾರ ಮುಂದೆ ನೋಡೋಣ. ನಾನು ಅದರ ಬಗ್ಗೆ ಆಲೋಚನೆ ಮಾಡಿಲ್ಲ. ಯಾವ ಶಾಸಕರು ನಮ್ಮ ಸಂಪರ್ಕದಲ್ಲಿ ಇಲ್ಲ. ನಾನು ಯಾರ ಜತೆಗೂ ಮಾತನಾಡಿಲ್ಲ. ಇದೆಲ್ಲವೂ ಸುಳ್ಳು ಸುದ್ದಿ" ಎಂದು ತಿಳಿಸಿದರು.

ಮೊದಲ ಪುಟದಿಂದ

## ಆದ್ಯತೆ ಮೇರೆಗೆ ನಿವೇಶನ

ಭೇಟಿ ಮಾಡಲು ಹೋದಾಗ ಅವರು ತಮಿಳುನಾಡಿನ ಮಾಧ್ಯಮಗಳ ಸ್ನೇಹಿತರ ಬಗ್ಗೆ ನನ್ನ ಜತೆ ಚರ್ಚೆ ಮಾಡಿದ್ದರು. ಜಯಲಲಿತಾ ಅವರು ಮುಖ್ಯಮಂತ್ರಿಯಾಗಿದ್ದಾಗ ಅವರು ಮೂರು ತಿಂಗಳ ಕಾಲ ಊಟಿ, ಕೊಡೈಕೆನಾಲ್ ಗೆ ಹೋಗಿದ್ದರು. ಆಗ ಸ್ವತಃ ರಾಜ್ಯಪಾಲರೇ ಇದನ್ನು ಪ್ರಶ್ನಿಸಿ ಮಾಧ್ಯಮಗಳಲ್ಲಿ ಬರೆಯಿರಿ ಎಂದು ಹೇಳಿದರೂ ಮಾಧ್ಯಮಗಳು ಜಯಲಲಿತಾ ಅವರನ್ನು ಪ್ರಶ್ನೆ ಮಾಡಿರಲಿಲ್ಲವಂತೆ" ಎಂದು ತಿಳಿಸಿದರು. "ಕರ್ನಾಟಕ ರಾಜ್ಯದಲ್ಲಿ ಮಾಧ್ಯಮಗಳಿಗೆ ಇರುವಷ್ಟು ಸ್ವಾತಂತ್ರ್ಯ ದೇಶದ ಬೇರೆ ಯಾವುದೇ ರಾಜ್ಯಗಳಲ್ಲಿ ಇಲ್ಲ. ದಿನಬೆಳಗಾದರೆ ನೀವು ನಮಗೆ ಹೊಡೆಯುತ್ತಲೇ ಇರುತ್ತೀರಿ, ಟೀಕಿಸಿ ನಮ್ಮನ್ನು ಹಳ್ಳಕ್ಕೆ ಹಾಕುತ್ತಲೇ ಇರುತ್ತೀರಿ, ನಿಮಗೆ ಸಂತೋಷವಾದರೆ ನಮ್ಮನ್ನು ಮೇಲಕ್ಕೆ ಏರಿಸುತ್ತೀರಿ. ನಿಮ್ಮನ್ನು ಬಿಟ್ಟು ನಾವು ಬದುಕಲು ಸಾಧ್ಯವಿಲ್ಲ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮಾಧ್ಯಮ ನಾಲ್ಕನೇ ಅಂಗ. ಸರ್ಕಾರ, ಅಧಿಕಾರಿಗಳು, ನ್ಯಾಯಾಲಯ ತಪ್ಪು ಮಾಡಿದರೆ ತಿದ್ದುವ ಕೆಲಸ ಮಾಡುವುದು ಮಾಧ್ಯಮ. ಸಂವಿಧಾನ ಜಾರಿಯಾದಾಗಿನಿಂದಲೇ ನಮ್ಮನ್ನು ತಿದ್ದುವ, ಮಾರ್ಗದರ್ಶನ ಹಕ್ಕನ್ನು ನಿಮಗೆ ನೀಡಲಾಗಿದೆ" ಎಂದರು.

**ನಿಂತುಹೋಗಿದ್ದ ಪ್ರಶಸ್ತಿಗಳಿಗೆ ಮರುಜೀವ:** "ಈ ಹಿಂದಿನ ಸರ್ಕಾರ ಪ್ರತಿಷ್ಠಿತ ಪ್ರಶಸ್ತಿ, ಮೊಹರೆ ಹನುಮಂತರಾಯ ಪ್ರಶಸ್ತಿ, ಪರಿಸರ ಪತ್ರಿಕಾ ಪರಿಷತ್ ನೀಡುವ ಪ್ರಶಸ್ತಿಯನ್ನು ಅನೇಕ ವರ್ಷಗಳಿಂದ ನೀಡಿಲ್ಲ. ಅವರನ್ನು ಟೀಕಿಸಿ ಯಾವುದೇ ಪ್ರಯೋಜನವಿಲ್ಲ. ನಮ್ಮ ಸರ್ಕಾರ ಮತ್ತೇ ಇದಕ್ಕೆ ಜೀವ ನೀಡಿದೆ. ರಘುರಾಮ್ ಶೆಟ್ಟಿ ಅವರ ಹೆಸರಿನಲ್ಲಿ ಪ್ರಶಸ್ತಿ ನೀಡಬೇಕು ಎಂಬ ಬೇಡಿಕೆ ಬಗ್ಗೆ ಚರ್ಚೆ ನಡೆಯುತ್ತಿದೆ. ಬೆಲೆ ಏರಿಕೆ ಹಿನ್ನೆಲೆಯಲ್ಲಿ ಪ್ರಶಸ್ತಿ ಮೊತ್ತವನ್ನು ಹೆಚ್ಚಳ ಮಾಡಲು ಸರ್ಕಾರ ತೀರ್ಮಾನಿಸಿದೆ" ಎಂದು ಹೇಳಿದರು."ನೀವು ಸತ್ಯವನ್ನು ಬರೆಯಬಹುದು, ಸತ್ಯವನ್ನು ನುಡಿಯಬಹುದು, ಸತ್ಯಕ್ಕೆ ಗೌರವಿಸುವುದು ಪತ್ರಕರ್ತರು ಹಾಗೂ ರಾಜಕಾರಣಿಗಳ ಕರ್ತವ್ಯ. "ಜನಸೇವೆ ಮತ್ತು ದೇಶಸೇವೆ ಪತ್ರಿಕೋದ್ಯಮದ ಏಕೈಕ ಗುರಿ ಎಂಬ ಮಹಾತ್ಮಾ ಗಾಂಧೀಜಿ ಅವರ ಹೇಳಿಕೆಯನ್ನು ಅಕಾಡೆಮಿಯ ಅಧ್ಯಕ್ಷರು ತಿಳಿಸಿದರು. ನಮ್ಮ ಸರ್ಕಾರ ಕೂಡ ಮಹಾತ್ಮಾ ಗಾಂಧೀಜಿ ಅವರು ಸ್ವಾತಂತ್ರ್ಯ ಹೋರಾಟದ ನೇತೃತ್ವ ವಹಿಸಿದ ಬೆಳಗಾವಿ ಅಧಿವೇಶನದ ಶತಮಾನೋತ್ಸವ ಕಾರ್ಯಕ್ರಮವನ್ನು ನಡೆಸಿದ್ದೇವೆ. ಇಂದಿನ ಕಾರ್ಯಕ್ರಮದಲ್ಲಿ ಪತ್ರಕರ್ತರ ಜತೆಗೆ ಅವರ ಕುಟುಂಬದವರನ್ನು ಭೇಟಿ ಮಾಡುತ್ತಿರುವುದು ಸಂತೋಷದ ವಿಚಾರ" ಎಂದರು. "ಮಾಧ್ಯಮಗಳಿಗೆ ಸಂಪೂರ್ಣ ಸ್ವಾತಂತ್ರ್ಯ ನೀಡಲಾಗಿದೆ. ಸರ್ಕಾರ ಬದಲಿಸುವ, ನಾಯಕರನ್ನು ಬೆಳೆಸುವ ಮಾಧ್ಯಮಗಳ ಶಕ್ತಿಯನ್ನು ನಾವು ನೋಡಿದ್ದೇವೆ. ಆದರೆ ಸುಳ್ಳು ಸುದ್ದಿ ಎಂಬುದನ್ನು ನೀವು ಯಾವ ರೀತಿ ನಿಯಂತ್ರಿಸುತ್ತೀರಿ ಎಂಬುದು ಮುಖ್ಯ. ಇತ್ತೀಚೆಗೆ ಮಾಧ್ಯಮಗಳ ಪರಿಸ್ಥಿತಿ ನೋಡಿ ನನ್ನ ಮಗಳು ನಮ್ಮ ಶಿಕ್ಷಣ ಸಂಸ್ಥೆಯಲ್ಲೇ ಮಾಧ್ಯಮ ನಿರ್ವಹಣೆ ಕೋರ್ಸು ಆರಂಭಿಸಬೇಕು ಎಂದು ಚರ್ಚೆ ಮಾಡಿದ್ದಾಳೆ. ಈ ವರ್ಷದಿಂದ ನಮ್ಮ ಸಂಸ್ಥೆಯಲ್ಲೂ ಸಮೂಹ ಸಂವಹನ ಪತ್ರಿಕೋದ್ಯಮ ಕೋರ್ಸ್ ಆರಂಭಿಸಲಾಗುವುದು" ಎಂದರು."ಪತ್ರಕರ್ತರು ಬಲಿಷ್ಠವಾಗಬೇಕು. ನೀವು ಬಲಿಷ್ಠವಾದರೆ ನಾವು ಬಲಿಷ್ಠರಾಗುತ್ತೇವೆ. ನಾವು ಬಲಿಷ್ಠವಾಗಿದ್ದರೆ, ನೀವು ಬಲಿಷ್ಠವಾಗಿರುತ್ತೀರಿ. ನಾವು ರಾಜ್ಯದ ಆರ್ಥಿಕ ಪರಿಸ್ಥಿತಿ ನೋಡಿಕೊಂಡೆ ಐದು ಗ್ಯಾರಂಟಿ ಯೋಜನೆ ನೀಡಿದ್ದೇವೆ. ಬೆಲೆ ಏರಿಕೆ ಮಧ್ಯೆ ಜನರಿಗೆ ನೆರವಾಗಲು ದಿಟ್ಟ ತೀರ್ಮಾನ ಮಾಡಿ ₹56 ಸಾವಿರ ಕೋಟಿ ನೀಡುತ್ತಿದ್ದೇವೆ. ನಮ್ಮ ಯೋಜನೆ ನೋಡಿ ಲೇವಡಿ, ಟೀಕೆ ಮಾಡಿದರು. ಮಹಿಳೆಯರಿಗೆ ಆರ್ಥಿಕ ಶಕ್ತಿ ತುಂಬಲು ಕಾರ್ಯಕ್ರಮ ರೂಪಿಸಿದ್ದೇವೆ. ವಿರೋಧ ಪಕ್ಷದವರು ನಮ್ಮ ಯೋಜನೆ ಟೀಕಿಸಿ, ಬೇರೆ ರಾಜ್ಯಗಳಲ್ಲಿ ನಮಗಿಂತ ಮೊದಲೇ ಇಂತಹ ಯೋಜನೆ ಘೋಷಿಸುತ್ತಿದ್ದಾರೆ" ಎಂದು ಹೇಳಿದರು."ಜನರ ಬದುಕಿನಲ್ಲಿ ಸಹಾಯ ಮಾಡಿ, ಸಾಮಾಜಿಕ ಭದ್ರತೆ ಕಾಪಾಡಲು ನಮ್ಮ ಸರ್ಕಾರ ಮುಂದಾಗಿದೆ. ಮಾಧ್ಯಮಗಳು ಕರ್ನಾಟಕದ ಸ್ವಾಭಿಮಾನಕ್ಕೆ ಧಕ್ಕೆ ಬಾರದ ರೀತಿ ಕಾರ್ಯ ನಿರ್ವಹಿಸಬೇಕು. ಕರ್ನಾಟಕ ಹಾಗೂ ಬೆಂಗಳೂರಿಗೆ ವಿಶೇಷವಾದ ಶಕ್ತಿ ಇದ್ದು, ಉತ್ತಮವಾದ ಶಿಕ್ಷಣ, ಮಾನವ ಸಪನ್ಮೂಲದ ಗುಣಮಟ್ಟ ಇಲ್ಲಿದೆ. ಬೇರೆ ರಾಜ್ಯದ ಪ್ರತ್ರಕರ್ತರಿಗಿಂತ ನೀವು ಯಾವುದರಲ್ಲೂ ಕಡಿಮೆ ಇಲ್ಲ" ಎಂದರು. "ಮಾಧ್ಯಮಗಳು ಈಗ ಪ್ರಾದೇಶಿಕವಾಗಿ ವಿಭಾಗಗಳಿವೆ. ಗ್ರಾಮೀಣ ಪ್ರದೇಶಗಳಲ್ಲೂ ಹೊಸ ಮಾಧ್ಯಮಗಳು ಶಕ್ತಿಶಾಲಿಯಾಗಿ ಬೆಳೆಯುತ್ತಿವೆ. ಹಳ್ಳಿಯಿಂದ ಬಂದ ನಾವು ಬೆಂಗಳೂರಿನಲ್ಲಿ ರಾಜಕಾರಣ ಮಾಡುವ ರೀತಿ, ನೀವು ಎಲ್ಲಿಂದಾದರೂ ಬಂದರೂ ನಿಮ್ಮ ಪ್ರತಿಭೆ ಮೂಲಕ ಯಾವ ಹಂತಕ್ಕೆ ಬೇಕಾದರೂ ಬೆಳೆಯಬಹುದು. ನಿಮ್ಮೆಲ್ಲರಿಗೂ ಶುಭವಾಗಲಿ, ನಿಮ್ಮ ಆಶೀರ್ವಾದ ನನ್ನ ಮೇಲೆ, ನಮ್ಮ ಸರ್ಕಾರದ ಮೇಲೆ ಇರಲಿ" ಎಂದು ತಿಳಿಸಿದರು

## ನಾನೇ ರಾಜ್ಯಾಧ್ಯಕ್ಷ

ಅಧ್ಯಕ್ಷನಾಗಿ ಕೆಲಸ ಮಾಡಿದ ರೀತಿ ಕಾರ್ಯಕರ್ತರಿಗೆ ಗೊತ್ತಿದೆ. ನಾನು ಮತ್ತೆ ಬಿಜೆಪಿ ರಾಜ್ಯಾಧ್ಯಕ್ಷನಾಗುತ್ತೇನೆಂಬ ಪೂರ್ಣ ವಿಶ್ವಾಸವಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆಶಯ ವ್ಯಕ್ತಪಡಿಸಿದರು. ಶಿವಮೊಗ್ಗದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಜಿಲ್ಲಾಧ್ಯಕ್ಷ ಚುನಾವಣೆಗೂ ಪೈಪೋಟಿ ಇತ್ತು. ರಾಜ್ಯಾಧ್ಯಕ್ಷ ಸ್ಥಾನಕ್ಕೂ ಅದೇರೀತಿ ಪೈಪೋಟಿ ಇದೆ. ಎಲ್ಲವನ್ನು ಕೇಂದ್ರದ ವರಿಷ್ಠರು ಗಮನಿಸುತ್ತಿದ್ದಾರೆ.ಎಲ್ಲವೂ ಒಳ್ಳೆಯದಾಗುತ್ತದೆ ಎಂಬ ವಿಶ್ವಾಸವಿದೆ ಎಂದರು.

ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹೇಳಿಕೆಯಿಂದ ಪಕ್ಷಕ್ಕೆ ಡ್ಯಾಮೇಜ್ ಆಗಿದೆ ಎಂಬ ಸದಾನಂದಗೌಡ ಹೇಳಿಕೆ ವಿಚಾರವಾಗಿ ಮಾತನಾಡಿದ ಅವರು, ಈಗಾಗಲೇ ಏನೇನು ಡ್ಯಾಮೇಜ್ ಆಗಬೇಕು ಎಲ್ಲವೂ ಆಗಿ ಹೋಗಿದೆ. ಒಂದು ವಾರದಲ್ಲಿ ಯಾರು ಅಧ್ಯಕ್ಷರಾಗುತ್ತಾರೆ ಎಂಬ ಉತ್ತರ ಸಿಗುತ್ತದೆ. ಅದಾದನಂತರ ಎಲ್ಲವೂ ಸರಿಯಾಗಲಿದೆ ಎಂದು ಹೇಳಿದರು. ಕಳೆದ ವರ್ಷದಿಂದ ನಾನು ಯಾರು ಏನೇ ಹೇಳಿದರೂ ಯಾರ ವಿರುದ್ಧವೂ ಬಹಿರಂಗ ಹೇಳಿಕೆ ಕೊಟ್ಟಿಲ್ಲ. ಪಕ್ಷದ ವಿರುದ್ಧವೂ ಹೇಳಿಕೆ ಕೊಟ್ಟಿಲ್ಲ. ರಾಜ್ಯದ ಅಧ್ಯಕ್ಷನಾಗಿ ಕರ್ತವ್ಯದ ಅರಿವು ನನಗಿದೆ. ಬಹಳ ದೊಡ್ಡ ಜವಾಬ್ದಾರಿಯನ್ನು ಕಳೆದೊಂದು ವರ್ಷದಿಂದ ಯಶಸ್ವಿಯಾಗಿ ನಡೆಸಿಕೊಂಡು ಬಂದಿದ್ದೇನೆ. 8-10 ದಿನಗಳಲ್ಲಿ ರಾಜ್ಯದ ಅಧ್ಯಕ್ಷ ಯಾರೆಂಬುದಕ್ಕೆ ಉತ್ತರ ಸಿಗಲಿದೆ. ಬಳಿಕ ಎಲ್ಲ ಸಮಸ್ಯೆಗಳು ಬಗೆ ಹರಿಯಲಿವೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

## ಮಹಾಕುಂಭ ಕಾಲ್ತುಳಿತ;

ರಾಜ್ಯ ಸಚಿವರು ನೀಡಿದ್ದ ತಾರತಮ್ಯ ಮತ್ತು ಜಾತಿವಾದಿ ಹೇಳಿಕೆಗಳಿಗೆ' ಸಂಬಂಧಿಸಿದ ವಿಚಾರಗಳ ಚರ್ಚೆಗೆ ಒತ್ತಾಯಿಸಲಾಗಿದೆ.

ನಿಯಮ 267ರ ಅಡಿಯಲ್ಲಿ ಸಲ್ಲಿಕೆಯಾಗಿದ್ದ ನೋಟಿಸ್‌ಗಳಿಗೆ ಸಂಬಂಧಿಸಿದಂತೆ ಸಭಾಪತಿ ಧನ್ಕರ್ ಅವರು ಚರ್ಚೆಗೆ ಅವಕಾಶ ನೀಡಲಿಲ್ಲ. ಬಳಿಕ ನಿಗದಿಯಂತೆ ಶೂನ್ಯವೇಳೆ ಮುಂದುವರಿಯಿತು. ಚರ್ಚೆಗೆ ಅವಕಾಶ ನೀಡದಿದ್ದರಿಂದ ಕಾಂಗ್ರೆಸ್, ಎಸ್‌ಪಿ, ಡಿಎಂಕೆ, ಎಎಪಿ, ಆರ್‌ಜೆಡಿ, ಸಿಪಿಐ ಮತ್ತು ಸಿಪಿಎಂ ಸೇರಿದಂತೆ ವಿರೋಧ ಪಕ್ಷಗಳ ಸಂಸದರು ತೀವ್ರ ಪ್ರತಿಭಟನೆ ನಡೆಸಿದರು. ಮೌನಿ ಅಮಾವಾಸ್ಯೆಯಂದು ಮಹಾಕುಂಭದಲ್ಲಿ ನಡೆದ ಕಾಲ್ತುಳಿತದಲ್ಲಿ ಕನಿಷ್ಠ 30 ಜನರು ಸಾವಿಗೀಡಾಗಿದ್ದು, ಅದನ್ನು ಎತ್ತಿ ತೋರಿಸುವ ಪ್ರಯತ್ನದಲ್ಲಿ ಹಲವಾರು ಸಂಸದರು ಘೋಷಣೆಗಳನ್ನು ಕೂಗಿದರು. ನಂತರ ಸದಸ್ಯರು ಸಭಾತ್ಯಾಗ ಮಾಡಿದರು. ಇದಕ್ಕೂ ಮುನ್ನ ಬೆಳಿಗ್ಗೆ ಮಾತನಾಡಿದ ಧನ್ಕರ್, ರಾಜ್ಯಸಭೆಯು ದೇಶದ ಸಾಂವಿಧಾನಿಕ ಪ್ರಯಾಣದಲ್ಲಿ ಒಂದು ಮೈಲಿಗಲ್ಲು ಮತ್ತು ಸದನದಲ್ಲಿ ತಮ್ಮ ನಡವಳಿಕೆಗಳು ಅನುಕರಣೀಯವಾಗಿರುವಂತೆ ನೋಡಿಕೊಳ್ಳಬೇಕು ಎಂದು ಸಂಸದರಿಗೆ ಮನವಿ ಮಾಡಿದರು.

## ರಾಜಕೀಯ ಪ್ರೇರಿತ

ನೇಮಕಾತಿ ಹಗರಣದಲ್ಲಿ ಮಾಗಡಿ ಮೂಲದವರು ಅತಿ ಹೆಚ್ಚಾಗಿ ಮತ್ತು ಸಂಬಂಧಿಕರು ಆಯ್ಕೆ ಆಗಿದ್ದಾರೆ. ಇದನ್ನೆಲ್ಲ ಅಶ್ವಥ್ ನಾರಾಯಣ ಮಾಡಿಸಿದ್ದಾರೆ ಎಂದು ಕಾಂಗ್ರೆಸ್ ಆರೋಪ ಮಾಡಿತ್ತು. ಕಾಂಗ್ರೆಸ್ ಸರ್ಕಾರ ಪಿಎಸ್‌ಐ ಹಗರಣದ ಮರುತನಿಖೆಗೆ ಆದೇಶಿಸಿತ್ತು. ಈ ಬಗ್ಗೆ ತನಿಖೆ ನಡೆಸುತ್ತಿರುವ ಎಸ್‌ಐಟಿ ಅಶ್ವಥ್ ನಾರಾಯಣ ಅವರಿಗೆ ನೋಟಿಸ್ ನೀಡಿ ವಿಚಾರಣೆ ನಡೆಸಿದೆ.

## ಕಾರು ಪಲ್ಟಿ: ಸಾವು

ಓರ್ವ ಸಾವನ್ನಪ್ಪಿದ್ದರೇ ಓರ್ವನನ್ನ ರಕ್ಷಣೆ ಮಾಡಲಾಗಿದೆ. ಮತ್ತಿಬ್ಬರು ನಾಪತ್ತೆಯಾಗಿದ್ದು ಶೋಧಕಾರ್ಯ ನಡೆಸಲಾಗುತ್ತಿದೆ. ನಾಲೆಗೆ ತಡೆಗೋಡೆ ಇಲ್ಲದ ಕಾರಣ ಈ ಅವಘಡ ಸಂಭವಿಸಿದೆ ಎನ್ನಲಾಗಿದ್ದು, ಸ್ಥಳಕ್ಕೆ ಪೊಲೀಸರು ಭೇಟಿ ನೀಡಿದ್ದು ಕಾರನ್ನ ಮೇಲೆತ್ತಲು ಹರಸಾಹಸಪಡುತ್ತಿದ್ದಾರೆ.

ಮೊದಲ ಪುಟದಿಂದ

## ನಿರ್ಮಾಲ ಹೇಳಿಕೆಗೆ ಪರಂ ಕಿಡಿ

ಮಾಡಿದ್ದೇವೆ. ಗ್ಯಾರಂಟಿ ಯೋಜನೆಗಳಿಂದ ಕರ್ನಾಟಕ ಸರ್ಕಾದರಲ್ಲಿ ಹಣವಿಲ್ಲ ದಿವಾಳಿಯಾಗಿದೆ ಎಂದು ಹೇಳುವುದು ಸರಿಯಲ್ಲ ಎಂದರು.

ರಾಜ್ಯದಿಂದ ರಾಜ್ಯಸಭೆಗೆ ಹೋಗಿರುವ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ರಾಜ್ಯಕ್ಕೆ ಬಜೆಟ್‌ನಲ್ಲಿ ಕಳೆದ ಬಾರಿಗಿಂತ ಕಡಿಮೆ ಹಣ ನೀಡಿದ್ದಾರೆ. ಅವರಿಗೆ ನಾಚಿಕೆಯಾಗಬೇಕು ಎಂದು ಹರಿಹಾಯ್ದರು.

ನೀತಿ ಆಯೋಗ ಬಿಡುಗಡೆ ಮಾಡಿರುವ ಅಂಕಿ ಅಂಶದಲ್ಲಿ ಕರ್ನಾಟಕ 10ನೇ ಸ್ಥಾನಕ್ಕೆ ಇಳಿದಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ನೀತಿ ಆಯೋಗದವರು ವರ್ಷಕ್ಕೆ ಒಂದೊಂದು ರೀತಿಯಲ್ಲಿ ಅಳತೆಗೋಲು ಇಟ್ಟುಕೊಳ್ಳುತ್ತಾರೆ. ಯಾವ ಉದ್ದೇಶದಿಂದ ಯಾವ ಮಾನದಂಡದಿಂದ ಆ ರೀತಿ ಹೇಳಿದ್ದಾರೋ ಗೊತ್ತಿಲ್ಲ ಎಂದರು. ಪಿಎಸ್‌ಐ ಅಕ್ರಮದ ತನಿಖೆ ಸಂಬಂಧ ವಿಶೇಷ ಪೊಲೀಸ್ ತಂಡ ಮಾಜಿ ಸಚಿವ ಡಾ. ಸಿ.ಎನ್. ಅಶ್ವತ್ಥ್‌ನಾರಾಯಣ ಅವರನ್ನು ಯಾವ ವಿಚಾರಕ್ಕೆ ವಿಚಾರಣೆಗೆ ಕರೆದಿದ್ದಾರೋ ನನಗೆ ಗೊತ್ತಿಲ್ಲ. ಎಸ್‌ಐಟಿ ತನಿಖೆ ಇನ್ನೂ ಮುಗಿದಿಲ್ಲ ಎಂದ ಅವರು, ತನಿಖಾ ಸಂದರ್ಭದಲ್ಲಿ ಸಿಕ್ಕ ಕೆಲ ಮಾಹಿತಿ ಆಧರಿಸಿ ಎಸ್‌ಐಟಿ ಅವರು ಸಂಬಂಧಿಸಿದವರನ್ನು ವಿಚಾರಣೆಗೆ ಕರೆಯುತ್ತಾರೆ. ಅದರಲ್ಲಿ ತಪ್ಪೇನಿಲ್ಲ ಎಂದು ಅವರು ಹೇಳಿದರು.

ಮುಂದೆ ಡಿ.ಕೆ. ಶಿವಕುಮಾರ್ ಮುಖ್ಯಮಂತ್ರಿ ಆಗುತ್ತಾರೆ ಎಂದು ಮಾಗಡಿ ಶಾಸಕ ಬಾಲಕೃಷ್ಣ ಹೇಳಿರುವ ಹೇಳಿಕೆ ಬಗ್ಗೆ ಪ್ರತಿಕ್ರಿಯಿಸಿದ ಅವರು, ಎಲ್ಲವನ್ನು ಹೈಕಮಾಂಡ್ ಗಮನಿಸುತ್ತದೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನಖರ್ಗೆ ಅವರ ಮಾತಿಗೆ ಎಲ್ಲರೂ ಗೌರವ ಕೊಡಬೇಕು ಎಂದಷ್ಟೇ ಹೇಳುತ್ತೇನೆ ಎಂದರು.

ಬೇರೆ ಪಕ್ಷದ ಶಾಸಕರನ್ನು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕಾಂಗ್ರೆಸ್‌ಗೆ ಸೇರುವಂತೆ ಆಹ್ವಾನ ನೀಡಿದ್ದಾರೆ ಎಂಬ ಹೇಳಿಕೆ ಬಗ್ಗೆ ಪ್ರತಿಕ್ರಿಯಿಸಿದ ಅವರು, ರಾಜ್ಯ ಕಾಂಗ್ರೆಸ್ ಅಧ್ಯಕ್ಷರು ಹೇಳಿದ ಮೇಲೆ ಅದಕ್ಕೆ ಅರ್ಥ ಇರುತ್ತದೆ. ನಮ್ಮ ಪಕ್ಷದ ಸಿದ್ಧಾಂತಗಳನ್ನು ಒಪ್ಪಿ ಬರುವವರನ್ನು ಸೇರಿಸಿಕೊಳ್ಳಲು ಯಾರ ವಿರೋಧವೂ ಇಲ್ಲ ಎಂದು ಅವರು ಹೇಳಿದರು.

## ಮತ್ತೊಂದು ವಿಮಾನ ನಿಲ್ದಾಣಕ್ಕೆ ಮನವಿ

ವಿರೋಧ ವ್ಯಕ್ತಪಡಿಸುತ್ತಿರುವುದು ಸರಿಯಲ್ಲ. ರಾಜ್ಯದ ಜನರ ಹಿತದೃಷ್ಟಿಯಿಂದ ಬೆಂಗಳೂರಿನ ವಿಮಾನ ನಿಲ್ದಾಣದಲ್ಲಿ ಪ್ರಯಾಣಿಕರ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ. ನನ್ನ ಅವಧಿಯಲ್ಲಿ ಮಂಜೂರಾಗಿದ್ದ, ಬೆಂಗಳೂರಿನ ದೇವನಹಳ್ಳಿಯ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಮೇಲೆ ಒತ್ತಡ ಹೆಚ್ಚಾಗಿ ಮತ್ತೊಂದು ವಿಮಾನ ನಿಲ್ದಾಣ ಅವಶ್ಯಕತೆ ಇದೆ. ಈ ಸಮಸ್ಯೆಯನ್ನು ಪರಿಹರಿಸುವಂತೆ ಕೇಂದ್ರ ವಿಮಾನಯಾನ ಸಚಿವರನ್ನು ಹೆಚ್.ಡಿ. ದೇವೇಗೌಡರು ಮನವಿ ಮಾಡಿದರು. ಈ ವೇಳೆ ಕೇಂದ್ರ ವಿಮಾನ ಖಾತೆ ಸಚಿವರಾದ ರಾಮಮೋಹನ್ ನಾಯ್ಡು ಅವರು, ಕರ್ನಾಟಕದ ಸರ್ಕಾರ ಜಾಗವನ್ನು ಗುರುತಿಸಿದರೆ, ನಾವು ಮತ್ತೊಂದು ವಿಮಾನ ನಿಲ್ದಾಣಕ್ಕೆ ಅನುಮತಿ ಕೊಡುತ್ತೇವೆ ಎಂದು ಉತ್ತರಿಸಿದರು.

## ಕಾಪಾಡಬೇಕು

ಈ ದಿಕ್ಕಿನಲ್ಲಿ ನಮ್ಮ ಮಾಧ್ಯಮ ಅಕಾಡೆಮಿ ತರಬೇತಿ ಕಾರ್ಯಕ್ರಮಗಳನ್ನು ರೂಪಿಸಬೇಕು ಎಂದು ಕರೆ ನೀಡಿದರು. ಅಚ್ಚುಮೊಳೆ ಅವಧಿಯಿಂದ ಕೃತಕ ಬುದ್ಧಿಮತ್ತೆವರೆಗೂ ಪತ್ರಿಕಾ ವೃತ್ತಿ ಬೆಳೆದಿದೆ. ತಂತ್ರಜ್ಞಾನದಲ್ಲಿ ನಮ್ಮ ವೃತ್ತಿ ಎಷ್ಟೇ ಮುಂದುವರೆದಿದ್ದರೂ ಸತ್ಯ ಮತ್ತು ನಿಷ್ಠುರ ಮೌಲ್ಯಗಳು ಮಾತ್ರ ಬದಲಾಗಬಾರದು. ಆದರೆ ಇಂದು ಊಹಾ ಪತ್ರಿಕೋದ್ಯಮ, ಕಾಲ್ಪನಿಕ ಪತ್ರಿಕೋದ್ಯಮ ಮತ್ತು ಸುಳ್ಳು ಸುದ್ದಿಗಳ ಹಾವಳಿ ಇಂದು ಹೆಚ್ಚಾಗಿದೆ. ಈ ವಿಚಾರದಲ್ಲಿ ನ್ಯೂಸ್ ರೂಮ್ ಗಳು ಬಹಳ ಎಚ್ಚರಿಕೆ ಮತ್ತು ಜವಾಬ್ದಾರಿಯಿಂದ ಕರ್ತವ್ಯ ನಿರ್ವಹಿಸುವ ಅಗತ್ಯವಿದೆ ಎಂದರು. ಎರಡು ವರ್ಷಗಳಿಂದ ಪ್ರಶಸ್ತಿ ಗಳನ್ನು ನೀಡಿರಲಿಲ್ಲ. ನಮ್ಮ ಇಲಾಖೆಯ ನಾನಾ ವಿಭಾಗಗಳ ಪ್ರಶಸ್ತಿಗಳು ಐದು ವರ್ಷಗಳಿಂದ ಬಾಕಿ ಇದ್ದವು. ನಮ್ಮ ಅವಧಿಯಲ್ಲಿ ಎಲ್ಲವನ್ನೂ ಪುಟ 2 ವಿತರಿಸುವ ಕೆಲಸ ಮಾಡಿದ್ದೇವೆ ಎಂದರು. ಪತ್ರಕರ್ತ ಕುಟುಂಬಗಳ ಆರೋಗ್ಯ, ಆರೋಗ್ಯ ವಿಮೆ, ಉಚಿತ ಬಸ್ ಪಾಸ್, ನಿವೃತ್ತಿ ವೇತನ ಹೆಚ್ಚಳ ಸೇರಿದಂತೆ ಹತ್ತಾರು ವರ್ಷಗಳಿಂದ ಬಾಕಿ ಇದ್ದ ನಮ್ಮ ಸಮುದಾಯದ ಬೇಡಿಕೆಗಳೆಲ್ಲವನ್ನೂ ಈಡೇರಿಸುತ್ತಿದ್ದೇವೆ ಎಂದು ವಿವರಿಸಿದರು.

## ಮೂರನೇ ಅಮೃತ ಸ್ನಾನಕ್ಕೆ ಸಾಕ್ಷಿಯಾದ ಮಹಾಕುಂಭಮೇಳ: ಭದ್ರತೆ

ಜನವರಿ 13 ರಿಂದ ತ್ರಿವೇಣಿ ಸಂಗಮದಲ್ಲಿ ಸ್ನಾನ ಮಾಡಿದವರ ಒಟ್ಟು ಸಂಖ್ಯೆ 34.97 ಕೋಟಿಗೆ ತಲುಪಿದೆ ಎಂದು ಮಾಹಿತಿ ನಿರ್ದೇಶಕರಾದ ಶಿಶಿರ್ ತಿಳಿಸಿದ್ದಾರೆ. ಈ ಸಂಖ್ಯೆಯಲ್ಲಿ 10 ಲಕ್ಷ ಕಲ್ಪವಾಸಿಗಳು ಮತ್ತು 6.58 ಲಕ್ಷ ಯಾತ್ರಿಕರು ಸೇರಿದ್ದಾರೆ.

33 ಕೋಟಿ ಭಕ್ತರಿಂದ ಸ್ನಾನ: ಈ ಪವಿತ್ರ ಅಮೃತ ಸ್ನಾನಕ್ಕೆ ಹೆಚ್ಚಿನ ಮಹತ್ವವಿದೆ. ಕಳೆದ ಮೌನಿ ಅಮವಾಸ್ಯೆಯಂದು ನಡೆದ ಇದೇ ಅಮೃತ ಸ್ನಾನದಂದು ಕಾಲ್ತುಳಿತ ಸಂಭವಿಸಿ ಕನಿಷ್ಠ 30 ಜನರು ಸಾವನ್ನಪ್ಪಿ, 60 ಜನರು ಗಾಯಗೊಂಡಿದ್ದರು. ಇಲ್ಲಿಯವರೆಗೆ 33 ಕೋಟಿಗೂ ಹೆಚ್ಚು ಭಕ್ತರು ಮಹಾ ಕುಂಭದಲ್ಲಿ ಸ್ನಾನ ಮಾಡಿದ್ದಾರೆ. ಹಾಗೇ ಇಂದು ಸುಮಾರು ಐದು ಕೋಟಿ ಯಾತ್ರಿಕರು ಆಗಮಿಸುವ ನಿರೀಕ್ಷೆಯಿದೆ.

ಹೆಚ್ಚಿದ ಭದ್ರತೆ: ಮೌನಿ ಅಮಾವಾಸ್ಯೆ ದಿನ ಸಂಭವಿಸಿದ ಘಟನೆಯ ಬಳಿಕ ಇನ್ನು ಮುಂದೆ ಈ ತರಹದ ಘಟನೆಯಾಗದಂತೆ ನಿರ್ಧರಿಸಿರುವ ಉತ್ತರ ಪ್ರದೇಶ ಸರ್ಕಾರ ಭದ್ರತೆ ಮತ್ತು ಜನಸಂದಣಿ ನಿರ್ವಹಣಾ ಕ್ರಮಗಳನ್ನು ಮತ್ತಷ್ಟು ಬಲಪಡಿಸಿದೆ. ಈಗಾಗಲೇ ಶನಿವಾರ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರು ಎಲ್ಲ ಸಿದ್ಧತೆಗಳನ್ನು ವೈಯಕ್ತಿಕವಾಗಿ ಪರಿಶೀಲಿಸಿದ್ದರಿಂದ, ಇಂದು "ಶೂನ್ಯ-ದೋಷ" ಅಮೃತ ಸ್ನಾನವನ್ನು ಖಚಿತಪಡಿಸಿಕೊಳ್ಳಲು ಹೆಚ್ಚುವರಿ ಸಿಬ್ಬಂದಿ, ವೈದ್ಯಕೀಯ ಸಿಬ್ಬಂದಿ ಮತ್ತು ಸಂಪನ್ಮೂಲಗಳನ್ನು ನಿಯೋಜಿಸಲಾಗಿದೆ. ಸಂಪ್ರದಾಯದ ಪ್ರಕಾರ, ಸನ್ಯಾಸಿ, ಬೈರಾಗಿ ಮತ್ತು ಉದಾಸೀನ್ ಎಂಬ ಮೂರು ಪಂಗಡಗಳಿಗೆ ಸೇರಿದ ಅಖಾರಗಳು ಪೂರ್ವನಿರ್ಧರಿತ ಅನುಕ್ರಮದಲ್ಲಿ ತಮ್ಮ ಪವಿತ್ರ ಸ್ನಾನ ಮಾಡುತ್ತಿದ್ದಾರೆ. ಮೊದಲ ಗುಂಪು ಈಗಾಗಲೇ ಗಂಗಾ, ಯಮುನಾ ಮತ್ತು ಪೌರಾಣಿಕ ಸರಸ್ವತಿಯ ಸಂಗಮದಲ್ಲಿ ಮುಳುಗಿದೆ.

ಕುಂಭಮೇಳ ಅಧಿಕಾರಿಗಳು ಬಿಡುಗಡೆ ಮಾಡಿದ ವೇಳಾಪಟ್ಟಿಯ ಪ್ರಕಾರ, ಅಮೃತ ಸ್ನಾನ ಬೆಳಗ್ಗೆ 4 ಗಂಟೆಗೆ ಸನ್ಯಾಸಿ ಪಂಥದ ಅಖಾರಗಳೊಂದಿಗೆ ಪ್ರಾರಂಭವಾಯಿತು. ಪವಿತ್ರ ಮೆರವಣಿಗೆಯನ್ನು ಮುನ್ನಡೆಸಿದ್ದು ಶ್ರೀ ಪಂಚಾಯಿತಿ ಅಖಾರ ಮಹಾನಿರ್ವಾಣಿ, ಶ್ರೀ ಶಂಭು ಪಂಚಾಯತಿ ಅಟಲ್ ಅಖಾರ, ಶ್ರೀ ತಪೋನಿಧಿ ಪಂಚಾಯತಿ ಶ್ರೀ ನಿರಂಜನಿ ಅಖಾರ, ಶ್ರೀ ಪಂಚಾಯತಿ ಅಖಾರ ಆನಂದ್, ಶ್ರೀ ಪಂಚದಶ್ನಮ್ ಜುನಾ ಅಖಾರ, ಶ್ರೀ ಪಂಚದಶ್ನಮ್ ಅವಹನ್ ಅಖಾರ ಮತ್ತು ಶ್ರೀ ಪಂಚಾಗ್ನಿ ಅಖಾರ.

ಪ್ರತಿ ಅಖಾರಕ್ಕೂ ಸಮಯ ನಿಗದಿ: ಪ್ರತಿಯೊಂದು ಅಖಾರಕ್ಕೂ ಪವಿತ್ರ ನೀರಿನಲ್ಲಿ 40 ನಿಮಿಷಗಳ ಕಾಲಾವಕಾಶವನ್ನು ನೀಡಲಾಗಿದೆ. ಮೊದಲ ತಂಡ ತಮ್ಮ ಆಚರಣೆಯನ್ನು ಪೂರ್ಣಗೊಳಿಸಿ ಬೆಳಗ್ಗೆ 8.30 ರ ಹೊತ್ತಿಗೆ ತಮ್ಮ ಶಿಬಿರಗಳಿಗೆ ಮರಳುತ್ತದೆ. ಮುಂದಿನ ಸಾಲಿನಲ್ಲಿ ಬೈರಾಗಿ ಪಂಥದ ಅಖಾರಗಳು ಇದ್ದಾರೆ, ಅವರ ಸ್ನಾನ ಕ್ರಮವು ಬೆಳಗ್ಗೆ 8.25 ಕ್ಕೆ ಪ್ರಾರಂಭವಾಗಲಿದೆ. ಈ ಮೆರವಣಿಗೆಗಳಲ್ಲಿ ಅಖಿಲ ಭಾರತ ಶ್ರೀ ಪಂಚ ನಿರ್ವಾಣಿ ಅನಿ ಅಖಾರ, ಅಖಿಲ ಭಾರತ ಶ್ರೀ ಪಂಚ ದಿಗಂಬರ್ ಅನಿ ಅಖಾರ ಮತ್ತು ಅಖಿಲ ಭಾರತ ಶ್ರೀ ಪಂಚ ನಿರ್ಮೋಹಿ ಅನಿ ಅಖಾರ ಸೇರಿವೆ. ಅವರ ಸರದಿ ಮಧ್ಯಾಹ್ನ 12.35ಕ್ಕೆ ಕೊನೆಗೊಳ್ಳುತ್ತದೆ.

# ಅಭಿವೃದ್ಧಿ ಕಾಮಗಾರಿಗಳ ಕುಂಠಿತಕ್ಕೆ ಅಧಿಕಾರಿಗಳೇ ಕಾರಣ

**ಕೊರಟಗೆರೆ:** ಪಟ್ಟಣದ ಅನೇಕ ಜನಪರ ಕೆಲಸಗಳ ವಿಳಂಬಕ್ಕೆ ಮತ್ತು ಅಭಿವೃದ್ಧಿ ಕಾಮಗಾರಿಗಳ ಕುಂಠಿತಕ್ಕೆ ಜಿಲ್ಲೆಯ ಅಧಿಕಾರಿಗಳೇ ಪರೋಕ್ಷ ಕಾರಣ ಎಂದು ಪಟ್ಟಣ ಪಂಚಾಯಿತಿಯ ಹಲವು ಸದಸ್ಯರು ಸಾಮಾನ್ಯ ಸಭೆಯಲ್ಲಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಗುರುವಾರದಂದು ಪಟ್ಟಣದ ಪ್ರವಾಸಿ ಮಂದಿರದಲ್ಲಿ ನಡೆದ ಪಟ್ಟಣಪಂಚಾಯತಿ ಸಾಮಾನ್ಯ ಸಭೆಯಲ್ಲಿ ಪಟ್ಟಣ ಪಂಚಾಯತಿ ಹಲವು ಕಾಮಗಾರಿಗಳ ವಿಳಂಬಕ್ಕೆ ಜಿಲ್ಲಾ ಯೋಜನಾ ನಿರ್ದೇಶಕರೇ ಕಾರಣರಾಗಿದ್ದಾರೆ, ಅವರು ಪಟ್ಟಣಪಂಚಾಯತಿಗೆ ಬಂದು ಹೇಳುವುದೇ ಒಂದು, ಅವರ ಕಛೇರಿಯಲ್ಲಿ ಮಾಡುವುದೇ ಒಂದಾಗಿದೆ, ಕೆಲವು ಭಾರಿ ಉಡಾಫೆ ಮಾತನಾಡುತ್ತಾರೆ, ಇವರ ಜೊತೆಗೆ ಜಿಲ್ಲಾಧಿಕಾರಿಗಳು ನಮ್ಮಗಳ ಸಮಸ್ಯೆಗೆ ಸ್ಪಂದಿಸುತ್ತಿಲ್ಲ, ಇದರಿಂದ ಪಟ್ಟಣದ ಅನೇಕ ಸಮಸ್ಯೆಗಳು ಹಾಗೆಯೆ ಉಳಿದಿವೆ ಎಂದು ಅಸಮಾಧಾನ ಹೊರಹಾಕಿದರು.

ಪಟ್ಟಣ ಪಂಚಾಯತಿ ಸದಸ್ಯ ಕೆ.ಆರ್.ಓಬಳರಾಜು ಮಾತನಾಡಿ ಪಟ್ಟಣದಲ್ಲಿ ಪರಿಶಿಷ್ಟ ಜಾತಿಯವರ ಅನುದಾನದಲ್ಲಿ ನಿರ್ಮಿಸಿರುವ ಅಂಗಡಿ ಮಳಿಗೆಗಳು ಕಟ್ಟಿ 6 ವರ್ಷಗಳಾದರೂ ಹರಾಜು ಆಗಿಲ್ಲ, ಈ ಸಂಬಂಧ ಹಲವು ಸಭೆಯಲ್ಲಿ ವಿಷಯ ಮಂಡನೆ ಮಾಡಿ ಖಂಡಿಕೆಗಳನ್ನು ಕಳಿಸಿದರೂ



ಪಟ್ಟಣ ಪಂಚಾಯತಿ ಸಭೆಯಲ್ಲಿ ಅದ್ಯಕ್ಷರು, ಸದಸ್ಯರು ಅಧಿಕಾರಿಗಳು.

ಜಿಲ್ಲೆಯ ಯೋಜನಾ ನಿರ್ದೇಶಕರು ಟನಿರ್ಲಕ್ಷ ವಹಿಸಿದ್ದಾರೆ, ಈ ಸಂಬಂಧ ಪೌರಾಡಳಿತ ಇಲಾಖೆಯಗೆ ಟಕಳುಹಿಸಿರುವ ಕಡತಕ್ಕೆ ಬೆಲೆಯಿಲ್ಲ, ಅಧಿಕಾರಿಗಳನ್ನು ಕಾದರೆ ಆಗುವುದಿಲ್ಲ, ಮುಖ್ಯಾಧಿಕಾರಿಗಳು ಘಟನ್ನೋತ್ತರ ವರದಿ ಮೇರೆಗೆ ಅವುಗಳನ್ನು ಹರಾಜು ಮಾಡುವಂತೆ ಒತ್ತಾಯಿಸಿದರು, ಎಲ್ಲಾ ಸದಸ್ಯರ ಅಗ್ರಹದಂತೆ ಫೆ.15 ಕ್ಕೆ ಅಂಗಡಿಗಳನ್ನು ಹರಾಜು ಮಾಡುವ ನಿರ್ಣಯ ಕೈಗೊಳ್ಳಲಾಗಿದೆ ಎಂದರು.

ಸದಸ್ಯ ಕೆ.ಎನ್.ಲಕ್ಷ್ಮೀನಾರಾಯಣ್ ಮಾತನಾಡಿ ಪಟ್ಟಣ ಪಂಚಾಯತಿಯಿಂದ ಪೌರಕಾರ್ಮಿಕರಿಗೆ 14 ಮನೆಗಳನ್ನು ಸ್ಲಂ ಬೋರ್ಡ್ ನವರು ಮಾಡಿರುವ ನಿರ್ಮಾಣ ಮಾಡಿ ಕೊಟ್ಟು 6 ವರ್ಷಗಳಾಗಿ ಅವರಿಗೆ ಇಲ್ಲಿಯವರೆಗೆ ಮನೆ ನೀಡದೆ ಅವು ಹಾಳಾಗುತ್ತಿವೆ, ರಾಜ್ಯ ಸರ್ಕಾರದ 6 ಲಕ್ಷ ಹಣ ಬಂದಿದೆ ಆದರೆ ಕೇಂದ್ರ ಸರ್ಕಾರದ 1.50 ಲಕ್ಷ ರೂಗಳು ಬಂದಿಲ್ಲ, ಆ ವಂತಿಕೆ ಟಬರುವುದು ಅನುಮಾನವಾಗಿದೆ ಆದರಿಂದ ಕೇಂದ್ರದ ಹಣಕ್ಕೆ ಕಾದು ಕುಳಿತರೆ ಆಗುವುದಿಲ್ಲ, ಪಟ್ಟಣ ಪಂಚಾಯತಿಯ ಹಣದಲ್ಲಿ ಟಪೌರಕಾರ್ಮಿಕರಿಗೆ ಮನೆ ನೀಡುವಂತೆ ಒತ್ತಾಯಿಸಿದರು. ಇದಕ್ಕೆ ಸಭೆಯಲ್ಲಿ ಎಲ್ಲರೂ ಒಪ್ಪಿ ನಿರ್ಣಯ ಕೈಗೊಂಡರು.

ಸದಸ್ಯ ನಂದೀಶ್ ಮಾತನಾಡಿ, ಪಟ್ಟಣದಲ್ಲಿ ಸ್ಲಂ ಬೋರ್ಡ್ ನವರು ಮಾಡಿರುವ ಅವಾಂತರ ಹೇಳತೀರದಾಗಿದೆ, ಪಟ್ಟಣದ 44 ಕುಟುಂಬಗಳಿಗೆ ಮನೆ ನಿರ್ಮಿಸಿಕೊಡುವ ಭರವಸೆ ನೀಡಿ ವಂತಿಕೆ ಕಟ್ಟಿಸಿಕೊಂಡು ವರ್ಷಗಳಾದರೂ ಅವರಿಗೆ ಮನೆ ಕಟ್ಟಿಕೊಟ್ಟಿಲ್ಲ, ಪಟ್ಟಣದ ಕಾಮೇನಹಳ್ಳಿ ಆಶ್ರಯ ಮನೆಗಳ ನಿವೇಶನಗಳಲ್ಲಿ ಟನಿರ್ಮಿಸುವ ಸ್ಲಂ ಬೋರ್ಡ್ ಮನೆಗಳ ಪರಿಸ್ಥಿತಿ ಹೀಗಾಗಿದೆ, ಜಿಲ್ಲಾಧಿಕಾರಿಗಳು ಬಂದು ಸ್ಥಳ ಪರಿಶೀಲನೆ ಮಾಡಿದರೂ ಟಪ್ರಯೋಜನವಾಗಿಲ್ಲ, ಸ್ಲಂ ಬೋರ್ಡ್ ಅಧಿಕಾರಿಗಳ ವಿರುದ್ಧ ಕಾನೂನು ರೀತಿಯ ಕ್ರಮಕೈಗೋಳ್ಳುವಂತೆ ಒತ್ತಾಯಿಸಿದರು.

ಸದಸ್ಯ ನಟರಾಜು ಮಾತನಾಡಿ ಪಟ್ಟಣದ ಮಟನ್ ಮಾರ್ಕೆಟ್ ವೃತ್ತ, ಪೋಸ್ಟ್ ಆಫೀಸ್, ಪಶು ಆಸ್ಪತ್ರೆ ಮುಂಭಾಗ ಸೇರಿದಂತೆ ಪಟ್ಟಣದ ಹಲವು ಕಡೆ ಕೋಳಿ ಮತ್ತು ಮಟನ್ ಅಂಗಡಿ ಟನಡೆಯುತ್ತಿದ್ದು ಆ ಪ್ರದೇಶದಲ್ಲಿ ದುರ್ವಾಸನೆ ಉಂಟಾಗಿ ಓಡಾಡಲು ಆಗುತ್ತಿಲ್ಲ, ಇದರಿಂದ ಆರೋಗ್ಯ ಸಮಸ್ಯೆ ಜನರಲ್ಲಿ ಟಹೆಚ್ಚಾಗುತ್ತಿದೆ, ಕೂಡಲೇ ಪಟ್ಟಣದ ಎಲ್ಲಾ ಮಾಂಸದ ಅಂಗಡಿಗಳನ್ನು ಊರಿನ ಪಕ್ಕದಲ್ಲಿ ಒಂದೆಗೆ ಸಾಗಿಸುವಂತೆ ಒತ್ತಾಯಿಸಿದರು.

ಸದಸ್ಯ ಎ.ಡಿ.ಬಲರಾಮಯ್ಯ ಮಾತನಾಡಿ ಪಟ್ಟಣದ ಗಂಗಾಧರೇಶ್ವರ ಬೆಟ್ಟಕ್ಕೆ ಹೋಗುವ ದಾರಿಯಲ್ಲಿ ಅನಧಿಕೃತ ಹಂದಿಗೂಡುಗಳು ಪಟ್ಟಣ ಪಂಚಾಯತಿ ಜಾಗದಲ್ಲಿ ಇವೆ, ಇದರಿಂದ ಇತಿಹಾಸ ಹೊಂದಿರುವ ಗಂಗಾಧರೇಶ್ವರ ಬೆಟ್ಟಕ್ಕೆ ಹೋಗುವ ಭಕ್ತಾದಿಗಳಿಗೆ, ಸಾರ್ವಜಕರಿಗೆ ತೊಂದರ ಆಗುತ್ತಿದೆ, ಕೂಡಲೇ ಟಹಂದಿಗೂಡಗಳನ್ನು ತೆರವುಮಾಡಿ ಎಂದರು. ಸದಸ್ಯ ಪುಟ್ಟನರಸಯ್ಯ ಮಾತನಾಡಿ ಕೊರಟಗೆರೆಯಲ್ಲಿ ಹಂದಿ ಟಅಂಗಡಿಗಳು ಹೆಚ್ಚಾಗಿವೆ ಅವುಗಳನ್ನು ಸ್ಥಳಾಂತರಿಸಿಸುವಂತೆ ಟಹಾಗೂ ಪಟ್ಟಣದಲ್ಲಿನ ಗುಂಡು ತೋಪು ಪಂಚಾಯತಿ ಜಾಗಗಳನ್ನು ಗುರುತಿಸಿ ಸ್ವಾಧೀನಕ್ಕೆ ಪಡೆಯುವಂತೆ ಅಗ್ರಹಿಸಿದರು.

ಈ ಸಂದರ್ಭದಲ್ಲಿ ಪಟ್ಟಣ ಪಂಚಾಯತಿಯಿಂದ ಪೌರಕಾರ್ಮಿಕರಿಗೆ ಮತ್ತು ನೀರು ಸರಬರಾಜುದಾರರಿಗೆ ಜರ್ಕಿನ್ ಗಳನ್ನು ವಿತರಿಸಲಾಯಿತು. ಸಭೆಯಲ್ಲಿ ಅಧ್ಯಕ್ಷೆ ಅನಿತಾ, ಉಪಾಧ್ಯಕ್ಷೆ ಹುನ್ನಾಫಾರಿಯಾ, ಸ್ಥಾಯಿಸಮಿತಿ ಅಧ್ಯಕ್ಷೆ ಹೇಮಲತ, ಸದಸ್ಯರಾದ ನಾಗರಾಜು, ಕಾವ್ಯ, ಭಾರತಿ, ಮಂಜುಳ ಮುಖ್ಯಾಧಿಕಾರಿ ಉಮೇಶ್, ಅರ್.ಐ.ಶೈಲೇಂದ್ರ, ಹೆಚ್.ಐ..ಹುಸೇನ್. ವೇಣುಗೋಪಾಲ್, ಸಾವಿತ್ರಮ್ಮ, ನಾಗರತ್ನಮ್ಮ ಸೇರಿದಂತೆ ಇತರರು ಹಾಜರಿದ್ದರು.



ಕೊರಟಗೆರೆ ಪಟ್ಟಣ ಪಂಚಾಯಿತಿಯಿಂದ ಪೌರಕಾರ್ಮಿಕರಿಗೆ ಮತ್ತು ನೀರು ಸರಬರಾಜುದಾರರಿಗೆ ಜರ್ಕಿನ್ ವಿತರಿಸಲಾಯಿತು.

# 10ನೇ ಶತಮಾನದ ಜೈನ ನಿಶಧಿ ಶಾಸನ ಪತ್ತೆ

**ಚಾಮರಾಜನಗರ:** ಪಟ್ಟಣದ ವಿಜಯ ಪಾರ್ಶ್ವನಾಥ ಬಸದಿಯ ಆವರಣದಲ್ಲಿ 10 ನೇ ಶತಮಾನಕ್ಕೆ ಸೇರಿದ ಜೈನಧರ್ಮದ ನಿಶಧಿ ಶಾಸನವೊಂದು ಪತ್ತೆಯಾಗಿದೆ. ಇದನ್ನು ಬೆಂಗಳೂರಿನ ವಿಪ್ರೋ ಕಂಪನಿಯಲ್ಲಿ ಮಾರ್ಕೆಟಿಂಗ್ ಟೆಕ್ನಾಲಜಿ ಹಾಗೂ ಡಿಜಿಟಲ್ ವಿಭಾಗದ ನಿರ್ದೇಶಕರಾಗಿ ಕಾರ್ಯನಿರ್ವಹಿಸುತ್ತಿರುವ ಶ್ರೀ ಹೆಚ್.ಪಿ. ನಿತಿನ್ ಅವರು ಇತ್ತೀಚೆಗೆ ಟಕೈಗೊಂಡ ಕ್ಷೇತ್ರಕಾರ್ಯದ ಸಮಯದಲ್ಲಿ ಪತ್ತೆ
ಮಾಡಿದ್ದಾರೆ.

ವಿಜಯ ಪಾರ್ಶ್ವನಾಥ ಬಸದಿಯ ಆವರಣದಲ್ಲಿ ಬಸದಿಯ ಮುಂಭಾಗದ ಎಡಬದಿಯಲ್ಲಿ ತೀರ್ಥಂಕರರ ಶಿಲ್ಪವಿರುವ ಶಾಸನವನ್ನು ಪರಿಶೀಲಿಸಿದಾಗ ಈ ನಿಶಧಿ ಶಾಸನವು ಪತ್ತಯಾಗಿದೆ. ಹದಿನಾಲ್ಕು ಸಾಲುಗಳಿರುವ ಈ ಶಾಸನವು "ಕೊಂಡ ಕುಂದಾನ್ವಯ ದೇಸಿಗ ಗಣಕ್ಕೆ ಸೇರಿ ಸೂರ್ಯಚಂದ್ರರಿರುವವರೆಗೆ ಪ್ರಖ್ಯಾತರಾಗಿದ್ದು ಪನಸೋಗೆಯಲ್ಲಿ ವಾಸವಿದ್ದ ಗಣ ಪ್ರವರ್ತಕರಾದ ಶ್ರೀಧರ ದೇವರ ಶಿಷ್ಯ ಮುಡಿಪಿದರು. ಅವರ ಅಭಿಮಾನಿಯು ನಿಸಿಧಿಗೆಯನ್ನು ನಿರ್ಮಿಸಿದರು ಎಂದು ತಿಳಿಸುತ್ತದೆ. ಈ ಶಾಸನದ ಮೇಲ್ಭಾಗದಲ್ಲಿ ಎರಡು ಸಾಲುಗಳು, ನಂತರ ಪರ್ಯಂಕಾಸನದಲ್ಲಿರುವ ತೀರ್ಥಂಕರರ ಶಿಲ್ಪ, ನಂತರದ ಹನ್ನೆರಡು ಸಾಲುಗಳನ್ನು ಕಾಣಬಹುದು. ಶಾಸನವು ಕಂಬ ರೂಪದಲ್ಲಿರುವುದರಿಂದ ಇದು ಕಂಬ ನಿಶಧಿ ಎಂದು ಕರೆಯಬಹುದು.

ಶಾಸನದಲ್ಲಿ ಕಾಲದ ಉಲ್ಲೇಖವಿಲ್ಲ ಆದರೆ ಶಾಸನದಲ್ಲಿ ಪನಸೋಗೆಯ ಶ್ರೀಧರ ದೇವರ ಉಲ್ಲೇಖವಿದೆ. ಇದೇ "ಪನಸೋಗೆಯ ಶ್ರೀಧರ ದೇವರ" ಉಲ್ಲೇಖವಿರುವ ಮತ್ತೊಂದು ಶಾಸನವು ಚಿಕ್ಕಮಗಳೂರು ಜಿಲ್ಲೆ,



ಮೂಡಿಗೆರೆ ತಾಲೂಕಿನ ಮಾವಿನಕೆರೆ ಗ್ರಾಮದಲ್ಲಿ ಕಂಡು ಬರುತ್ತದೆ. ಮಾವಿನಕೆರೆ ಗ್ರಾಮದ ಶಾಸನದ ಕಾಲ 10ನೇ ಶತಮಾನ. ಈ ಹಿನ್ನೆಲೆಯಲ್ಲಿ "ಪನಸೋಗೆಯ ಶ್ರೀಧರ ದೇವರ" ಉಲ್ಲೇಖ ಹಾಗೂ ಲಿಪಿಯ ಆಧಾರದ ಮೇಲೆ ಶಾಸನದ ಕಾಲವನ್ನು 10–11ನೇ ಶತಮಾನಕ್ಕೆ ಸೇರಿದ್ದೆಂದು ನಿಶ್ಚಯಿಸಬಹುದು.

**ಕೊಂಡ ಕುಂದಾನ್ವಯ ಶಾಸನವು ಕೊಂಡ ಕುಂದಾನ್ವಯದ ಉಲ್ಲೇಖದಿಂದ ಆರಂಭವಾಗುತ್ತದೆ. ಇಲ್ಲಿ ಕೊಂಡ ಕುಂದ ಪದವಯ ಕುಂದಕುಂದಾ + ಅನ್ವಯ ಎಂದಾಗುತ್ತದೆ.**

**ಜೈನಧರ್ಮದಲ್ಲಿ ಗುರು ಪರಂಪರೆಗಳನ್ನು ಸಂಘ, ಗಣ, ಗಚ್ಚ, ಅನ್ವಯ, ಬಳಿ, ವಿಭವ ಎಂದು ವರ್ಗೀಕರಿಸಲಾಗುತ್ತದೆ. ಇಲ್ಲಿ ಉಲ್ಲೇಖಿತವಾಗಿರುವ ಕೊಂಡ ಕುಂದಾನ್ವಯ ಎಂದರೆ ಇದು ಜೈನ ಆಚಾರ್ಯರಲ್ಲೇ ಅಗ್ರಗಣ್ಯರಾದ ಆಚಾರ್ಯ ಕುಂದಕುಂದರ ಗುರು ಪರಂಪರೆಗೆ ಸೇರಿದುದು ಎಂದಾಗುತ್ತದೆ.**

**ದೇಶಿಗ ಗಣ ದೇಶಿಗ ಗಣ ಎಂದರೆ ಕುಂದಕುಂದರ ಗುರು ಪರಂಪರೆಯ ದೇಶಿಗಗಣಕ್ಕೆ ಸೇರಿದ ಎಂದರ್ಥ.**

**ಪನಸೋಗೆ ಎಂಬುದು ಇಂದಿನ ಮೈಸೂರು ಜಿಲ್ಲೆ ಕೃಷ್ಣರಾಜನಗರ (ಕೆ.ಆರ್.ನಗರ) ತಾಲೂಕು ಚಿಕ್ಕಹನಸೋಗೆ. ಪನಸೋಗೆ ಅದಿನ ದಿನಗಳಲ್ಲಿ ಒಂದು ಪ್ರಮುಖ ಜೈನ ಕೇಂದ್ರವಾಗಿತ್ತು.**

**ನಿಸಿದಿಗೆ ಎಂಬ ಪದದ ಉಲ್ಲೇಖವಿದ್ದು, ಇದು ಸಲ್ಲೇಖನ ವ್ರತವನ್ನು ಕೈಗೊಂಡು ಮರಣ
ಸಮಾಧಿ ಹೊಂದಿದ ಶಾಸನ ಎಂದು ತಿಳಿದುಬರುತ್ತದೆ.**

ಶಾಸನಗಳನ್ನು ಓದಿ ಮಾರ್ಗದರ್ಶನ ನೀಡಿದ ಕರ್ನಾಟಕ ಇತಿಹಾಸ ಅಕಾಡೆಮಿಯ ಅಧ್ಯಕ್ಷರಾದ ಡಾ. ದೇವರಕೊಂಡಾರೆಡ್ಡಿಯವರಿಗೆ ಹಾಗೂ ಶಾಸನದ ಅಧ್ಯಯನಕ್ಕೆ ಮಾರ್ಗದರ್ಶನ ನೀಡಿದ ಮದ್ರಾಸ್ ವಿಶ್ವವಿದ್ಯಾಲಯದ ಜೈನಾಲಜಿ ವಿಭಾಗದ ಮುಖ್ಯಸ್ಥರಾದ ಡಾ. ಪ್ರಿಯದರ್ಶನಾ ಜೈನ್‌ರವರಿಗೆ, ತಮ್ಮ ತಂದೆ ಡಾ. ಹೆಚ್. ಪಾರ್ಶ್ವನಾಥ್‌ರವರಿಗೆ, ಚಾಮರಾಜನಗರ ದಿಗಂಬರ ಜೈನ ಸಮಾಜದ ಅಧ್ಯಕ್ಷರಾದ ಶ್ರೀ ನಿರ್ಮಲ್‌ಕುಮಾರ್ ರವರಿಗೆ ಹಾಗೂ ವಿಜಯ ಪಾರ್ಶ್ವನಾಥ ಬಸದಿಯ ಪುರೋಹಿತರಾದ ಪಂಡಿತ ಪ್ರೇಮ್‌ಕುಮಾರ್‌ರವರಿಗೆ ನಿತಿನ್‌ರವರು ತಮ್ಮ ಕೃತಜ್ಞತೆಯನ್ನು ತಿಳಿಸಿದ್ದಾರೆ.

# ಮಡಿವಾಳ ಮಾಚಿದೇವರ ಜಯಂತಿ ಆಚರಣೆ




**ಶಿಡ್ಲಘಟ್ಟ:** ಆಧ್ಯಾತ್ಮದ ಮೂಲಕ ಜನರಲ್ಲಿ ಭಕ್ತಿಪ್ರಧಾನ ಚಿಂತನೆಗಳನ್ನು ತುಂಬಿಸಿದ ಮಡಿವಾಳ ಮಾಚಿದೇವರ ಆದರ್ಶಗಳನ್ನು ಪ್ರತಿಯೊಬ್ಬರೂ ಅಳವಡಿಸಿಕೊಳ್ಳಬೇಕು ಎಂದು ತಹಸೀಲ್ದಾರ್ ಬಿ.ಎನ್.ಸ್ವಾಮಿ ತಿಳಿಸಿದ್ದಾರೆ.

ನಗರದ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಹಾಗೂ ಮಡಿವಾಳ ಸಮುದಾಯದಿಂದ ಹಮ್ಮಿಕೊಂಡಿದ್ದ ಮಡಿವಾಳ ಮಾಚಿದೇವರ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಹಿಂದುಳಿದ, ಶ್ರಮಜೀವಿ ವರ್ಗಗಳ ಸಮಾನತೆಗೆ ಸಾಮಾಜಿಕ ಕ್ರಾಂತಿ ಸೃಷ್ಟಿಸಿದವರಲ್ಲಿ ಮಡಿವಾಳ ಮಾಚಿದೇವರು ಪ್ರಮುಖರು ಸರ್ವರಿಗೂ ಸಮಪಾಲು–ಸಮಬಾಳು ಒದಗಿಸಲು ಬಸವ, ಮಾಚಿದೇವಾದಿ ಶರಣರು ಸಾಮಾಜಿಕ ಕ್ರಾಂತಿಯನ್ನೇ ಕೈಗೊಂಡರು ಎಂದು ಹೇಳಿದರು. ಶರಣರ ಅಗ್ರಗಣ್ಯ ಬಳಗದಲ್ಲಿ ಮಡಿವಾಳ ಮಾಚಿದೇವರೂ ಒಬ್ಬರು, ಶರಣರ ವಚನಸಾಹಿತ್ಯದ ರಕ್ಷಣೆಗಾಗಿ ಹೋರಾಡಿದ ಮಾಚಿದೇವರಜಯಂತಿ ಯನ್ನು ಎಲ್ಲೆಡೆ ಶ್ರದ್ದೆಯಿಂದ ಆಚರಿಸುತ್ತಿರುವುದು ಅರ್ಥಪೂರ್ಣವಾಗಿದೆ, ಮಡಿವಾಳ ಸಮಾಜದವರು ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸುವ ಕೆಲಸ ಮಾಡಬೇಕಿದೆ ಎಂದರು. ಈ ಸಂದರ್ಭದಲ್ಲಿ ತಾಲ್ಲೂಕು ಪಂಚಾಯತಿ ಇಓ ಹೇಮಾವತಿ, ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಎ. ನರೇಂದ್ರಕುಮಾರ್, ಜಿಲ್ಲಾ ಜಾಗೃತಿ ಸಮಿತಿ ಸದಸ್ಯ ಮೇಲೂರು ಮಂಜುನಾಥ್, ಸಮುದಾಯದ ಮುಖಂಡ ಹಾಗು ಮಡಿವಾಳ ಮಾಚಿದೇವರ ಸಂಘದ ರಾಜ್ಯ ಉಪಾಧ್ಯಕ್ಷರಾದ ರಾಜಣ್ಣ, ಮೇಲೂರು ಮಂಜುನಾಥ್ ಮುಂತಾದವರು ಹಾಜರಿದ್ದರು.

# ಪ್ರತಿಯೊಬ್ಬರಿಗೂ ಗುಣಮಟ್ಟದ ಶಿಕ್ಷಣ ದೊರೆಯಬೇಕು

ಆನೇಕಲ್: ಗ್ರಾಮೀಣ ಪ್ರದೇಶದಲ್ಲಿ ಪ್ರತಿಯೊಬ್ಬರಿಗೂ ಗುಣಮಟ್ಟದ ಶಿಕ್ಷಣ ದೊರೆಯಬೇಕು ಎಂಬು ಗುರಿಯೊಂದಿಗೆ ರೈನ್ ಬೋ ಪಬ್ಲಿಕ್ ಶಾಲೆಯಲ್ಲಿ ಸ್ಥಾಪಿಸಲಾಗಿದೆ. ವಿದ್ಯಾರ್ಥಿಗಳಲ್ಲಿರುವ ಸುಪ್ತ ಪ್ರತಿಭೆಗಳನ್ನು ಗುರುತಿಸಲು ಆರ್‌ಪಿಎಸ್ ವಿಜಯೋತ್ಸವ ಉತ್ತಮ ವೇದಿಕೆಯಾಗಿದೆ ಎಂದು ಶಾಲೆಯ ಪ್ರಧಾನ ಕಾರ್ಯದರ್ಶಿ ವಿಜಯಕುಮಾರ್ ಗೌಡ ತಿಳಿಸಿದರು.

ಅವರು ತಾಲ್ಲೂಕಿನ ಮಂಚನಹಳ್ಳಿಯ ರೈನ್ ಬೋ ಪಬ್ಲಿಕ್ ಶಾಲೆಯಲ್ಲಿ ಆರ್‌ಬಿಪಿ ವಿಜಯೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ವಿದ್ಯಾರ್ಥಿಗಳು ಕ್ರೀಡೆ, ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿಯೂ ತಮ್ಮದೇ ಆದ ಕಲೆಯನ್ನು ಹೊಂದಿರುತ್ತಾರೆ. ಹಾಗಾಗಿ ಅವರಲ್ಲಿನ ಕಲೆಗೆ ಪ್ರೋತ್ಸಾಹ ನೀಡಲಾಗುತ್ತಿದೆ. ಕಾರ್ಯಕ್ರಮದಲ್ಲಿ ಜೆಇಇ, ನೀಟ್ ಪರೀಕ್ಷೆಯಲ್ಲಿ ಉತ್ತೀರ್ಣರಾದವರಿಗೆ ಸನ್ಮಾನ ಮಾಡಲಾಗಿದೆ. ಈ ಮೂಲಕ ಉಳಿದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ತುಂಬಲಾಗುತ್ತಿದೆ. ಶಾಲೆಯ 20ಕ್ಕೂ ಹೆಚ್ಚು ವಿದ್ಯಾರ್ಥಿಗಳು ನೀಟ್ ಪರೀಕ್ಷೆ ಉತ್ತೀರ್ಣರಾಗಿರುವುದು ಶ್ಲಾಘನೀಯ ಎಂದರು.

ವಿಧಾನ ಪರಿಷತ್ ಸದಸ್ಯ ಪುಟ್ಟಣ್ಣ ಮಾತನಾಡಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ ನೀಡಬೇಕು . ವಿದ್ಯಾರ್ಥಿಗಳು ಪಠ್ಯ ವಿಷಯಗಳ ಜೊತೆಗೆ ಪಠ್ಯೇತರ ವಿಷಯಗಳಲ್ಲಿ ತೊಡಗಿಸಿಕೊಳ್ಳುವ ಅವಶ್ಯಕತೆಯಿದೆ. ಸಾಂಸ್ಕೃತಿಕ



ಕಾರ್ಯಕ್ರಮಗಳು ಮತ್ತು ಕ್ರೀಡೆಯಿಂದಾಗಿ ಉತ್ತಮ ಆರೋಗ್ಯ ಮತ್ತು ನಾಯಕತ್ವ ಗುಣಗಳು ಬೆಳೆಯುತ್ತವೆ ಎಂದರು.

ತಾಲ್ಲೂಕಿನ ಮಂಚನಹಳ್ಳಿಯ ರೈನ್ ಬೋ ಪಬ್ಲಿಕ್ ಶಾಲೆಯಲ್ಲಿ ಆರ್‌ಬಿಪಿ ವಿಜಯೋತ್ಸವ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ವಿದ್ಯಾರ್ಥಿಗಳು ಆಕರ್ಷಕ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಿಕೊಟ್ಟರು. ನಟಿ ರೀಷ್ಮಾ ನಾಣಯ್ಯ ಕಾರ್ಯಕ್ರಮದಲ್ಲಿ ಪಾಲ್ಗೊಂಡು ವಿದ್ಯಾರ್ಥಿಗಳೊಂದಿಗೆ ನೃತ್ಯ ಪ್ರದರ್ಶನ ನೀಡಿದರು. ಶೈಕ್ಷಣಿಕ ಚಟುವಟಿಕೆಗಳಲ್ಲಿ ಉನ್ನತ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಹೆಚ್ಚಿನ ಸಂಖ್ಯೆಯಲ್ಲಿ ಪೋಷಕರು ಜಮಾಯಿಸಿದ್ದರು.

ವಿಧಾನ ಪರಿಷತ್ ಸದಸ್ಯ ರಾಮೋಜಿಗೌಡ, ಶಿಕ್ಷಣ ತಜ್ಞ ಪುತ್ತೂರಾಯ, ಕ್ಷೇತ್ರ ಶಿಕ್ಷಣಾಧಿಕಾರಿ ವೆಂಕಟೇಶ್, ಹಂಸ ಸಂಘಟನೆಯ ಅಧ್ಯಕ್ಷ ಪ್ರಹ್ಲಾದ್ ಗೌಡ, ಆಕ್ಸ್‌ಫರ್ಡ್ ಸಂಸ್ಥೆಯ ರವಿಕುಮಾರ್, ಸ್ಫೂರ್ತಿ ಕಾಲೇಜಿನ ವಿನಯ್, ಕೇಂಬ್ರಿಡ್ಜ್ ಶಾಲೆಯ ಕಾಳಿನಾಥ್, ನ್ಯಾಷನಲ್ ಪಬ್ಲಿಕ್ ಶಾಲೆಯ ಅನಂತರಾಜು, ಶಾಂತಿನಿಕೇತನ ಶಾಲೆಯ ಭರತ್, ಶಾರದ ಶಾಲೆಯ ಯೋಗೇಶ್, ಮಾಯಸಂದ್ರ ಗ್ರಾಹ ಹರೀಶ್, ಮುರುಗೇಶ್ ಇದ್ದರು.

# ಸರಕಾರಿ ಬಂಡೆ ತೆರವುಗೊಳಿಸಲು ಗ್ರಾಮಸ್ಥರ ಮನವಿ

**ಚೇಳೂರು:** ಚೇಳೂರು ತಾಲೂಕಿನ ಎಂ.ನಲ್ಲಗುಟ್ಲಪಲ್ಲಿ ಗ್ರಾಮ ಪಂಚಾಯಿತಿಯ ಬತ್ತಲವಾರಪಲ್ಲಿ ಗ್ರಾಮದ ಸರಕಾರಿ ಬಂಡೆಯನ್ನು ಅತಿಕ್ರಮಣ ಮಾಡುತ್ತಿದ್ದು ತೆರವುಗೊಳಿಸಲು ಚೇಳೂರು ತಾಲ್ಲೂಕು ತಹಸೀಲ್ದಾರ್ ಶ್ರೀನಿವಾಸಲು ನಾಯ್ಡು ರವರೆಗೆ ಗ್ರಾಮಸ್ಥರು ಮನವಿ ಮಾಡಿದ್ದಾರೆ. ಗ್ರಾಮದ ಸರ್ವೆ ನಂ. 11 ರಲ್ಲಿ 8–04 ಗುಂಟೆ ಪ್ರದೇಶದಲ್ಲಿ ಸರ್ಕಾರಕ್ಕೆ ಸೇರಿದ ಭಾರೀ ಉದ್ದದ ಬಂಡೆ ಇದ್ದು ಈ ಹಿಂದೆ ಎಲ್ಲಾ ರೈತಾಪಿ ಜನತೆಯರು ತಮ್ಮ ತಮ್ಮ ಜಮೀನುಗಳಲ್ಲಿ ಬೆಳೆದ ಬೆಳೆಗಳನ್ನ ಗ್ರಾಮದ



ದಕ್ಷಿಣದ ಕಡೆಯಲ್ಲಿರುವ ಬಂಡೆಯ ಮೇಲೆ ಕಣ ಮಾಡಿಕೊಂಡು ಹೋಗುತ್ತಿದ್ದರು ಕಾಲಕ್ರಮೇಣ ಬಂಡೆಯನ್ನು ಅತಿಕ್ರಮಿಸಿಕೊಳ್ಳುತ್ತಿದ್ದು ಕಣ ಮಾಡಲು ಈಗ ಜಾಗ ಇರುವುದಿಲ್ಲ ಎಲ್ಲಾ ಜನತೆಗೂ ತೊಂದರೆ ಆಗುತ್ತಿದೆ.

ಸರಕಾರಿ ಬಂಡೆ ಯನ್ನು ಉಳಿಸಿ ಅತಿಕ್ರಮಣಾದಾರರನ್ನು ಹೊರ ಹಾಕಲು ಗ್ರಾಮದ ಹಿರಿಯ ಮುಖಂಡರಾದ ಪಟೇಲ್ ಬಿ.ವಿ.ಕೃಷ್ಣಾರೆಡ್ಡಿ ಸೇರದಂತೆ ಗ್ರಾಮಸ್ಥರು ಚೇಳೂರು ತಾಲೂಕು ತಹಸೀಲ್ದಾರ್ ಶ್ರೀನಿವಾಸಲು ನಾಯಡುಗೆ ಮನವಿ ಪತ್ರ ನೀಡಿದ್ದಾರೆ.

# ಚಿಕ್ಕಬಳ್ಳಾಪುರ ಬಿಜೆಪಿ ಅಧ್ಯಕ್ಷರ ಆಯ್ಕೆ ಬಗ್ಗೆ ಅಸಮಾಧಾನ

**ಶಿಡ್ಲಘಟ್ಟ:** ಜಿಲ್ಲಾ ಅಧ್ಯಕ್ಷರ ಆಯ್ಕೆ ಮಾಡುವಾಗ ಪಕ್ಷದ ಸಂಘಟನೆ, ಹಿರಿತನ ಇತ್ಯಾದಿ ಎಲ್ಲಾ ಅಂಶಗಳನ್ನು ಪರಿಗಣಿಸಿ ವಿವಾದ ಆಗದಂತೆ ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಅಧ್ಯಕ್ಷರ ಆಯ್ಕೆ ಮಾಡುವ ಕೆಲಸವನ್ನು ಪಕ್ಷದ ಹಿರಿಯರು ಮಾಡಬೇಕಿತ್ತು ಎಂದು ಶಿಡ್ಲಘಟ್ಟದ ಬಿಜೆಪಿ ಮುಖಂಡ ಸೀಕಲ್ ರಾಮಚಂದ್ರಗೌಡ ತಿಳಿಸಿದ್ದಾರೆ. ನಗರದ ತಮ್ಮ ಕಚೇರಿಯಲ್ಲಿ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು.

ಜಿಲ್ಲಾ ಬಿಜೆಪಿ ಅಧ್ಯಕ್ಷರ ಆಯ್ಕೆಯನ್ನು ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು, ಪಕ್ಷದ ಸಂಘಟನೆಯನ್ನು ದೃಷ್ಟಿಯಲ್ಲಿಟ್ಟುಕೊಂಡು ವಿವಾದಗಳು ಆಗದ ಹಾಗೆ ನೋಡಿಕೊಂಡು ಆಯ್ಕೆ ಮಾಡಬೇಕಾಗಿತ್ತು ಎಂದು ಹೇಳಿದರು. ನಾನು ಕೂಡ ಜಿಲ್ಲಾಧ್ಯಕ್ಷ ಸ್ಥಾನದ ಆಕಾಂಕ್ಷಿ ಆಗಿದ್ದೇನೆ, ಆದರೆ ಪಕ್ಷದ ಹಿರಿಯರು ನನಗೆ ಅಥವಾ ಯಾರಿಗೆ ಆಗಲಿ ಅಧ್ಯಕ್ಷ ಸ್ಥಾನ ಕೊಟ್ಟರೂ ನಾನು ಪಕ್ಷದ ತೀರ್ಮಾನವನ್ನು ಸ್ವಾಗತಿಸುತ್ತೇನೆ, ಆದರೆ ವಿವಾದ ಮಾಡಿ



ಪಕ್ಷದ ಸಂಘಟನೆಗೆ ಪೆಟ್ಟಾಗುವಂತೆ ಯಾರೂ ಮಾಡಬಾರದು ಎಂದು ಮನವಿ ಮಾಡಿದರು. ಸಂಸದರಾದ ಸುಧಾಕರ್ ಅವರು ಸೇರಿದಂತೆ ಪ್ರಮುಖರೆಲ್ಲರ ಅಭಿಪ್ರಾಯ, ಸಲಹೆ ಸೂಚನೆಗೆ ಮನ್ನಣೆ ನೀಡುವ ಕೆಲಸ ಪಕ್ಷದ ಹಿರಿಯರಿಂದ ಆಗಬೇಕು ಮತ್ತು ಪಕ್ಷದ ಒಳಗಿನ ಸಮಸ್ಯೆಗಳು ಆಂತರಿಕವಾಗಿ ಚರ್ಚೆ ಆಗಬೇಕೆ ವಿನಹ ಮಾಧ್ಯಮಗಳ ಮುಂದೆ ಅಥವಾ ಸಾರ್ವಜನಿಕವಾಗಿ ಅಲ್ಲ ಎಂದರು.

ಈ ಸಂದರ್ಭದಲ್ಲಿ ಗ್ರಾಮಾಂತರ ಮಂಡಲ ಅಧ್ಯಕ್ಷ ಸೀಕಲ್ ಆನಂದಗೌಡ, ಮಾಜಿ ಅಧ್ಯಕ್ಷ ಕಂಬದಹಳ್ಳಿ ಸುರೇಂದ್ರಗೌಡ, ನಗರಸಭೆ ಸದಸ್ಯ ನಾರಾಯಣಸ್ವಾಮಿ, ಕನಕಪ್ರಸಾದ್,ಪುರುಷೋತ್ತಮ್, ಮಧು ಮತ್ತಿತರರು ಹಾಜರಿದ್ದರು.

# ರಾಜ್ಯಾಧ್ಯಕ್ಷನಾಗಿ ಮುಂದುವರೆಯುವ ವಿಶ್ವಾಸ: ಬಿವೈವಿ

ಶಿವಮೊಗ್ಗ: ರಾಜ್ಯ ಬಿಜೆಪಿ ಘಟಕದ ಅಧ್ಯಕ್ಷರ ಚುನಾವಣೆ 8–10 ದಿನದಲ್ಲಿ ನಡೆಯಲಿದ್ದು, ತಾವೇ ಚುನಾವಣೆಯಲ್ಲಿ ಗೆದ್ದು ರಾಜ್ಯಾಧ್ಯಕ್ಷರಾಗಿ ಮುಂದುವರೆಯುವ ವಿಶ್ವಾಸವನ್ನು ಬಿಜೆಪಿಯ ಹಾಲಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ವ್ಯಕ್ತಪಡಿಸಿದ್ದಾರೆ.

ಇಲ್ಲಿ ಮಾತನಾಡಿದ ಅವರು, "8–10 ದಿನದಲ್ಲಿ ರಾಜ್ಯಾಧ್ಯಕ್ಷರ ಚುನಾವಣೆ ನಡೆದು ಎಲ್ಲ ಗೊಂದಲಗಳಿಗೆ ತೆರೆ ಬೀಳಲಿದೆ. ಭಾರತೀಯ ಜನತಾ ಪಾರ್ಟಿಯಲ್ಲಿ ಆಂತರಿಕ ಪ್ರಜಾಪ್ರಭುತ್ವ ಇದೆ. ಭವಿಷ್ಯ ಯಾವುದೇ ಒಂದು ರಾಜಕೀಯ ಪಕ್ಷದಲ್ಲಿ ಇಷ್ಟೊಂದು ವ್ಯವಸ್ಥಿತವಾಗಿ ಸಂಘಟನೆಯ ಚುನಾವಣೆ ನಡೆಯುತ್ತದೆ ಎಂದರೆ ಅದು ಬಿಜೆಪಿಯಲ್ಲಿ ಮಾತ್ರ" ಎಂದರು

"ಮಂಡಲ, ಜಿಲ್ಲಾ, ರಾಜ್ಯಾಧ್ಯಕ್ಷರ ಹಾಗೂ ರಾಷ್ಟ್ರೀಯ ಅಧ್ಯಕ್ಷರ ಚುನಾವಣೆ ಎಲ್ಲವು ಸಹ ವ್ಯವಸ್ಥಿತವಾಗಿ ನಮ್ಮ ಕೇಂದ್ರೀಯ ವರಿಷ್ಠರು ನಿರ್ಧಾರ ಮಾಡಿದಂತೆ ನಡೆಯುತ್ತದೆ. ರಾಜ್ಯದಲ್ಲಿ ಕಳೆದ ಒಂದು ವರ್ಷದಿಂದ ನಮ್ಮ ಪಕ್ಷದ ಹಿರಿಯರು, ಕಾರ್ಯಕರ್ತರು ಒಟ್ಟಾಗಿ ಈ ಭ್ರಷ್ಟ, ದುಷ್ಟ



ರಾಜ್ಯ ಸರ್ಕಾರದ ವಿರುದ್ಧ ಹೋರಾಟ ಮಾಡಿಕೊಂಡು ಬಂದಿದ್ದೇವೆ. ನನ್ನ ಕಳೆದ ಒಂದು ವರ್ಷದ ಅವಧಿ ನಾನು ಯಾವ ರೀತಿಯಲ್ಲಿ ರಾಜ್ಯಾಧ್ಯಕ್ಷನಾಗಿ ಕೆಲಸ ಮಾಡಿದ್ದೇನೆಂದು ರಾಜ್ಯದ ಜನತೆಗೆ, ಕಾರ್ಯಕರ್ತರಿಗೆ, ನಮ್ಮ ಪಕ್ಷದ ಹಿರಿಯರಿಗೆ, ಶಾಸಕರಿಗೆ ತಿಳಿದಿದೆ. ನನಗೆ ಸಂಪೂರ್ಣವಾಗಿ ವಿಶ್ವಾಸವಿದೆ. ಪಕ್ಷದ ಅಧ್ಯಕ್ಷನಾಗಿ ಮುಂದುವರೆಯುತ್ತನೆ" ಎಂಬ ವಿಶ್ವಾಸ ವ್ಯಕ್ತಪಡಿಸಿದರು.

"ಈ ಬಾರಿಯ ಜಿಲ್ಲಾಧ್ಯಕ್ಷರ ಚುನಾವಣೆಯಲ್ಲಿ ಹೆಚ್ಚಿನ ಪೈಪೋಟಿ ಇತ್ತು. ಅದೇ ರೀತಿ ರಾಜ್ಯಾಧ್ಯಕ್ಷರ ಚುನಾವಣೆಗೂ ಸಹ ಪಕ್ಷದ ಹಿರಿಯರು ಅವರ ಅಪೇಕ್ಷೆಯನ್ನು ವ್ಯಕ್ತಪಡಿಸುತ್ತಿದ್ದಾರೆ. ಎಲ್ಲವನ್ನು ಪಕ್ಷದ ವರಿಷ್ಠರು ಗಮನಿಸುತ್ತಿದ್ದಾರೆ, ಎಲ್ಲವೂ ಒಳ್ಳೆಯದಾಗುತ್ತದೆ. ಸುಖಾಂತ್ಯವಾಗುತ್ತದೆ ಎಂಬ ನಂಬಿಕೆ ಇದೆ" ಎಂದರು."ಪಕ್ಷಕ್ಕೆ ಈಗಾಗಲೇ ಸಾಕಷ್ಟು ಡ್ಯಾಮೇಜ್‌ಆಗಿದೆ. 8–10 ದಿನದಲ್ಲಿ ರಾಜ್ಯಾಧ್ಯಕ್ಷರ ಚುನಾವಣೆ ಇದೆ. ಆಗ ಎಲ್ಲಾ ಸರಿ ಹೋಗುತ್ತದೆ" ಎಂದು ಉತ್ತರಿಸಿದರು.

ನಾನು ಯಾರ ವಿರುದ್ಧ ಬಹಿರಂಗ ಹೇಳಿಕೆ ನೀಡಿಲ್ಲ: "ನಾನು ಕಳೆದ ಒಂದು ವರ್ಷದಿಂದ ಯಾರ ವಿರುದ್ಧ ಹಾಗೂ ಪಕ್ಷದ ವಿರುದ್ಧ ಹೇಳಿಕೆ ನೀಡಿಲ್ಲ. ಹಾಗಾಗಿ ರಾಜ್ಯಾಧ್ಯಕ್ಷನಾಗಿ ನನ್ನ ಕರ್ತವ್ಯದ ಅರಿವು ಇದೆ. ದೊಡ್ಡ ಜವಾಬ್ದಾರಿಯನ್ನು ಬಹಳ ಯಶಸ್ವಿಯಾಗಿ ನಡೆಸಿಕೊಂಡು ಬಂದಿದ್ದೇನೆ. ಹೀಗಾಗಿ 1–8 ದಿನದಲ್ಲಿ ರಾಜ್ಯಾಧ್ಯಕ್ಷರು ಯಾರು ಅಂತ ಉತ್ತರ ಸಿಗುತ್ತದೆ. ತದನಂತರ ಎಲ್ಲದಕ್ಕೂ ಉತ್ತರ ಸಿಗುತ್ತದೆ" ಎಂದರು.

ಈ ವೇಳೆ ಎಂಎಲ್ಸಿಗಳಾದ ಡಿ.ಎಸ್. ಅರುಣ್‌ಹಾಗೂ ಧನಂಜಯ್‌ಸರ್ಜಿ ಅವರು ಹಾಜರಿದ್ದರು.

# ಕಾಲೇಜು ವಿದ್ಯಾರ್ಥಿಗಳಿಗೆ ಶಿಕ್ಷಕರಾದ ತಹಶೀಲ್ದಾರರು

**ಮುಳಬಾಗಿಲು:** ಪಂಚವಾರ್ಷಿಕ ಯೋಜನೆಗಳಲ್ಲಿ ಹೇಗೆ ಅಭಿವೃದ್ಧಿ ಬಗ್ಗೆ ಯೋಜನೆ ರೂಪಿಸುತ್ತಾರೋ ಹಾಗೆಯೇ ವಿದ್ಯಾರ್ಥಿಗಳು ಯಶಸ್ವಿಯಾಗ ಬೇಕಾದರೆ ಯೋಜನಾಬದ್ಧವಾಗಿ ಅಧ್ಯಯನ ಮಾಡಬೇಕೆಂದು ಪಾಠ ಮಾಡಿದವರು ಮುಳಬಾಗಿಲು ತಾಲೂಕಿನ ತಹಸೀಲ್ದಾರರಾದ ವಿ.ಗೀತಾ.




ಮುಳಬಾಗಿಲು ನಗರದ ಸರ್ಕಾರಿ ಪದವಿ ಪೂರ್ವ ಬಾಲಕಿಯರ ಕಾಲೇಜಿನಲ್ಲಿ ನಡೆದ ಸಾಂಸ್ಕೃತಿಕ ಕಾರ್ಯಕ್ರಮಗಳ ಸಮಾರೋಪ ಸಮಾರಂಭದ ಮುಖ್ಯ ಅತಿಥಿಯಾಗಿ ಬಂದಿದ್ದ ಅವರು ವಿದ್ಯಾರ್ಥಿಗಳ ಭವಿಷ್ಯದ ಬಗ್ಗೆ ಮೂವತ್ತು ನಿಮಿಷ ಪಾಠ ಮಾಡಿದರು.ಪ್ರತೀ ದಿನ ಎಂಟುಗಂಟೆಗಳ ಕಾಲ ಅಧ್ಯಯನ ಮಾಡಬೇಕು ಅದರಲ್ಲಿ ಎರಡು ಗಂಟೆ ಬರೆಯುವುದಕ್ಕೆ ಮೀಸಲಿಡಿ. ಈ ರೀತಿಯಲ್ಲಿ ಆಧ್ಯಯನ ಕ್ರಮಗಳಿಂದ ಯಶಸ್ಸಿನ ಉತ್ತುಂಗಕ್ಕೇರಬಹುದು ಆಗ ಯಶಸ್ಸು ನಿಮ್ಮನ್ನು ಮಾತನಾಡಿಸುತ್ತದೆ. ಎಲ್ಲರೂ ವಿವೇಕಾನಂದರ ಆದರ್ಶಗಳನ್ನು ಅಳವಡಿಸಿಕೊಳ್ಳಿ. ಭಾರತದ ಸಂಸ್ಕೃತಿಯ ಪ್ರತೀಕ ಹೆಣ್ಣು ಮಕ್ಕಳು. ಪ್ರಪಂಚದಲ್ಲಿ ಭಾರತಕ್ಕೆ ಈ ಕಾರಣದಿಂದ ಗೌರವ ಹೆಚ್ಚಿದೆ. ಮಹಿಳೆಯರು ಸಂಸ್ಕೃತಿಯನ್ನು ಉಳಿಸುವುದರಲ್ಲಿ ಹೆಚ್ಚು ಜವಾಬ್ದಾರಿಯನ್ನು ಹೊಂದಿರುತ್ತಾರೆ.

ಎಲ್ಲಾ ಕ್ಷೇತ್ರಗಳಲ್ಲೂ ಸಾಧನೆ ಮಾಡಬಲ್ಲ ಅಪೂರ್ವ ಶಕ್ತಿಯನ್ನು ಹೊಂದಿರುತ್ತಾಳೆ.ಈ ಕಾರಣದಿಂದ ಹೆಣ್ಣು ಮಕ್ಕಳು ಶಿಕ್ಷಣದ ಮೂಲಕ ಪ್ರಸಿದ್ಧಿಯಾಗಬೇಕೆಂದು ಕರೆ ನೀಡಿದರು. ಇದೇ ಕಾರ್ಯಕ್ರಮಕ್ಕೆ ಅತಿಥಿಯಾಗಿ ಆಗಮಿಸಿದ್ದ ಉಪಪ್ರಾಂಶಪಾಲರಾದ ಆನಂದ್ ಅವರು ಅಧ್ಯಯನದ ಮಹತ್ವದ ಬಗ್ಗೆ ತಿಳಿ ಹೇಳಿದರು. ಶಿಕ್ಷಣವು ಸಮಾಜದಲ್ಲಿ ಗೌರವ, ಸ್ಥಾನಮಾನವನ್ನು ಹೆಚ್ಚಿಸುತ್ತದೆ. ನಾನು ದಿನಕ್ಕೆ ಹದಿನೆಂಟು ಗಂಟೆಗಳ ಕಾಲ ಅಧ್ಯಯನ ಮಾಡಿದ್ದರಿಂದ ಸಾಧನೆ ಮಾಡಲು ಸಾಧ್ಯವಾಯ್ತು. ನಿಮಗೆ ಸಮಾಜದಲ್ಲಿ ಮಾದರಿ ಸಾಧಕರಿದ್ದಾರೆ. ಅವರಂತೆ ನೀವಾಗಬೇಕೆಂದು ಧೃಡ ನಿರ್ಧಾರ ಮಾಡಿಕೊಂಡು ಅಧ್ಯಯನ ಮಾಡಿ ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲರಾದ ವಾಲೆಪ್ಪನವರು ಇಲಾಖೆಯ ನಿಯಮಗಳಂತೆ ಕಾಲೇಜಿನ ಆರಂಭದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳ ಉದ್ಘಾಟನೆ ಮಾಡಿದಂತೆ ಈ ದಿನ ಸಮಾರಂಭ ಮಾಡುತ್ತಿದ್ದೇವೆ. ಎಚ್ಚರ ತಪ್ಪದೆ ಅಧ್ಯಯನದಲ್ಲಿ ತೊಡಗಿಸಿಕೊಳ್ಳಿ ಕಡಿಮೆ ದಿನಗಳಲ್ಲಿ ಹೆಚ್ಚು ಓದಿರೆಂದು ನೂರರಷ್ಟು ಫಲಿತಾಂಶ ನೀಡಬೇಕೆಂದು ಕಿವಿ ಮಾತು ಹೇಳಿದರು. ವಿದ್ಯಾರ್ಥಿಗಳಿಗೆ ಅತಿಥಿಗಳಿಂದ ಬಹುಮಾನ ವಿತರಣೆ ಮಾಡಲಾಯ್ತು. ಇದೇ ಸಂದರ್ಭದಲ್ಲಿ ಉಪನ್ಯಾಸಕರಾದ ಜೆಜಿ. ನಾಗರಾಜ,ಜಯರಾಮರೆಡ್ಡಿ ವಿದ್ಯಾರ್ಥಿಗಳಿಗೆ ಹಿತವಚನ ನೀಡಿದರು. ಕಾರ್ಯಕ್ರಮದಲ್ಲಿ ಉಪನ್ಯಾಸಕರಾದ ನಾರಾಯಣಸ್ವಾಮಿ, ಮಿರ್ಜಾ ಕಾಮಿಲ್ ಬೇಗ್ ,ಶ್ರೀಹರಿ,ಕವಿತ,ಶ್ರೀನಿವಾಸ,ಗಣೇಶ್ ಪ್ರಸಾದ್ , ಮಂಜುನಾಥ,ಭಾರ್ಗವಿ,ವೆ ೋನಿಕ,ಪ್ರಶಾಂತ್,ವನಜಾಕ್ಷಿ,ಧನಂಜಯ ್,ಇಮ್ತಿಯಾಜ್ ಪಾಶ ಮುಂತಾದವರು ಭಾಗವಹಿಸಿದ್ದರು.ವಿದ್ಯಾರ್ಥಿಗಳು ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಿದ್ದರು.

# ಅಧ್ಯಕ್ಷ-ಉಪಾಧ್ಯಕ್ಷ ಅವಿರೋಧ ಆಯ್ಕೆ

**ಶಿಡ್ಲಘಟ್ಟ:** ತಾಲ್ಲೂಕು ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್‌ನ ಐದು ವರ್ಷಗಳ ಅವಧಿಯ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಜೆಡಿಎಸ್ ಬೆಂಬಲಿತ ಬಂಕ್ ಮುನಿಯಪ್ಪ, ಉಪಾಧ್ಯಕ್ಷರಾಗಿ ರಾಮಚಂದ್ರ ಅವಿರೋಧ ಆಯ್ಕೆಯಾಗಿದ್ದಾರೆ.



ಆನೂರು ಪರಿಶಿಷ್ಟ ಪಂಗಡ ಮೀಸಲು ಕ್ಷೇತ್ರದಿಂದ ಗೆದ್ದಿರುವ ಬಂಕ್ ಮುನಿಯಪ್ಪ ಅವರು ಅಧ್ಯಕ್ಷ ಸ್ಥಾನಕ್ಕೆ ನಾಮಪತ್ರ ಸಲ್ಲಿಸಿದ್ದು, ದೊಡ್ಡತೇಕಹಳ್ಳಿ ಸಾಮಾನ್ಯ ಕ್ಷೇತ್ರದಿಂದ ಗೆದ್ದಿದ್ದ ಡಿ.ಎನ್.ರಾಮಚಂದ್ರ ಉಪಾಧ್ಯಕ್ಷ ಸ್ಥಾನಕ್ಕೆ ನಾಮ ಪತ್ರ ಸಲ್ಲಿಸಿದ್ದರು.

ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಬೇರೆ ಯಾರೂ ನಾಮ ಪತ್ರ ಸಲ್ಲಿಸದ ಕಾರಣ ಅಧ್ಯಕ್ಷರಾಗಿ ಬಂಕ್ ಮುನಿಯಪ್ಪ, ಉಪಾಧ್ಯಕ್ಷರನ್ನಾಗಿ ಡಿ.ಎನ್.ರಾಮಚಂದ್ರಅವರು ಉಪಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆ ಆಗಿರುವುದಾಗಿ ಚುನಾವಣಾಕಾರಿ ಮಂಜುನಾಥ್ ಘೋಷಿಸಿದರು.

ಒಟ್ಟು 14 ಮಂದಿ ಸಂಖ್ಯಾಬಲದ ಪಿಕಾರ್ಡ್ ಬ್ಯಾಂಕ್‌ನಲ್ಲಿ 9 ಮಂದಿ ಜೆಡಿಎಸ್ ಬೆಂಬಲಿತ ಹಾಗೂ 5 ಮಂದಿ ಕಾಂಗ್ರೆಸ್ ಬೆಂಬಲಿತ ನಿರ್ದೇಶಕರಿದ್ದು ಇದೀಗ ಪಿಕಾರ್ಡ್ ಬ್ಯಾಂಕ್‌ನ ಅಧಿಕಾರ ಜೆಡಿಎಸ್‌ನ ಪಾಲಾಗಿದೆ.

ಅಧ್ಯಕ್ಷರಾಗಿ ಹಿರಿಯ ಸಹಕಾರಿ ಧುರೀಣ ಬಂಕ್ ಮುನಿಯಪ್ಪ 4 ನೇ ಭಾರಿಗೆ ಆಯ್ಕೆಯಾಗಿದ್ದಾರೆ.

ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಘೋಷಣೆ ಆಗುತ್ತಿದ್ದಂತೆ ಬ್ಯಾಂಕ್‌ನ ಆವರಣದಲ್ಲಿ ಅಪಾರ ಸಂಖ್ಯೆಯಲ್ಲಿ ನೆರೆದಿದ್ದ ಜೆಡಿಎಸ್ ಪಕ್ಷದ ಕಾರ್ಯಕರ್ತರು, ಮುಖಂಡರು ವಿಜಯೋತ್ಸವ ನಡೆಸಿದರುಪಟಾಕಿ ಸಿಡಿಸಿ ಸಿಹಿ ಹಂಚಿ ಸಂಭ್ರಮಿಸಿದರು.

ನೂತನ ಅಧ್ಯಕ್ಷ ಬಂಕ್ ಮುನಿಯಪ್ಪ ಹಾಗೂ ಉಪಾಧ್ಯಕ್ಷ ಡಿ.ಎನ್. ರಾಮಚಂದ್ರ ಅವರನ್ನು ಮೇಲೂರು ಗ್ರಾಮದ ಗೃಹ ಕಚೇರಿಯಲ್ಲಿ ಶಾಸಕರಾದ ಬಿ.ಎನ್.ರವಿಕುಮಾರ್ ಅವರು ಅಭಿನಂದಿಸಿದರು ಈ ವೇಳೆ ಜೆಡಿಎಸ್ ನ ತಾಲ್ಲೂಕು ಅಧ್ಯಕ್ಷ ಡಿ.ಬಿ. ವೆಂಕಟೇಶ್,ತಾ.ಪಂ.ಮಾಜಿ ಅಧ್ಯಕ್ಷ ಕೆ.ಲಕ್ಷ್ಮೀನಾರಾಯಣರೆಡ್ಡಿ ಹಾಗು ಬ್ಯಾಂಕಿನ ನಿರ್ದೇಶಕರು,ಮುಖಂಡರು ಹಾಜರಿದ್ದರು.

# ಈಜಲು ತೆರಳಿದ್ದ ಇಬ್ಬರು ಮಕ್ಕಳು ನೀರುಪಾಲು

ದಾವಣಗೆರೆ: ಕಾಲುವೆಯಲ್ಲಿ ಈಜಲು ಹೋಗಿ ಇಬ್ಬರು ಮಕ್ಕಳು ಸಾವನಪ್ಪಿರುವ ಘಟನೆ ದಾವಣಗೆರೆ ತಾಲೂಕಿನ ಕುರ್ಕಿ ಗ್ರಾಮದ ಕೂಗಳತೆಯಲ್ಲಿ ಹರಿಯುವ ಭದ್ರಾ ನಾಲೆಯಲ್ಲಿ ಘಟನೆ ನಡೆದಿದೆ. ಕುರ್ಕಿ ಗ್ರಾಮದ ಪಾಂಡು (16) ಹಾಗೂ ತುರ್ಚಘಟ್ಟ ಗ್ರಾಮದ ಯತೀಂದ್ರ (16) ಮೃತಪಟ್ಟ ಮಕ್ಕಳೆಂದು ಸ್ಥಳೀಯರು ಮಾಹಿತಿ ನೀಡಿದ್ದಾರೆ.



ಶಾಲೆಗೆ ರಜೆ ಹಿನ್ನೆಲೆ ಈಜಲು ಬಂದಿದ್ದ ಮಕ್ಕಳು: ಮೃತ ಮಕ್ಕಳಿಬ್ಬರು ದೂರದ ತುರ್ಚಘಟ್ಟ ಗ್ರಾಮದ ಗುರುಕುಲ ವಿದ್ಯಾರ್ಥಿ ನಿಲಯದಲ್ಲಿ ವ್ಯಾಸಂಗ ಮಾಡುತ್ತಿದ್ದರು. ಇಬ್ಬರೂ ಸ್ನೇಹಿತರಾಗಿದ್ದು ಭಾನುವಾರ ಶಾಲೆಗೆ ರಜೆ ಇದ್ದ ಕಾರಣ ಕುರ್ಕಿ ಗ್ರಾಮದ ಮುಖ್ಯ ಕಾಲುವೆಯಲ್ಲಿ ಈಜಲು ಬಂದಿದ್ದರು. ಈ ವೇಳೆ ಕಾಲುವೆಯಲ್ಲಿ ಮುಳುಗಿ ಮೃತಪಟ್ಟಿದ್ದಾರೆ ಎಂದು ತಿಳಿದು ಬಂದಿದೆ.

ಶಾಸಕರಿಂದ ಸಾಂತ್ವನ: ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ ಭೇಟಿ ನೀಡಿ ಮೃತರ ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು.

ಓರ್ವ ಬಾಲಕನ ಶವ ಪತ್ತೆ, ಮತ್ತೋರ್ವನಿಗಾಗಿ ಶೋಧ: ಕುರ್ಕಿ ಗ್ರಾಮದ ಪಾಂಡು ಮೃತದೇಹ ಪತ್ತೆಯಾಗಿದ್ದು, ತುರ್ಚಘಟ್ಟ ಗ್ರಾಮದ ಯತೀಂದ್ರನಿಗಾಗಿ ಶೋಧ ಕಾರ್ಯ ನಡೆದಿದೆ. ಹದಡಿ ಪೊಲೀಸರು ನುರಿತ ಈಜುಪಟುಗಳ ಮೂಲಕ ಶೋಧ ಕಾರ್ಯ ನಡೆಸುತ್ತಿದ್ದಾರೆ. ಗುರುಕುಲ ವಸತಿ ಶಾಲೆಯಲ್ಲಿ ಈ ಬಾಲಕರು ಎಸ್‌ಎಸ್‌ಎಲ್‌ಸಿಯಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದರು ಎಂದು ತಿಳಿದು ಬಂದಿದೆ.

ಭಾನುವಾರ ಶಾಲೆಗೆ ರಜೆ ಇದ್ದ ಕಾರಣ ಹೇರ್ ಕಟಿಂಗ್ ಮಾಡಿಸಿಕೊಳ್ಳಲು ಇಬ್ಬರು ಕುರ್ಕಿ ಗ್ರಾಮಕ್ಕೆ ಬಂದಿದ್ದರು. ಈ ವೇಳೆ ಗ್ರಾಮದ ಬಳಿ ಹರಿಯುತ್ತಿರುವ ದೊಡ್ಡದಾದ ಭದ್ರಾ ಕಾಲುವೆಯಲ್ಲಿ ಇಬ್ಬರೂ ಈಜಲು ನೀರಿಗಿಳಿದಿದ್ದರು. ಮೊದಲು ಪಾಂಡು ಕಾಲುವೆಗೆ ಜಿಗಿದು ಈಜಿದ್ದಾನೆ. ನಂತರ ಯತೀಂದ್ರ ನೀರಿಗೆ ಜಿಗಿದಿದ್ದಾನೆ. ಆದರೆ ಯತೀಂದ್ರನಿಗೆ ಈಜು ಬಾರದ ಕಾರಣ ನೀರಲಿ ಮುಳುಗಿತ್ತಿದ್ದ. ಆತ ರಕ್ಷಣೆಗೆ ಪಾಂಡು ಮುಂದಾಗಿದ್ದ. ಆದರೇ ಇಬ್ಬರೂ ನೀರಲ್ಲಿ ಕೊಚ್ಚಿಕೊಂಡು ಹೋಗಿದ್ದಾರೆ ಎಂದು ಹೇಳಲಾಗಿದೆ.

ಬಾಲಕರು ನೀರಿಗಿಳಿದ ಸಮೀಪವೇ ಕಾಲುವೆಗೆ ಗೇಟ್‌ಗಳಿವೆ. ಈ ಗೇಟ್ ಬಳಿ ಪಾಂಡು ಮೃತದೇಹ ಪತ್ತೆಯಾಗಿದೆ. ಯತೀಂದ್ರನಿಗಾಗಿ ಶೋಧ ಕಾರ್ಯ ನಡೆದಿದೆ ಎಂದು ಹದಡಿ ಪೋಲಿಸರು ಮಾಹಿತಿ ನೀಡಿದ್ದಾರೆ.

# ಕ್ರೀಡಾ ನೈಪುಣ್ಯತೆ ಹೊಂದಿರಬೇಕು: ಸಿ.ಪುಟ್ಟರಂಗಶೆಟ್ಟಿ

**ಚಾಮರಾಜನಗರ:** ಕ್ರೀಡೆಗಳಲ್ಲಿ ಭಾಗವಹಿಸುವವರು ಶಕ್ತಿಶಾಲಿಯಾಗುವುದ ರೊಂದಿಗೆ ಕ್ರೀಡಾ ನೈಪುಣ್ಯತೆ ಹೊಂದಿರಬೇಕು ಎಂದು ಎಂಎಸ್ ಐಎಲ್ ಅಧ್ಯಕ್ಷ , ಶಾಸಕ ಸಿ.ಪುಟ್ಟರಂಗಶೆಟ್ಟಿ ಅಭಿಪ್ರಾಯಪಟ್ಟರು.



ಚಾಮರಾಜನಗರ ತಾಲ್ಲೂಕಿನ ವೆಂಕಟಯ್ಯನ ಛತ್ರ ಸರ್ಕಾರಿ ಪ್ರೌಢಶಾಲೆ ಆವರಣದಲ್ಲಿ ಶನಿವಾರ ಸಂಜೆ ಚಾಮರಾಜನಗರ ಜಿಲ್ಲಾ ಖೊಖೊ ಸಂಸ್ಥೆ ವತಿಯಿಂದ ಆಯೋಜಿಸಿರುವ ಚಾಮರಾಜನಗರ ಜಿಲ್ಲಾಮಟ್ಟದ ಹೊನಲು ಬೆಳಕಿನ ಪಂದ್ಯಾವಳಿಯನ್ನು ಉದ್ಘಾಟಿಸಿ ಮಾತನಾಡಿದರು.

ಈಚಿನ ವರ್ಷಗಳಲ್ಲಿ ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ನಡೆದ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ಹೆಸರು ಕೀರ್ತಿ ಸಂಪಾದಿಸಿದ್ದಾರೆ. ಜಿಲ್ಲೆಯ ವೆಂಕಟಯ್ಯನಛತ್ರ ಗ್ರಾಮದಲ್ಲಿ ಹಲವಾರು ವರ್ಷಗಳಿಂದ ಗ್ರಾಮೀಣ ಕ್ರೀಡೆಯಾದ ಖೊಖೊ ಕ್ರೀಡೆಯನ್ನು ಪ್ರದರ್ಶಿಸುತ್ತ ಬಂದಿರುವುದು ಸಂತಸದ ಸಂಗತಿ, ಖೊಖೊವನ್ನು ಸಣ್ಣ ಬಾಲಕ, ಬಾಲಕಿಯರು ಆಡಬಹುದು, ಕಬ್ಬಡ್ಡಿಯನ್ನು ಶಕ್ತಿವಂತವರು ಮಾತ್ರ ಆಡಲು ಸಾಧ್ಯ. ಜಿಲ್ಲೆಯ ವಿವಿಧೆಡೆಯಿಂದ ಆಗಮಿಸಿರುವ ಕ್ರೀಡಾಪಟುಗಳು ಉತ್ತಮವಾಗಿ ಆಟವಾಡುವ ಮೂಲಕ ಜಿಲ್ಲೆಗೆ ಕೀರ್ತಿ ತರಬೇಕು ಎಂದು ಸಲಹೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಚಾಮರಾಜನಗರ ಜಿಲ್ಲಾ ಖೊಖೊ ಸಂಸ್ಥೆಯ ಅಧ್ಯಕ್ಷ ಎಚ್.ಬಿ.ಶಮಿತ್ ಕುಮಾರ್ ಮಾತನಾಡಿ, ಚಾಮರಾಜನಗರ ಜಿಲ್ಲೆಯಲ್ಲಿ ಈಚಿನ ದಿನಗಳಲ್ಲಿ ಗ್ರಾಮೀಣ ಕ್ರೀಡಾಕೂಟಗಳು ಹೆಚ್ಚಿನಮಟ್ಟದಲ್ಲಿ ಆಯೋಜನೆಯಾಗುತ್ತಿವೆ. ಖೊಖೊ ಕ್ರೀಡೆಯಲ್ಲಿ ರಾಷ್ಟ್ರಮಟ್ಟದಲ್ಲಿ ಪ್ರತಿನಿಧಿಸಿದ್ದ ಕ್ರೀಡಾಪಟು ಚೈತ್ರಾಳಿಗೆ ಸರಕಾರ 5 ಲಕ್ಷ ರೂ. ಪುರಸ್ಕಾರ ನೀಡಿ, ಗೌರವಿಸಿದೆ. ಅವರಿಗೆ 50 ಲಕ್ಷ ರೂ. ಪ್ರೋತ್ಸಾಹಕ ಬಹುಮಾನ ನೀಡಬೇಕಿತ್ತು. ಕ್ರೀಡಾಪಟುಗಳಿಗೆ ಜನಪ್ರತಿನಿಧಿಗಳು ಸೇರಿದಂತೆ ಕ್ರೀಡಾ ಇಲಾಖಾಧಿಕಾರುಗಳು ಪ್ರೋತ್ಸಾಹ ನೀಡಬೇಕು ಎಂದು ಒತ್ತಾಯಿಸಿದರು.

ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಶಂಕರ್ ಮಾತನಾಡಿ, ಶಿಕ್ಷಣ ಹಾಗೂ ದೈಹಿಕ ಶಿಕ್ಷಣ ಒಂದೇ ನಾಣ್ಯದ ಒಂದೇ ಮುಖಗಳು, ಎರಡರಲ್ಲೂ ಸಾಧನೆ ಮಾಡಬೇಕಾದರೆ ಪರಿಶ್ರಮ ಅಗತ್ಯ ಎಂದರು.

ಕಾರ್ಯಕ್ರಮದಲ್ಲಿ ಕ್ರೀಡಾಸಾಧಕರನ್ನು ಸನ್ಮಾನಿಸಲಾಯಿತು.

ಚಾಮರಾಜನಗರ ಜಿಲ್ಲಾ ಖೊಖೊ ಸಂಸ್ಥೆಯ ಅಧ್ಯಕ್ಷ ಶಮಿತ್ ಕುಮಾರ್ ಟಾಸ್ ಚಿಮ್ಮಿಸಿ ಪಂದ್ಯಾವಳಿಗೆ ಚಾಲನೆ ನೀಡಿದರು.

ಗೌರವಾಧ್ಯಕ್ಷ ಪ್ರಶಾಂತ್, ಪ್ರಧಾನ ಕಾರ್ಯದರ್ಶಿ ನಟರಾಜು,ತಾಲ್ಲೂಕು ದೈಹಿಕ ಶಿಕ್ಷಣ ಪರಿವೀಕ್ಷಕ ಬಸವರಾಜು, ಸರ್ಕಾರಿ ಪದವಿಪೂರ್ವ ಕಾಲೇಜು ಪ್ರಾಂಶುಪಾಲ ಮಲ್ಲೇಶ್, ಸರ್ಕಾರಿ ಪ್ರೌಢಶಾಲೆ ಉಪಪ್ರಾಂಶುಪಾಲೆ ನಾಗರತ್ನ ಎಸ್ಡಿಎಂಸಿ ಅಧ್ಯಕ್ಷ ಶಶಿಕುಮಾರ್, ಗ್ರಾಪಂ ಸದಸ್ಯ ಶಿವಮಲ್ಲು ಜಿ,ಪಂ ಮಾಜಿ ಸದಸ್ಯ ರಮೇಶ್, ತಾ,ಪಂ ಮಾಜಿ ಸದಸ್ಯ ಎಚ್,ಎಂ ಮಹದೇವಶೆಟ್ಟಿ, ಚಿಕ್ಕಮೋಳೆ ಮಹೇಶ್, ರಾಜು ಹೊಸೂರು, ಸೇರಿದಂತೆ ಚಾಮರಾಜನಗರ ಜಿಲ್ಲಾ ಖೊಖೊ ಸಂಸ್ಥೆ ಪದಾಧಿಕಾರಿಗಳು ಹಾಗೂ ಸದಸ್ಯರು 16 ತಂಡಗಳ ಕ್ರೀಡಾಪಟುಗಳು ಹಾಜರಿದ್ದರು.

# 800 ಚಾಲಕರ ವಿರುದ್ಧ ಡ್ರಿಂಕ್ ಡ್ರೈವ್ ಕೇಸ್ ದಾಖಲು

**ಬೆಂಗಳೂರು:** ನಗರದಲ್ಲಿ ಪಾನಮತ್ತ ಹಾಗೂ ಅತಿವೇಗದ ವಾಹನ ಚಾಲನೆಗೆ ಬ್ರೇಕ್ ಹಾಕಲು ಬೆಂಗಳೂರು ಸಂಚಾರ ಪೊಲೀಸರು ವಿಶೇಷ ಕಾರ್ಯಾಚರಣೆ ಕೈಗೊಂಡಿದ್ದಾರೆ. ಸಂಚಾರ ನಿಯಮ ಉಲ್ಲಂಘಿಸಿದವರ ವಿರುದ್ಧ ಕಳೆದ ಒಂದು ವಾರದಲ್ಲಿ ಬರೋಬ್ಬರಿ 800ಕ್ಕೂ ಅಧಿಕ ಪ್ರಕರಣಗಳನ್ನ ದಾಖಲಿಸಿ, 2.30 ಲಕ್ಷ ರೂ ದಂಡ ವಿಧಿಸಿದ್ದಾರೆ.



ಜನವರಿ 27ರಿಂದ ಫೆ.2ರವರೆಗೆ ನಗರದ 50 ಸಂಚಾರ ಠಾಣೆಗಳ ವ್ಯಾಪ್ತಿಯಲ್ಲಿ ಕಾರ್ಯಾಚರಣೆ ಕೈಗೊಳ್ಳಲಾಗಿದೆ. ಈ ವೇಳೆ 62,300 ವಾಹನಗಳನ್ನು ಪರಿಶೀಲಿಸಿ, ಆ ಪೈಕಿ ಮದ್ಯಪಾನ ಮಾಡಿ ವಾಹನ ಚಾಲನೆ ಮಾಡಿದ 800 ವಾಹನಗಳ ಚಾಲಕರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ. ಅದೇ ರೀತಿ ಅತಿವೇಗದ ಚಾಲನೆ ಮಾಡಿದ ನಿಯಮ ಉಲ್ಲಂಘಿಸಿದ 228 ವಾಹನಗಳ ಚಾಲಕರ ವಿರುದ್ಧ ಪ್ರಕರಣ ದಾಖಲಿಸಿಕೊಂಡು 2,30,000 ರೂ ದಂಡ ವಿಧಿಸಲಾಗಿದೆ.

ಬೆಂಗಳೂರು ನಗರದಲ್ಲಿ ಮದ್ಯಪಾನ ಮಾಡಿ ಮತ್ತು ಅತಿವೇಗದಲ್ಲಿ ವಾಹನ ಚಲಾಯಿಸುವ ಚಾಲಕರ ಹಾವಳಿ ತಡೆಗಟ್ಟಲು ಮತ್ತು ರಸ್ತೆ ಸುರಕ್ಷತೆಗಾಗಿ ವಿಶೇಷ ಕಾರ್ಯಾಚರಣೆಗಳನ್ನು ಮುಂದೆಯೂ ಹಮ್ಮಿಕೊಳ್ಳುವುದಾಗಿ ಬೆಂಗಳೂರು ಸಂಚಾರಿ ಪೊಲೀಸರು ಪ್ರಕಟಣೆ ಹೊರಡಿಸಿದ್ದಾರೆ.

# ಉದ್ಯೋಗ ಸೃಷ್ಟಿಯಲ್ಲಿ ಈ ಬಾರಿಯ ಬಜೆಟ್ ಅತ್ಯುತ್ತಮ: ಎಚ್ಡಿಕೆ

**ಶಿಡ್ಲಘಟ್ಟ:** ಈ ದೇಶದ ಮಹಿಳೆಯರು,ರೈತರು, ಆರ್ಥಿಕವಾಗಿ ಹಿಂದುಳಿದವರಿಗೆ ಹಾಗೂ ಉದ್ಯೋಗ ಸೃಷ್ಟಿಯ ವಿಚಾರದಲ್ಲಿ ಕೇಂದ್ರದ ಈ ಬಾರಿಯ ಬಜೆಟ್ ಅತ್ಯುತ್ತಮವಾಗಿದೆ ಎಂದು ಕೇಂದ್ರದ ಕೈಗಾರಿಕೆ ಸಚಿವ ಎಚ್.ಡಿ. ಕುಮಾರಸ್ವಾಮಿ ಅಭಿಪ್ರಾಯಪಟ್ಟಿದ್ದಾರೆ.



ತಾಲ್ಲೂಕಿನ ಹಂಡಿಗನಾಳದಲ್ಲಿ ನಡೆದ ಖಾಸಗಿ ಸಮಾರಂಭದಲ್ಲಿ ಭಾಗವಹಿಸಿದ ನಂತರ ಸುದ್ದಿಗಾರರೊಂದಿಗೆ ಅವರು ಮಾತನಾಡಿ, ಕೇಂದ್ರ ಸರ್ಕಾರದ ಬಜೆಟ್ ಕುರಿತು ಪ್ರತಿಕ್ರಿಯೆ ನೀಡಿದರು. ಉದ್ಯೋಗ ನೀಡುವುದು, ಉದ್ಯೋಗ ಸೃಷ್ಟಿಸುವುದು ಸೇರಿ ದೇಶದ ಒಟ್ಟಾರೆ ಸಮಗ್ರ ಅಭಿವೃದ್ಧಿ ದೃಷ್ಟಿಯಿಂದ ಈ ಬಜೆಟ್ ನೀಡಲಾಗಿದೆ ಎಂದು ಕೇಂದ್ರ ಬಜೆಟ್ ಕುರಿತು ಅವರು ಹೇಳಿದರು. ಈ ವೇಳೆ ಶಾಸಕರಾದ 'ಬಿ.ಎನ್. ರವಿಕುಮಾರ್, ತಾಲ್ಲೂಕು ಪಂಚಾಯತಿ ಮಾಜಿ ಅಧ್ಯಕ್ಷ ಕೆ. ಲಕ್ಷ್ಮಿನಾರಾಯಣರೆಡ್ಡಿ ಹಾಜರಿದ್ದರು.

# ಚೇಳೂರು ತಾಲ್ಲೂಕಿನ ಚೇಳೂರು ಗ್ರಾಮದ ಶ್ರೀ ಹನುಮಂತ, ಕೊದಂಡರಾಮಸ್ವಾಮಿ ದೇವಸ್ಥಾನ

**ಜೆ.ಕೆ.ಆನಂದ್ ಚೇಳೂರು**

ಚೇಳೂರು: ತಾಲ್ಲೂಕಿನ ಚೇಳೂರು ಗ್ರಾಮದಲ್ಲಿ ಐತಿಹಾಸಿಕ ಹಿನ್ನೆಲೆ ಹೊಂದಿರುವ ಪುರಾತನ ಪ್ರಸಿದ್ಧ ವೇಸ ಮಹರಾಯರು ಪ್ರತಿಷ್ಟಾಪಿಸಿರುವ ಶ್ರೀ ಹನುಮಂತ ಶ್ರೀ ಕೊದಂಡರಾಮಸ್ವಾಮಿ ದೇವರ ರಥೋತ್ಸವಕ್ಕೆ ಸಾಂಪ್ರದಾಯಿಕ ವಿಧಿಗಳು ಆರಂಭವಾಗಿವೆ.

ವೇಸ ಮಹರಾಯರು ಪ್ರತಿಷ್ಟಾಪಿಸಿರುವ ಶ್ರೀ ಹನುಮಂತ ಶ್ರೀ ಕೊದಂಡರಾಮಸ್ವಾಮಿ ದೇವರ ರಥೋತ್ಸವಕ್ಕೆ

ದೇವರ ಭವ್ಯ ದೇವಸ್ಥಾನಗಳ ಕಲಾ ವೈಭವದಿಂದ ಕಂಗೊಳಿಸುತ್ತಿವೆ. ನಾಡಿನ





ಇತಿಹಾಸವನ್ನು ಸಾರುವ ಶ್ರೀ ಹಣಮಂತ ಕೆತ್ತನೆ ಇಲ್ಲಿನ ವಿಶೇಷವಾಗಿದೆ.

ಹಿಂದೂ ಧರ್ಮ ಜಾಗೃತಿಗೆ ಶರಣ ಚಳುವಳಿ ನಡೆಸಿ ಹಿಂದೂ ಧರ್ಮದ ತತ್ವವನ್ನು ಶಿರಸ್ ಪವಾಡದ ಮೂಲಕ ಜಗತ್ತಿಗೆ ತೋರಿಸಿದ ಏಕಾಂತ ರಾಮಯ್ಯನ ನೆಲೆಬೀಡು ಈ ಗ್ರಾಮ. ಹೀಗಾಗಿ ಇಲ್ಲಿನ ಶ್ರೀ ಹಣಮಂತ ದೇವಸ್ಥಾನದಲ್ಲಿ ಕಲ್ಲಿನ ಮೇಲೆ ಕೆತ್ತಿರುವ ಇಂದಿಗೂ ಕಾಣಬಹುದಾಗಿದೆ

ಗ್ರಾಮದ ಇತಿಹಾಸ ಪರಂಪರೆ ಹಾಗೂ ಸಾಂಸ್ಕೃತಿಕ ಶ್ರೀಮಂತಿಕೆಯನ್ನು ಸಾರುತ್ತವೆ. ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಎಂಟು ದಿನಗಳ ಕಾಲ ಶುಕ್ರವಾರ ಆರಂಭವಾದ ಪೂಜಾ ಕಾರ್ಯಕ್ರಮಗಳು ಅಂಕುರಾರ್ಪಣೆ ಹಗಲು ಪಲ್ಲಕಿ ಉತ್ಸವ. ಹಗಲು ಶೇಷವಾಹನೋತ್ಸವ.ಹಗಲು ಮೋಹಿನಿ ಉತ್ಸವ.4-2-2025 ರಂದು ಬ್ರಹ್ಮ ರಥೋತ್ಸವ.ಅಂದು ಮಾಜಿ ಗೃಹ ಸಚಿವರಾದ ಚೌಡರೆಡ್ಡಿ ರವರಿಂದ ದೇವರಿಗೆ ಅಭಿಷೇಕ ಹಗಲು ಹನುಮಂತ ವಾಹನೋತ್ಸನ.ಹಗಲು. ವಸಂತೋತ್ಸವ.ಹಗಲು ಉಯ್ಯಾಲೋತ್ಸವ. ಇನ್ನಿತರೆ ದಾರ್ಮಿಕ ಕಾರ್ಯಕ್ರಮ ಗಳು ಆರಂಭವಾಗಿವೆ.

ಫೆ.04 ರಂದು ಹೂವಿನ ರಥೋತ್ಸವ ನಡೆಯಲಿದ್ದು, ಅಂದು ರಾತ್ರಿ ಸುಗಮ ಸಂಗೀತ ಮತ್ತು ಹನುಮಂತ ರಥಾರೋಹಣ ನಡೆಯುವುದು. ಫೆ 05 ರಂದು ರಾತ್ರಿ ಪಾರ್ವಾಟೋತ್ಸವ ನಡೆಯಲಿದೆ. ಕಾರ್ಯಕ್ರಮ ನಡೆಯಲಿದೆ. ರಥೋತ್ಸವಕ್ಕೆ ಬರುವ ಭಕ್ತರಿಗೆ ಊಟ ನೀರು ವ್ಯವಸ್ಥೆ ಕೆಲ ಸಂಘ ಸಂಸ್ಥೆಗಳಿಂದ ಏರ್ಪಡಿಸಿಲಾಗಿದೆ ಎಂದು ಶ್ರೀ ಹನುಮಂತ ಮತ್ತು ಕೊದಂಡರಾಮಸ್ವಾಮಿ ರಥೋತ್ಸವ ಉಸ್ತುವಾರಿ ಚೇಳೂರು ಮಾಜಿ ತಾಲ್ಲೂಕು ಪಂಚಾಯತ ಸದಸ್ಯ ಪಿ.ವಿ.ರಾಮಾಂಜನೇಯ್ಯರೆಡ್ಡಿ ತಿಳಿಸಿದ್ದಾರೆ

# 10 ವರ್ಷಗಳು ತೊಂದರೆಗೆ ಮುಕ್ತಿ ನೀಡಿದ ತಹಶೀಲ್ದಾರ್

**ಮಾಗಡಿ:** 10 ವರ್ಷಗಳಿಂದ ಅನುಭವಿಸುತ್ತಿದ್ದ ತೊಂದರೆಗೆ ಮುಕ್ತಿ ನೀಡಿದ ತಹಶೀಲ್ದಾರ್. ತಾಲೂಕಿನ ಬಾಚೇನಹಟ್ಟಿ ಗ್ರಾ.ಪಂ. ವ್ಯಾಪ್ತಿಯ ಗೊಲ್ಲರಪಾಳ್ಯ ಕಾಲೋನಿ ಬಳಿ ರೂಢಿ ರಸ್ತೆಯಲ್ಲಿ ನೂರಾರು ವರ್ಷಗಳಿಂದ ಗ್ರಾಮಸ್ಥರು ಓಡಾಡುತ್ತಿದ್ದು ಕಳೆದ 10 ವರ್ಷದಿಂದ ಈ ರೂಢಿರಸ್ತೆಯಲ್ಲಿ ಓಡಾಡದಂತೆ ಕೆಲವರು ತೊಂದರೆ ನೀಡಿ ಈ ಬಗ್ಗೆ ನ್ಯಾಯಾಲಯದ ಮೊರೆಹೋಗಿ ಗ್ರಾಮಸ್ಥರನ್ನು ಅಲೆಸುತ್ತಿದ್ದರು ಇದಲ್ಲದೆ ಸರಕಾರಿ ಜಮೀನಿನಲ್ಲಿ ಜಲಜೀವನ್ ಮಿಷನ್ ಅಡಿ ನೀರಿನ ಪೈಪು ಅಳವಡಿಸಲು ತೊಂದರೆ ನೀಡಿ ದಬ್ಬಾಳಿಕೆ, ದೌರ್ಜನ್ಯ ನಡೆಸುತ್ತಿದ್ದರು ಈ ಸಂಬಂಧ ಬಾಚೇನಹಟ್ಟಿ ಗ್ರಾ.ಪಂ.ಅಧ್ಯಕ್ಷೆ ಶಾಂತಿ ಬಾಯಿ ಧನಂಜಯ ನಾಯ್ಕ ತಹಶೀಲ್ದಾರ್‌ಗೆ ದೂರು ನೀಡಿ ನಾಗರಿಕರ ಸಮಸ್ಯೆ ಬಗೆಹರಿಸುವಂತೆ ಮನವಿ ಮಾಡಿದರು.



ಮನವಿಗೆ ಸ್ಪಂಧಿಸಿದ ತಹಶೀಲ್ದಾರ್ ಶನಿವಾರ ಗ್ರಾ.ಪಂ. ಅಧ್ಯಕ್ಷೆ ಶಾಂತಿ ಬಾಯಿ ಧನಂಜಯ ನಾಯ್ಕ ಹಾಗೂ ಅಧಿಕಾರಿಗಳೊಂದಿಗೆ ಬೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿ ರಸ್ತೆಯಲ್ಲಿ ತಿರುಗಾಡಲು ಹಾಗೂ ಸರಕಾರಿ ಯೋಜನೆಗಳ ಕಾಮಗಾರಿಗಳಿಗೆ ತೊಂದರೆ ಯಾರೆ ನೀಡಿದರೂ ಕಾನೂನು ರೀತಿ ಕ್ರಮಕೈಗೊಳ್ಳುವ ಎಚ್ಚರಿಕೆ ನೀಡಿ ರೂಢಿ ರಸ್ತೆಯಲ್ಲಿ ತಿರುಗಾಡಲು ಅನುಕೂಲ ಕಲ್ಪಿಸಿಕೊಟ್ಟರು.

ಈ ವೇಳೆ ಗ್ರಾಮಸ್ಥರು ತಹಶೀಲ್ದಾರ್ ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ಅಧ್ಯಕ್ಷೆ ಶಾಂತಿ ಬಾಯಿ ಧನಂಜಯ ನಾಯ್ಕ ಮಾತನಾಡಿ, ಗೊಲ್ಲರಪಾಳ್ಯ ಕಾಲೋನಿ ಬಳಿ ಸಾರ್ವಜನಿಕರಿಗೆ ಕಳೆದ 10 ವರ್ಷಗಳಿಂದ ನಿರಂತರವಾಗಿ ಕೆಲವರು ತೊಂದರೆ ನೀಡುತ್ತಿದ್ದಾರೆ ಈ ಬಗ್ಗೆ ಸ್ಥಳಿಯರು ಪ್ರಶ್ನಿಸಿದರೆ ಅವರ ವಿರುದ್ದ ದರ್ಪ,ದೌರ್ಜನ್ಯ ವೆಸಗಿ ನ್ಯಾಯಾಲಯಕ್ಕೆ ಅಲೆಯುವಂತೆ ಮಾಡಿದರು. ಸಾಕಷ್ಟು ಮಂದಿ ತಹಶೀಲ್ದಾರ್ ಗೆ ಮನವಿ ಮಾಡಿದರೂ ಕ್ರಮಕೈಗೊಂಡಿರಲಿಲ್ಲ ಈ ಸಂಬಂಧ ಗ್ರಾಮಸ್ಥರಿಂದ ಸಾಕಷ್ಟು ದೂರುಗಳು ಬಂದ ಹಿನ್ನಲೆಯಲ್ಲಿ ಶಾಸಕ ಎಚ್.ಸಿ.ಬಾಲಕೃಷ್ಣ ಅವರ ಗಮನಕ್ಕೆ ತಂದ ಕೂಡಲೇ ತಹಶೀಲ್ದಾರ್‌ಗೆ ಸೂಚಿಸಿದರು. ತಹಶೀಲ್ದಾರ್ ಸ್ಥಳಕ್ಕೆ ಬೇಟಿ ನೀಡಿ ತೊಂದರೆ ನೀಡುವರಿಗೆ ಬುದ್ದಿವಾದ ಹೇಳಿ ರೂಢಿ ರಸ್ತೆಯಲ್ಲಿ ತಿರುಗಾಡಲು ಅನುಕೂಲ ಕಲ್ಪಿಸಿಕೊಟ್ಟಿದ್ದಾರೆ. ಶಾಸಕ ಎಚ್.ಸಿ.ಬಾಲಕೃಷ್ಣ, ತಹಶೀಲ್ದಾರ್ ಶರತ್ ಕುಮಾರು ಅವರಿಗೆ ಅಭಿನಂದನೆ ಸಲ್ಲಿಸುತ್ತೇವೆ ಮುಂದೆ ಇಂಥಹ ಘಟನೆಗಳು ನಡೆಯದಂತೆ ಕಾನೂನು ಕ್ರಮಕೈಗೊಳ್ಳಬೇಕು ಎಂದು ತಿಳಿಸಿದರು.

ಗ್ರಾ.ಪಂ. ಸದಸ್ಯರಾದ ವಿಜಯ ಜಯರಾಮು, ಜಿ.ಪಂ. ಎಇಇ ಶ್ರೀನಿವಾಸ್, ಆರ್‌ಐ ಮಧು ನಟರಾಜು, ವಿಎ ಚಂದ್ರಶೇಖರ್, ಸರ್ವೆಯರ್ ವೇಣುಗೋಪಾಲ್, ಲೋಕೇಶ್ ನಾಯ್ಕ್, ಗಿರೀಶ್ ನಾಯ್ಕ್, ಮುನ್ನಾ ನಾಯ್ಕ್ ಇತರರು ಇದ್ದರು.

# ಮಹಾಕುಂಭದಲ್ಲಿ ಇದುವರೆಗೆ 35 ಕೋಟಿ ಜನರು ಮಿಂದೆದ್ದವರು



**ಪ್ರಯಾಗ್ ರಾಜ್:** ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಜಗತ್ತಿನ ಅತಿದೊಡ್ಡ ಧಾರ್ಮಿಕ ಕಾರ್ಯಕ್ರಮ ಮಹಾಕುಂಭ ಮೇಳದ ವೇಳೆ ಗಂಗಾ, ಯಮುನಾ ಮತ್ತು ಸರಸ್ವತಿ ನದಿಗಳ ಸಂಗಮ ಸ್ಥಳದಲ್ಲಿ ಇಲ್ಲಿಯವರೆಗೂ ಒಟ್ಟು 35 ಕೋಟಿ ಜನರು ಸ್ನಾನ ಮಾಡಿದ್ದಾರೆ.

ವಸಂತ ಪಂಚಮಿಯ ಅಮೃತ ಸ್ನಾನದ ಶುಭ ಸಂದರ್ಭದಲ್ಲಿ ಉತ್ತರ ಪ್ರದೇಶ ಸರ್ಕಾರ ಬಿಡುಗಡೆ ಮಾಡಿರುವ ಅಧಿಕೃತ ಅಂಕಿ ಅಂಶಗಳ ಪ್ರಕಾರ, ಮಹಾಕುಂಭ ಪ್ರಾರಂಭವಾದಾಗಿನಿಂದ ಇಲ್ಲಿಯವರೆಗೂ ಒಟ್ಟು 350 ದಶಲಕ್ಷಕ್ಕೂ ಅಧಿಕ ಜನರು ಸ್ನಾನ ಮಾಡಿದ್ದಾರೆ.

ಸೋಮವಾರ ಬೆಳಗ್ಗೆ 8 ಗಂಟೆಯ ಹೊತ್ತಿಗೆ 6.2 ಮಿಲಿಯನ್ ಭಕ್ತರು ತ್ರಿವೇಣಿ ಸಂಗಮದಲ್ಲಿ ಪವಿತ್ರ ಸ್ನಾನ ಮಾಡಿ ಐತಿಹಾಸಿಕ ದಾಖಲೆ ಬರೆದಿದ್ದಾರೆ. ಮಹಾಕುಂಭ ಮುಗಿಯಲು ಇನ್ನೂ 23 ದಿನಗಳು ಉಳಿದಿದ್ದು, ಒಟ್ಟು 500 ದಶಲಕ್ಷಕ್ಕೂ ಅಧಿಕ ಜನರು ಸ್ನಾನ ಮಾಡುವ ನಿರೀಕ್ಷೆಯಿದೆ.ಪವಿತ್ರ ಸ್ನಾನದ ಮೂಲಕ ದೈವಿಕ ಆಶೀರ್ವಾದವನ್ನು ಪಡೆಯಲು ಭಾರತ ಮತ್ತು ಪ್ರಪಂಚದಾದ್ಯಂತ ಲಕ್ಷಾಂತರ ಜನರು ಪ್ರತಿದಿನ ಆಗಮಿಸುತ್ತಿದ್ದಾರೆ. ಭಾನುವಾರ ಸುಮಾರು 12 ಮಿಲಿಯನ್ ಭಕ್ತರು ಸ್ನಾನ ಮಾಡಿದ್ದಾರೆ. ಇವರಲ್ಲಿ 1 ದಶಲಕ್ಷದಷ್ಟು ಸಾಧು ಸಂತರು, ವಿದೇಶಿ ಭಕ್ತರು ಸೇರಿದ್ದಾರೆ. ಮೌನಿ ಅಮಾವ್ಯಾಸೆಯಿಂದ ಸಂಗಮದಲ್ಲಿ ಅತಿ ಹೆಚ್ಚು 80 ಮಿಲಿಯನ್ ಭಕ್ತರು ಸಂಗಮದಲ್ಲಿ ಪವಿತ್ರ ಸ್ನಾನ ಮಾಡಿದ್ದರು. ಮಕರ ಸಂಕ್ರಾಂತಿ ದಿನದಂದು ಸುಮಾರು 35 ದಶಲಕ್ಷ ಜನರು, ಜನವರಿ 30 ರಂದು ಸುಮಾರು 20 ದಶಲಕ್ಷ, ಫೆಬ್ರವರಿ 1 ರಂದು 17 ದಶಲಕ್ಷ ಜನರು ಸ್ನಾನ ಮಾಡಿದ್ದರು.

# ಮುಂಬೈ: ಬಾಂದ್ರಾ ರೈಲು ನಿಲ್ದಾಣದಲ್ಲಿ ಮಹಿಳೆ ಮೇಲೆ ಅತ್ಯಾಚಾರ




**ಮುಂಬೈ:** ಮುಂಬೈನ ಬಾಂದ್ರಾ ರೈಲು ನಿಲ್ದಾಣದಲ್ಲಿ ಜನರಿಲ್ಲದ ರೈಲಿನ ಬೋಗಿಯೊಂದರಲ್ಲಿ ಮಹಿಳೆಯೊಬ್ಬರ ಮೇಲೆ ಕೂಲಿಕಾರ್ಮಿಕನೊಬ್ಬ ಅತ್ಯಾಚಾರ ನಡೆಸಿರುವ ಘಟನೆ ನಡೆದಿದೆ. ಶನಿವಾರ ತಡರಾತ್ರಿ ಈ ಘಟನೆ ನಡೆದ ಬಳಿಕ ಕೂಲಿಕಾರ್ಮಿಕನನ್ನು ಪೊಲೀಸರು ಬಂಧಿಸಿದ್ದಾರೆ.

ಮಧ್ಯವಯಸ್ಸಿನ ಮಹಿಳೆ ಮತ್ತು ಅವರ ಮಗ ಶನಿವಾರ ರಾತ್ರಿ ಬೇರೆ ನಿಲ್ದಾಣದಿಂದ ಬಾಂದ್ರಾ ಟರ್ಮಿನಸ್‌ಗೆ ಬಂದಿಳಿದ ನಂತರ ಮಹಿಳೆ ಫ್ಲಾಟ್ ಫಾರಂನ ಮತ್ತೊಂದು ಬದಿಯಲ್ಲಿದ್ದ ರೈಲು ಹತ್ತಿದ್ದಾರೆ. ಆ ರೈಲಿನಲ್ಲಿ ಯಾವುದೇ ಪ್ರಯಾಣಿಕರು ಇರಲಿಲ್ಲ.

ಆದರೆ, ಎರಡನೇ ರೈಲಿನಲ್ಲಿದ್ದ ಕೂಲಿಕಾರ್ಮಿಕನೊಬ್ಬ, ಮಹಿಳೆ ಮೇಲೆ ಅತ್ಯಾಚಾರವೆಸಗಿ, ಅಲ್ಲಿಂದ ಕಾಲ್ಕಿತ್ತಿದ್ದಾನೆ ಎಂದು ಸರ್ಕಾರಿ ರೈಲ್ವೆ ಪೊಲೀಸ್ ಅಧಿಕಾರಿ ತಿಳಿಸಿದ್ದಾರೆ.

ತದನಂತರ ಮಹಿಳೆ ಬಾಂದ್ರಾ ಜಿಆರ್‌ಪಿ ಠಾಣೆ ಸಂಪರ್ಕಿಸಿದ್ದು, ದೂರು ದಾಖಲಿಸಿದ್ದಾರೆ. ರೈಲ್ವೆ ಪೊಲೀಸರು ಅನೇಕ ಸಿಸಿಟಿವಿ ಕ್ಯಾಮರಾಗಳನ್ನು ಪರಿಶೀಲಿಸಿದ ಬಳಿಕ ಕೂಲಿಕಾರ್ಮಿಕನನ್ನು ಬಂಧಿಸಿದ್ದಾರೆ. ಬಾಂದ್ರಾ ರೈಲು ನಿಲ್ದಾಣದಲ್ಲಿ ಇಳಿದ ಬಳಿಕ ಮಹಿಳೆ ಮತ್ತೊಂದು ರೈಲನ್ನು ಯಾಕೆ ಹತ್ತಿದ್ದರು ಎಂಬುದರ ಕುರಿತು ಕಾರಣ ತಿಳಿಯಲು ಯತ್ನಿಸಲಾಗುತ್ತಿದೆ. ಆರೋಪಿಯ ವಿರುದ್ಧ ಭಾರತೀಯ ನ್ಯಾಯ ಸಂಹಿತೆಯಡಿ ಅತ್ಯಾಚಾರ ಪ್ರಕರಣ ದಾಖಲಿಸಲಾಗಿದೆ.

# ಒಂದು ರಾಷ್ಟ್ರ ಒಂದು ಚುನಾವಣೆ: ವಿಪಕ್ಷಗಳನ್ನು ಎದುರಿಸಲು ಕಾರ್ಯತಂತ್ರ

**ನವದೆಹಲಿ:** 'ಒಂದು ರಾಷ್ಟ್ರ, ಒಂದು ಚುನಾವಣೆ' ಉಪಕ್ರಮಕ್ಕೆ ಬೆಂಬಲ ಪಡೆಯಲು ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರ ತನ್ನ ಪ್ರಯತ್ನಗಳನ್ನು ತೀವ್ರಗೊಳಿಸುತ್ತಿದೆ. ಪ್ರತಿಪಕ್ಷಗಳನ್ನು ಎದುರಿಸಲು ಮತ್ತು ಮಹತ್ವದ ಮಸೂದೆಯನ್ನು ಹೇಗೆ ಮಂಡಿಸುವುದು ಎಂಬುದರ ಕುರಿತು ಕಾರ್ಯತಂತ್ರ ರೂಪಿಸಲು ಎನ್‌ಡಿಎ ಸಭೆ ನಡೆಸಿದೆ.

'ಉದ್ದೇಶಿತ ಮಸೂದೆಯ ಸುಗಮ ಮಂಡನೆಗೆ ಎದುರಾಗಿರುವ ಎಲ್ಲಾ ಕಾನೂನು ಅಡೆತಡೆಗಳನ್ನು ನಿವಾರಿಸುವತ್ತಾ ಸರ್ಕಾರ ತನ್ನ ಗಮನ ಹರಿಸಿದೆ ಎಂದು ಹೆಸರು ಬಹಿರಂಗ ಪಡಿಸಲಿಚ್ಛಿಸದ ಬಿಜೆಪಿಯ ಹಿರಿಯ ನಾಯಕರೊಬ್ಬರು ಹೇಳಿದ್ದಾರೆ. ಒಂದು ರಾಷ್ಟ್ರ ಒಂದು ಚುನಾವಣೆ ಮಸೂದೆಗೆ ಕೇಂದ್ರ ಸಂಪುಟ ಈಗಾಗಲೇ ಒಪ್ಪಿಗೆ ನೀಡಿದೆ. ಇದರ ಅಗತ್ಯತೆ ಮತ್ತು ಸಂಭಾವ್ಯ ಪ್ರಯೋಜನಗಳನ್ನು, ವಿಶೇಷವಾಗಿ ಚುನಾವಣಾ ಸಂಬಂಧಿತ ವೆಚ್ಚಗಳನ್ನು ಕಡಿಮೆ ಮಾಡಲು, ಆಡಳಿತದ ದಕ್ಷತೆಯನ್ನು ಸುಧಾರಿಸಲು ಮತ್ತು ಹೆಚ್ಚು ಸುವ್ಯವಸ್ಥಿತವಾಗಿ ಚುನಾವಣೆ ನಡೆಸುವ ಸಂದೇಶವನ್ನು ನೇರವಾಗಿ ಸಾರ್ವಜನಿಕರಿಗೆ ಕೊಂಡೊಯ್ಯುವಂತೆ ಪ್ರಧಾನಿ ನರೇಂದ್ರ ಮೋದಿ ಅವರು ತಮ್ಮ ಮಂತ್ರಿಗಳಿಗೆ ನಿರ್ದೇಶಿಸಿದ್ದಾರೆ ಎಂದು ತಿಳಿಸಿದ್ದಾರೆ.

ಮಸೂದೆಯ ಪ್ರಯೋಜನಗಳ ಬಗ್ಗೆ ಸಾರ್ವಜನಿಕರೊಂದಿಗೆ ತೊಡಗಿಸಿಕೊಳ್ಳುವ ಮೂಲಕ ವ್ಯಾಪಕ ಬೆಂಬಲ ಪಡೆದು ಎದುರಾಗಬಹುದಾದ ಸಂಭಾವ್ಯ ಪ್ರತಿಪಕ್ಷಗಳ ವಿರೋಧ ಹಾಗೂ ಕಾನೂನು ಸವಾಲುಗಳನ್ನು ಎದುರಿಸಬಹುದು ಎಂಬ ಆಶಾವಾದವನ್ನು ಸರ್ಕಾರ ಇಟ್ಟುಕೊಂಡಿದೆ. ಒಂದು ರಾಷ್ಟ್ರ, ಒಂದು ಚುನಾವಣೆ ಜಾರಿಗೆ ಬಂದರೆ ಅದು ದೇಶದ ದಿಕ್ಕನ್ನೇ ಬದಲಾಯಿಸುತ್ತದೆ, ವಕ್ಫ್ ತಿದ್ದುಪಡಿ ಮಸೂದೆಯ ನಂತರ, ಕೇಂದ್ರ 2029 ರಲ್ಲಿ ನಡೆಯಲಿರುವ ಮುಂದಿನ ಸಾರ್ವತ್ರಿಕ ಚುನಾವಣೆಗೂ ಮುನ್ನ ಒಂದು ರಾಷ್ಟ್ರ ಒಂದು ಚುನಾವಣೆಯನ್ನು ಜಾರಿ ಮಾಡಲು ಉತ್ಸುಕವಾಗಿದೆ.

# ಚೋರನಿಂದ ಬೈಕ್ ವಶಕ್ಕೆ ಪಡೆದ ಖಾಕಿ



**ಆಂಧ್ರ ಪ್ರದೇಶ:** ಕಳ್ಳತನ ಪ್ರಕರಣ ಭೇದಿಸಿದ ಕಾಕಿನಾಡ ಪೊಲೀಸರು, ಎರಡು ವರ್ಷಗಳಲ್ಲಿ 48 ದ್ವಿಚಕ್ರ ವಾಹನಗಳನ್ನು ಎಗರಿಸಿದ್ದ ಪ್ರಮುಖ ಆರೋಪಿ ಸೇರಿದಂತೆ ಏಳು ಆರೋಪಿಗಳನ್ನು ಬಂಧಿಸಿ ಜೈಲಿಗೆ ಅಟ್ಟಿದ್ದಾರೆ. ಪಿಠಾಪುರಂನ ಸೋಂಟಿನಿ ಗಂಗಾಧರ್ ಅಲಿಯಾಸ್ ರೀಸು ಗಂಗಾಧರ್ ಬಂಧಿತ ಪ್ರಮುಖ ಆರೋಪಿ. ಬಂಧಿತ ಆರೋಪಿಯು ವೆಲ್ಡಿಂಗ್ ಕೆಲಸ ಮಾಡುತ್ತಲೇ ತನ್ನ ಆರು ಸಹಚರರೊಂದಿಗೆ ದ್ವಿಚಕ್ರ ವಾಹನಗಳ ಕಳ್ಳತನ ಮಾಡುತ್ತಿದ್ದನು. ತನಿಖೆ ವೇಳೆ ಕಳ್ಳರ ಕೈಚಳ ಕಂಡು ಪೊಲೀಸರೇ ಬೆಚ್ಚಿಬಿದ್ದಿದ್ದಾರೆ.

ಸಂಕ್ರಾಂತಿ ವೇಳೆ ಸರಣಿ ಬೈಕ್ ಕಳ್ಳತನದ ಕುರಿತು ಪಿಠಾಪುರಂ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದ್ದವು. ದೂರು ದಾಖಲಿಸಿಕೊಂಡಿದ್ದ ಪೊಲೀಸರು, ಸಿಸಿಟಿವಿ ದೃಶ್ಯಾವಳಿ ಮತ್ತು ಸುಧಾರಿತ ಟ್ರ್ಯಾಕಿಂಗ್ ತಂತ್ರಜ್ಞಾನವನ್ನು ಬಳಸಿಕೊಂಡು ತನಿಖೆ ಆರಂಭಿಸಿದ್ದರು. ಈ ವೇಳೆ ಪ್ರಮುಖ ಆರೋಪಿ ಗಂಗಾಧರ್?ನ ಕೈಚಳಕ ಇರುವುದು ಕಂಡು ಬಂದಿತ್ತು. ಅನುಮಾನದ ಹಿನ್ನೆಲೆಯಲ್ಲಿ ಠಾಣೆಗೆ ಕರೆದು ವಿಚಾರಿಸಿದಾಗ ಆತ ಬಾಯ್ಬಿಟ್ಟಿದ್ದಾನೆ. ತನ್ನ ವ್ಯಸನಗಳಿಗಾಗಿ ಹಣ ಹೊಂದಿಸಲು ನಕಲಿ ಬೀಗಗಳನ್ನು ಬಳಸಿ ದ್ವಿಚಕ್ರ ವಾಹನಗಳನ್ನು ಕಳ್ಳತನ ಮಾಡುತ್ತಿದ್ದೆ ಎಂದು ತನಿಖೆ ವೇಳೆ ಒಪ್ಪಿಕೊಂಡಿರುವುದಾಗಿ ಪೊಲೀಸರು ತಿಳಿಸಿದ್ದಾರೆ.

10ನೇ ತರಗತಿಯವರೆಗೆ ಓದಿಕೊಂಡಿರುವ ಆರೋಪಿ ಗಂಗಾಧರ್, 2023ರಲ್ಲಿ ಪ್ರತಿಪಡು ಮತ್ತು ಶಂಖಾವರಂ ಮಂಡಲದ ಸಹಚರರಾದ ಕಾರ್ತಿಕ ಸತ್ತಿಬಾಬು, ಕುರುಮಲ್ಲ ವೀರಬಾಬು, ಗಾನಸುಲ ಆನಂದ್, ತೋಟ ಲಕ್ಷ್ಮಣ ರಾವ್, ಎನುಗುಪಲ್ಲಿ ನಾಗಸತ್ಯನಾರಾಯಣ ಮತ್ತು ವಟ್ಟಿಕೊಳ್ಳ ಚಕ್ರಯ್ಯ ಅವರೊಂದಿಗೆ ಕಳ್ಳತನಕ್ಕೆ ಇಳಿದಿದ್ದ. ಈ ವ್ಯಕ್ತಿಗಳು ಕದ್ದ ಬೈಕ್‌ಗಳನ್ನೇ ?10,000ಗೆ ಖರೀದಿಸಿ ಲಾಭಕ್ಕಾಗಿ ಮತ್ತೆ ಮರು ಮಾರಾಟ ಮಾಡುತ್ತಿದ್ದರು. ಅದರಂತೆ ಹಲವು ದ್ವಿಚಕ್ರ ವಾಹನಗಳ ಖರೀದಿಸಿ ಮಾರಾಟ ಮಾಡಿರುವುದು ತನಿಖೆ ವೇಳೆ ಗೊತ್ತಾಗಿದೆ. ಕಳೆದ ಎರಡು ವರ್ಷಗಳ ಕಾಲ ಕಳ್ಳತನ ಮಾಡಿದ್ದ ಎಲ್ಲ 48 ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ. ಸುಧಾರಿತ ಟ್ರ್ಯಾಕಿಂಗ್ ತಂತ್ರಜ್ಞಾನವು ಆರೋಪಿಗಳ ಬಂಧನಕ್ಕೆ ಅನುಕೂಲವಾಗಿದೆ. ಹೆಚ್ಚಿನ ತನಿಖೆ ನಡೆಯುತ್ತಿದೆ ಎಂದು ಕಾಕಿನಾಡ ಜಿಲ್ಲಾ ಪೊಲೀಸ್? ವರಿಷ್ಠಾಧಿಕಾರಿ ಬಿಂದು ಮಾಧವ್ ಮಾಹಿತಿ ನೀಡಿದ್ದಾರೆ.

# ಮೊಬೈಲ್ ಟಾರ್ಚ್ ಬೆಳಕಿನಲ್ಲಿ ತಲೆಗೆ ಹೊಲಿಗೆ ಹಾಕಿದ ಸರ್ಕಾರಿ ಆಸ್ಪತ್ರೆ ವೈದ್ಯರು



**ಕೊಟ್ಟಾಯಂ:** ಗಾಯಗೊಂಡಿದ್ದ ಬಾಲಕನೊಬ್ಬನ ತಲೆಗೆ ವೈದ್ಯರು ಮೊಬೈಲ್ ಟಾರ್ಚ್ ಬೆಳಕಿನಲ್ಲಿ ಹೊಲಿಗೆ ಹಾಕಿದ ಘಟನೆ ಕೊಟ್ಟಾಯಂ ಜಿಲ್ಲೆಯ ವೈಕಂ ತಾಲೂಕು ಆಸ್ಪತ್ರೆಯಲ್ಲಿ ಶನಿವಾರ ಸಂಜೆ ನಡೆದಿದೆ.

11 ವರ್ಷದ ಬಾಲಕ ಎಸ್ ದೇವತೀರ್ಥ ಎಂಬ ಬಾಲಕ ಬಿದ್ದ ಪರಿಣಾಮ ಆತನ ತಲೆಗೆ ಗಂಭೀರ ಗಾಯವಾಗಿತ್ತು. ಬಾಲಕನನ್ನು ಪರೀಕ್ಷಿಸಿದ ವೈದ್ಯರು ಗಾಯಕ್ಕೆ ಹೊಲಿಗೆ ಹಾಕಬೇಕು ಎಂದು ಸೂಚಿಸಿದ್ದಾರೆ. ಆದರೆ ಅದೇ ಸಮಯಕ್ಕೆ ಆಸ್ಪತ್ರೆಯಲ್ಲಿ ವಿದ್ಯುತ್ ಕಡಿತಗೊಂಡಿದ್ದು, ಮೊಬೈಲ್ ಟಾರ್ಚ್ ಬೆಳಕಿನಲ್ಲಿ ವೈದ್ಯರು ಬಾಲಕನ ಗಾಯಕ್ಕೆ ಹೊಲಿಗೆ ಹಾಕಿದ್ದಾರೆ.

ವೈದ್ಯರು ಮೊಬೈಲ್ ಟಾರ್ಚ್ ಬೆಳಕಿನಲ್ಲಿ ಸ್ಟಿಚ್ ಹಾಕುತ್ತಿರುವ ವಿಡಿಯೋ ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗುತ್ತಿದ್ದಂತೆ, ಘಟನೆ ವಿವಾದಾತ್ಮಕ ತಿರುವು ಪಡೆದುಕೊಂಡಿತು.

ಹೊಲಿಗೆ ಕೋಣೆಯಲ್ಲಿ ವಿದ್ಯುತ್ ಏಕೆ ಇಲ್ಲ ಆಸ್ಪತ್ರೆಯಲ್ಲಿ ಜನರೇಟರ್ ಇದೆಯೇ ಎಂದು ಪೋಷಕರು ಕೇಳಿದಾಗ, ನಿರಂತರವಾಗಿ ಜನರೇಟರ್ ಹಾಕಲು ಡೀಸೆಲ್ ಬೇಕು ಎಂದು ಕರ್ತವ್ಯದಲ್ಲಿದ್ದ ಅಟೆಂಡರ್ ಉತ್ತರಿಸುವುದು ವಿಡಿಯೋದಲ್ಲಿ ಇದೆ.

ಆಸ್ಪತ್ರೆಯಲ್ಲಿ ಬೆಳಕಿನ ಕೊರತೆಯಿಂದ ಗಾಯವನ್ನು ಸರಿಯಾಗಿ ಸ್ವಚ್ಛಗೊಳಿಸಲು ಸಹ ಸಾಧ್ಯವಾಗಿಲ್ಲ. ಮಾತ್ರವಲ್ಲ, ಚಿಕಿತ್ಸೆ ನೀಡುವುದು ಕೂಡ ಕಷ್ಟಕರವಾಗಿತ್ತು ಎಂದು ಬಾಲಕನ ಪೋಷಕರು ಆರೋಪಿಸಿದ್ದಾರೆ.

ಇದರ ಮಧ್ಯೆ, ಘಟನೆಯ ಕುರಿತು ಆರ್‌ಎಂಒ ಅವರು ತನಿಖೆ ನಡೆಸಿ, ವರದಿ ಬಿಡುಗಡೆ ಮಾಡಿದ್ದಾರೆ. ಹೊಸ ವಿದ್ಯುತ್ ಕಂಬ ಅಳವಡಿಸುವಾಗ ಜನರೇಟರ್‌ಗೆಸಂಪರ್ಕಗೊಂಡಿದ್ದ ಸ್ವಿಚ್ ಓವರ್ ಬಟನ್ ಅಸಮರ್ಪಕವಾಗಿ ಕಾರ್ಯನಿರ್ವಹಿಸಿದೆ ಎಂದುಹೇಳಿದ್ದಾರೆ. ಆರ್‌ಎಂಒ ವರದಿಯನ್ನು ಡಿಎಂಒಗೆ ಹಸ್ತಾಂತರಿಸಲಾಗಿದೆ ಎಂದು ವರದಿಯಾಗಿದೆ.

# ಜೀವನ ರೂಪಿಸಿದ ಶಿಕ್ಷಕರ ಭೇಟಿ ಮಾಡಿದ ಶಿಷ್ಯ




**ತಿರುಪತಿ:** ವಿದ್ಯಾರ್ಥಿಗಳ ಜೀವನದ ದಿಕ್ಕು ಬದಲಾಯಿಸುವಲ್ಲಿ ಶಿಕ್ಷಕರ ಪಾತ್ರ ಮಹತ್ವದ್ದು. ಅ.ಆ.ಇ.ಈ ಅಕ್ಷರಗಳನ್ನು ಕಲಿಸುತ್ತಾ ಅನೇಕರಿಗೆ ಜೀವನ ಪಾಠವನ್ನು ಹೇಳುತ್ತಾ ವಿದ್ಯಾರ್ಥಿಗಳ ಮಹತ್?? ಸಾಧನೆಗೆ ಅಡಿಗಲ್ಲು ಹಾಕುತ್ತಾರೆ. ಅಂತಹ ಶಿಕ್ಷಕರನ್ನು ಬೆಳೆದ ಮೇಲೆ ಆಗೊಮ್ಮೆ, ಹೀಗೊಮ್ಮೆ ನೆನಪಿಸಿಕೊಂಡು ಸುಮ್ಮನಾಗುತ್ತೇವೆ. ಆದರೆ, ಇಲ್ಲೊಬ್ಬ ವ್ಯಕ್ತಿ ತಮ್ಮ ಜೀವನ ರೂಪಿಸಿದ ಶಿಕ್ಷಕರಿಗೆ 63 ವರ್ಷಗಳ ಕಾಲ ಶೋಧ ನಡೆಸಿದ್ದು, ಈ ಹುಡುಕಾಟಕ್ಕೆ ಒಂದು ಸಾರ್ಥಕತೆ ಸಿಕ್ಕಿದೆ. ಇಂತಹ ಗುರು – ಶಿಷ್ಯರ ಸಮಾಗಮದ ಅಪರೂಪದ ಘಟನೆ ಚಂದ್ರಗಿರಿ ಮಂಡಲ್?ನ ಕುಚುವರಿಪಲ್ಲಿ ಗ್ರಾಮದಲ್ಲಿ ನಡೆದಿದೆ.

ಗಂಗಪ್ಪ ಎನ್ನುವವರು 63 ವರ್ಷದ ಹಿಂದೆ ಜಯರಾಮ್ ಒಡೆಯರ್ ಎಂಬ ಶಿಕ್ಷಕರ ಬಳಿಕ ಪ್ರಾಥಮಿಕ ಶಿಕ್ಷಣವನ್ನು ಪಡೆದಿದ್ದಾರೆ. ಒಡೆಯಲು 1960–62ನೇ ಇಸ್ವಿಯಲ್ಲಿ ಚಿತ್ತೂರು ಜಿಲ್ಲೆಯಲ್ಲಿ ರಾಮಕುಪ್ಪಂ ಮಂಡಲ್‌ನಲ್ಲಿ ಎಸ್ ಗೊಲಪಲ್ಲಿಯಲ್ಲಿ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿದ್ದರು. ಇದಾದ ಬಳಿಕ ಅವರು ಅನೇಕ ಕಡೆ ಹುದ್ದೆ ನಿಭಾಯಿಸಿ ಚಂದ್ರಗಿರಿ ಮಂಡಲ್‌ನ ಕುಚುವರಿಪಲ್ಲಿಯಲ್ಲಿ ಶಾಶ್ವತವಾಗಿ ವಾಸ್ತವ್ಯ ಹೂಡಿದರು.

ಇವರ ಅಡಿ ಎರಡು ವರ್ಷಗಳ ಕಾಲ ಶಿಕ್ಷಣ ಪಡೆದ ಗಂಗಪ್ಪ. ತಮ್ಮ ಜೀವನದಲ್ಲಿ ಒಡೆಯರ್ ಶಿಕ್ಷಕರು ನಿಭಾಯಿಸಿದ ನಿರ್ಣಾಯಕ ಪಾತ್ರವನ್ನು ಎಂದೂ ಮರೆಯಲಿಲ್ಲ. ಬೆಳೆದು ಜೀವನದಲ್ಲಿ ಉತ್ತಮ ಸ್ಥಾನಕ್ಕೆ ಏರಿದ ಬಳಿಕ ತಮ್ಮ ಜೀವನದ ರೂಪು ಬದಲಾಯಿಸುವಲ್ಲಿ ಪ್ರಮುಖರಾದ ಶಿಕ್ಷಕರಿಗೆ ಒಮ್ಮೆಯಾದರೂ ಕೃತಜ್ಞತೆ ಸಲ್ಲಿಸೋಣ ಎಂದು ಹುಡುಕಾಟ ನಡೆಸಿದರು. ಇದಕ್ಕಾಗಿ ಅವರು ದಶಕಗಳ ಕಾಲ ನಿರಂತರ ಶ್ರಮ ಹಾಕಿದರು. ಕಡೆಗೂ ಅವರ ಶ್ರಮಕ್ಕೆ ಫಲ ಸಿಕ್ಕಿದೆ. ಭಾನುವಾರ ಸಂಜೆ ಅವರು ಶಿಕ್ಷಕರನ್ನು ಭೇಟಿಯಾಗಿದ್ದಾರೆ.

ಅದಾಗಲೇ ಹಿರಿಯ ನಾಗರಿಕರಾಗಿರುವ ಗಂಗಪ್ಪ ತಮ್ಮ ಮೊಮ್ಮಗ ಯತೀಶ್ ಜೊತೆಗೂಡಿ ಶಿಕ್ಷಕರನ್ನು ಭೇಟಿಯಾದರು. ಈ ವೇಳೆ, ತಮ್ಮ ಗತಕಾಲದ ನೆನಪು ಮರಳಿಸಿ ಇಬ್ಬರು ಮಾತುಕತೆ ನಡೆಸಿದರು, ಈ ವೇಳೆ ಅವರಿಂದ ಆಶೀರ್ವಾದವನ್ನೂ ಪಡೆದರು. ಈ ಅದ್ಭುತ ಘಟನೆಗೆ ಗ್ರಾಮಸ್ಥರು ಸಾಕ್ಷಿಯಾದರು. ಬಾಳ ಬೆಳಗುವಲ್ಲಿ ಶಿಕ್ಷಕರ ಪಾತ್ರ ಕುರಿತು ಕಣ್ಮುಂದೆ ನಡೆದ ಈ ದೃಶ್ಯ ಗ್ರಾಮಸ್ಥರಲ್ಲಿ ಶಿಕ್ಷಕರ ಬಗ್ಗೆ ಮತ್ತೊಮ್ಮೆ ಅಗಾಧ ಗೌರವ ಮತ್ತು ಭಕ್ತಿಯನ್ನು ಮೂಡಿಸಿತು. ಈ ವೇಳೆ, ಗಂಗಪ್ಪ ತಮ್ಮ ಮೊಮ್ಮಗನಿಗೂ ಜೀವನ ರೂಪಿಸುವ ಶಿಕ್ಷಕರನ್ನು ಎಂದೂ ಮರೆಯಬಾರದು ಎಂಬ ಕಿವಿಮಾತು ಹೇಳಿದರು. ಒಟ್ಟಾರೆ ಇದೊಂದು ಅಪೂರ್ವ ಸಮ್ಮಿಲನವಾಗಿದ್ದು, ಎಲ್ಲರನ್ನೂ ಭಾವುಕಗೊಳಿಸಿದ್ದಂತೂ ಸುಳ್ಳಲ್ಲ .

# 3 ಉಪಗ್ರಹಗಳನ್ನು ಅನಾವರಣಗೊಳಿಸಿದ ಇರಾನ್



**ಟೆಹ್ರಾನ್:** ಇರಾನ್ ತನ್ನ ರಾಷ್ಟ್ರೀಯ ಬಾಹ್ಯಾಕಾಶ ತಂತ್ರಜ್ಞಾನ ದಿನದ ನಿಮಿತ್ತ ರಾಜಧಾನಿ ಟೆಹ್ರಾನ್ ನಲ್ಲಿ ಭಾನುವಾರ ದೇಶೀಯವಾಗಿ ಅಭಿವೃದ್ಧಿಪಡಿಸಿದ ಮೂರು ಹೊಸ ಉಪಗ್ರಹಗಳನ್ನು ಅನಾವರಣಗೊಳಿಸಿದೆ ಎಂದು ಮಾಧ್ಯಮಗಳು ವರದಿ ಮಾಡಿವೆ. ಇರಾನ್ ಅಧ್ಯಕ್ಷ ಮಸೂದ್ ಪೆಜೆಶ್ಕಿಯಾನ್, ಮಾಹಿತಿ ಮತ್ತು ಸಂವಹನ ತಂತ್ರಜ್ಞಾನ ಸಚಿವ ಸೈಯದ್ ಸತ್ತಾರ್ ಹಶೆಮಿ ಮತ್ತು ಹಲವಾರು ಕ್ಯಾಬಿನೆಟ್ ಸದಸ್ಯರು, ಅಧಿಕಾರಿಗಳು ಮತ್ತು ಮಿಲಿಟರಿ ಕಮಾಂಡರ್‌ಗಳು ಭಾಗವಹಿಸಿದ್ದ ಸಮಾರಂಭದಲ್ಲಿ ನವಕ್ –1, ಪಾರ್ಸ್ –2 ಮತ್ತು ಪಾರ್ಸ್ –1 ನ ಹೊಸ ಮಾದರಿಯ ಉಪಗ್ರಹಗಳನ್ನು ಅನಾವರಣಗೊಳಿಸಲಾಯಿತು ಎಂದು ವರದಿ ತಿಳಿಸಿದೆ.

ದೀರ್ಘಾಕಾರದ ಕಕ್ಷೆಗೆ ಸೇರಿಸುವ ನಿರೀಕ್ಷೆ: ಇರಾನಿನ ಬಾಹ್ಯಾಕಾಶ ಸಂಶೋಧನಾ ಕೇಂದ್ರವು ಅಭಿವೃದ್ಧಿಪಡಿಸಿದ ನವಕ್ –1 ಸಂವಹನ ಉಪಗ್ರಹವನ್ನು ಶೀಘ್ರದಲ್ಲೇ ಸ್ವದೇಶಿ ಸಿಮೊರ್ಗ್ ಉಡಾವಣಾ ವಾಹನದ ಸುಧಾರಿತ ಆವೃತ್ತಿಯ ಕಾರ್ಯವನ್ನು ಪರೀಕ್ಷಿಸಲು ವಿನ್ಯಾಸಗೊಳಿಸಲಾಗಿದೆ. ಅಧಿಕೃತ ಸುದ್ದಿ ಸಂಸ್ಥೆ ಐಆರ್‌ಎನ್‌ಎ ಪ್ರಕಾರ, ವಾಹಕವು ಉಪಗ್ರಹವನ್ನು ದೀರ್ಘಾಕಾರದ ಕಕ್ಷೆಗೆ ಸೇರಿಸುವ ನಿರೀಕ್ಷೆಯಿದೆ.

ಸುಮಾರು 34 ಕೆಜಿ ತೂಕದ ನವಕ್ –1 ಕಾಸ್ಮಿಕ್ ಕಿರಣಗಳನ್ನು ಅಳೆಯಲು ಡೋಸಿಮೆಟ್ರಿ ಪೇಲೋಡ್ ಅನ್ನು ಹೊಂದಿದೆ. ಅಲ್ಲದೇ ಇದು ಭೂಮಿಯ ವಿದ್ಯುತ್ಕಾಂತೀಯ ಕ್ಷೇತ್ರವನ್ನು ಅಳೆಯಲು ಮ್ಯಾಗ್ನೆಟೋಮೀಟರ್ ಸಂವೇದಕವನ್ನು ಹೊಂದಿದೆ ಎಂದು ವರದಿ ತಿಳಿಸಿದೆ.

ಐಆರ್‌ಎನ್‌ಎ ಪ್ರಕಾರ, ಪಾರ್ಸ್ –2 ರಿಮೋಟ್ ಸೆನ್ಸಿಂಗ್ ಉಪಗ್ರಹವು 150 ಕೆಜಿ ತೂಕವಿದ್ದು, ಎರಡು ವಿಭಿನ್ನ ದೇಶೀಯ ರೇಖೀಯ ಸ್ಥಾನ ಸಂವೇದಕಗಳೊಂದಿಗೆ ಎರಡು ಇಮೇಜಿಂಗ್ ಪೇಲೋಡ್‌ಗಳನ್ನು ಹೊಂದಿದೆ. ಈ ಉಪಗ್ರಹವು ಪ್ರೊಪೆಲ್ಲರ್ ಅನ್ನು ಒಳಗೊಂಡಿದ್ದು, ಪರಿಸರ ಮೇಲ್ವಿಚಾರಣೆ, ಅರಣ್ಯ, ನೈಸರ್ಗಿಕ ವಿಪತ್ತು ಪ್ರತಿಕ್ರಿಯೆ ಮತ್ತು ನಗರ ನಿರ್ವಹಣೆ ಕ್ಷೇತ್ರಗಳಲ್ಲಿ ವೈವಿಧ್ಯಮಯ ಕಾರ್ಯಾಚರಣೆಗಳನ್ನು ನಡೆಸುವ ಸಾಮರ್ಥ್ಯವನ್ನು ಹೊಂದಿದೆ.

150 ಕೆಜಿಗಿಂತ ಕಡಿಮೆ ತೂಕದ ಪಾರ್ಸ್ –1 ರಿಮೋಟ್ ಸೆನ್ಸಿಂಗ್ ಉಪಗ್ರಹದ ನವೀಕರಿಸಿದ ಮಾದರಿಯು ಮೂರು ಇಮೇಜಿಂಗ್ ಪೇಲೋಡ್‌ಗಳನ್ನು ಹೊಂದಿದೆ. ಅವು: ಮಲ್ಟಿಸ್ಪೆಕ್ಟ್ರಲ್, ಶಾರ್ಟ್–ವೇವ್ ಇನ್ಫ್ರಾರೆಡ್ ಮತ್ತು ಥರ್ಮಲ್ ಇನ್ಫ್ರಾರೆಡ್ ಎಂದು ಐಆರ್‌ಎನ್‌ಎ ತಿಳಿಸಿದೆ. ಈ ಉಪಗ್ರಹವು ಗ್ಯಾಲಿಯಂ ಆರ್ಸೆನೈಡ್ ಸೌರ ಕೋಶಗಳಿಂದ ಉತ್ಪತ್ತಿಯಾಗುವ ಶಕ್ತಿಯಿಂದ ಕಾರ್ಯನಿರ್ವಹಿಸುತ್ತದೆಎಂದು ವರದಿ ತಿಳಿಸಿದೆ. ಈ ಉಪಗ್ರಹವುಗ್ಯಾಲಿಯಂ ಆರ್ಸೆನೈಡ್ ಸೌರ ಕೋಶಗಳಿಂದ ಉತ್ಪತ್ತಿಯಾಗುವ ಶಕ್ತಿಯಿಂದ ಕಾರ್ಯನಿರ್ವಹಿಸುತ್ತದೆ ಎಂದು ವರದಿ ಹೇಳಿದೆ.

# ಪೆರೋಲ್ ಮೇಲೆ ಹೊರಬಂದು ಪರಾರಿಯಾಗಿದ್ದ ಅಪರಾಧಿ ಅರೆಸ್ಟ್

**ಪುಣೆ:** ಗೋಧ್ರಾ ರೈಲು ಹತ್ಯಾಕಾಂಡ ಪ್ರಕರಣದಲ್ಲಿ ಪೆರೋಲ್ ಮೇಲೆ ಹೊರಬಂದು ಪರಾರಿಯಾಗಿದ್ದ 55 ವರ್ಷದ ಅಪರಾಧಿಯು ಕಳ್ಳತನ ಪ್ರಕರಣದಲ್ಲಿ ಮಹಾರಾಷ್ಟ್ರದ ಪುಣೆ ಜಿಲ್ಲೆಯಲ್ಲಿ ಸಿಕ್ಕಿಬಿದ್ದಿದ್ದಾನೆ ಎಂದು ಪೊಲೀಸರು ಸೋಮವಾರ ಮಾಹಿತಿ ನೀಡಿದ್ದಾರೆ.

ಸಲೀಂ ಜರ್ದಾ ಬಂಧಿತ. 2002ರ ಗೋಧ್ರಾ ರೈಲು ಹತ್ಯಾಕಾಂಡ ಪ್ರಕರಣದಲ್ಲಿ ಜೀವಾವಧಿ ಶಿಕ್ಷೆಗೆ ಒಳಗಾಗಿದ್ದ 31 ಅಪರಾಧಿಗಳಲ್ಲಿ ಸಲೀಂ ಜರ್ದಾ ಕೂಡ ಒಬ್ಬ. ಕಳ್ಳತನ ಪ್ರಕರಣವೊಂದರಲ್ಲಿ ಈತನನ್ನು ಜ.22ರಂದು ಬಂಧಿಸಿದ್ದೇವೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

ಪೆರೋಲ್ ಮೇಲೆ ಹೊರಬಂದು ತಲೆಮರೆಸಿಕೊಂಡಿದ್ದ: ಗೋಧ್ರಾ ಪ್ರಕರಣದಲ್ಲಿ ಶಿಕ್ಷೆಗೆ ಒಳಗಾಗಿದ್ದ ಸಲೀಂ ಜರ್ದಾ ಏಳು ದಿನಗಳ ಪೆರೋಲ್ ಮೇಲೆ 2024ರ ಸೆಪ್ಟೆಂಬರ್ 17 ರಂದು ಗುಜರಾತ್‌ನ ಜೈಲಿನಿಂದ ಹೊರಬಂದಿದ್ದ. ಬಳಿಕ ಪೆರೋಲ್ ಅವಧಿ ಮುಗಿದರೂ ವಾಪಸ್ ಜೈಲಿಗೆ ಬಂದಿರಲಿಲ್ಲ.

"ಪುಣೆಯ ಗ್ರಾಮೀಣ ಭಾಗಗಳಲ್ಲಿ ಕಳ್ಳತನ ನಡೆಸುತ್ತಿದ್ದ ಪ್ರಕರಣದಲ್ಲಿ ಸಲೀಂ ಜರ್ದಾ ಮತ್ತು ಅವರ ಗ್ಯಾಂಗ್ ಸದಸ್ಯರನ್ನು ಬಂಧಿಸಿದ್ದೇವೆ. ತನಿಖೆಯ ವೇಳೆ ಸಲೀಂ ಜರ್ದಾ ಗೋಧ್ರಾ ರೈಲು ಹತ್ಯಾಕಾಂಡ ಪ್ರಕರಣದ ಅಪರಾಧಿ ಎಂಬುದು ಗೊತ್ತಾಗಿದೆ" ಎಂದು ಅಲೆಫಾಟಾ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್ ದಿನೇಶ್ ಟೇಡೆ ತಿಳಿಸಿದ್ದಾರೆ.

ಗ್ಯಾಂಗ್ ಜೊತೆಗೆ ಪುಣೆಗೆ ಬಂದು ಕಳ್ಳತನ: ಜೊತೆಗೆ ಗುಜರಾತ್‌ನ ಗೋಧ್ರಾದಿಂದ ಪುಣೆ ಜಿಲ್ಲೆಗೆ ತನ್ನ ಗ್ಯಾಂಗ್‌ನೊಂದಿಗೆ ಬಂದು ಕಳ್ಳತನ ಕೃತ್ಯಗಳನ್ನು ಎಸಗುತ್ತಿದ್ದನ್ನು. ಜರ್ದಾ ನಡೆಸಿದ್ದಾರೆ ಎನ್ನಲಾದ ಮೂರು ಕಳ್ಳತನ ಪ್ರಕರಣಗಳು ತನಿಖೆಯಲ್ಲಿ ಬೆಳಕಿಗೆ ಬಂದಿವೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

2002ರ ಫೆ.27 ರಂದು ಗೋಧ್ರಾದಲ್ಲಿ ಸಾಬರಮತಿ ಎಕ್ಸ್‌ಪ್ರೆಸ್‌ನ ಎಸ್ – 6 ಕೋಚ್‌ಗೆ ಬೆಂಕಿ ಹಚ್ಚಿ 59 ಸಾವಿಗೆ ಕಾರಣವಾದ ಆರೋಪ ಪ್ರಕರಣದಲ್ಲಿ ಜರ್ದಾ ಮತ್ತು ಇತರರು ಶಿಕ್ಷೆಗೊಳಗಾಗಿದ್ದಾರೆ.

# ಬಾಂಗ್ಲಾದೇಶಕ್ಕೆ ಅಕ್ಕಿ ಕಳುಹಿಸಿಕೊಟ್ಟ ಭಾರತ



ಢಾಕಾ: ಕಳೆದ ವರ್ಷದ ಆಗಸ್ಟ್‌ನಲ್ಲಿ ಶೇಖ್ ಹಸೀನಾ ಅವರನ್ನು ಪ್ರಧಾನಿ ಹುದ್ದೆಯಿಂದ ಪದಚ್ಯುತಗೊಳಿಸಿದ ನಂತರ ಉಭಯ ದೇಶಗಳ ನಡುವೆ ಸಂಬಂಧ ಹದಗೆಟ್ಟಿದ್ದು, ಈ ನಡುವೆಯೂ ಭಾರತ ಬಾಂಗ್ಲಾದೇಶಕ್ಕೆ ಎರಡನೇ ಬಾರಿಗೆ ಇದೀಗ ಸಾವಿರಾರು ಟನ್ ಅಕ್ಕಿ ಕಳುಹಿಸಿಕೊಟ್ಟಿದೆ. ಅಪಾರ ಪ್ರಮಾಣದ ಅಕ್ಕಿ ಹೊತ್ತ ಎರಡು ಹಡಗುಗಳು ಬಾಂಗ್ಲಾದ ಮೊಂಗ್ಲಾ ಬಂದರು ತಲುಪಿದವು.

"ಎರಡು ಬೃಹತ್ ಗಾತ್ರದ ಹಡಗುಗಳು 16,400 ಟನ್ ಅಕ್ಕಿ ಹೊತ್ತು ಇಲ್ಲಿನ ಬಂದರು ತಲುಪಿವೆ" ಎಂದು ಢಾಕಾ ಟ್ರಿಬ್ಯೂನ್ ದಿನಪತ್ರಿಕೆ ವರದಿ ಮಾಡಿದೆ.

ಒಪ್ಪಂದದ ಪ್ರಕಾರ, ಬಾಂಗ್ಲಾದೇಶ ಭಾರತದಿಂದ 300,000 ಟನ್ ಅಕ್ಕಿ ಪಡೆಯಲಿದೆ. ಮೊಂಗ್ಲಾ ಆಹಾರ ನಿಯಂತ್ರಕರ ಕಚೇರಿ ನೀಡಿದ ಮಾಹಿತಿಯಂತೆ, ಈ ಪೈಕಿ ಶೇ.40ರಷ್ಟು ಅಕ್ಕಿಯನ್ನು ಮೊಂಗ್ಲಾ ಬಂದರಿನಲ್ಲಿ ಇಳಿಸಲಾಗುತ್ತದೆ. ಪನಾಮಾ ಧ್ವಜ ಹೊಂದಿರುವ ಬಿಎಂಸಿ ಆಲ್ಫಾ ಹಡಗು ಒಡಿಶಾದ ಧರ್ಮಾ ಬಂದರಿನಿಂದ 7,700 ಟನ್ ಅಕ್ಕಿ ಹೊತ್ತು ಬಂದರೆ, ಥಾಯ್ಲೆಂಡ್ ಧ್ವಜ ಹೊಂದಿದ ಎಂವಿ ಸೀ ಫಾರೆಸ್ಟ್ ಹಡಗು ಕೊಲ್ಕತ್ತಾ ಬಂದರಿನಿಂದ 8,700 ಟನ್ ಅಕ್ಕಿ ಸಾಗಿಸಿತು.

ಮುಕ್ತ ಟೆಂಡರ್ ಆಮದಿನ ಪೈಕಿ ಮೊದಲ ಸಾಗಣೆಯನ್ನು ಜನವರಿ 20ರಂದು ಬಾಂಗ್ಲಾದೇಶಕ್ಕೆ ರವಾನಿಸಲಾಗಿತ್ತು. ವಿಯೆಟ್ನಾಂ ಧ್ವಜ ಹೊಂದಿದ ಎಂವಿ ಪುಥಾನ್–36 ಹಡಗು 5,700 ಟನ್ ಅಕ್ಕಿ ಸಾಗಿಸಿದೆ ಎಂದು ವರದಿ ಹೇಳಿದೆ. ಕೆಲ ದಿನಗಳ ಹಿಂದೆ, ಗಡಿ ಭದ್ರತಾ ಪಡೆಯ ಡೆರೆಕ್ಟರ್ ಜನರಲ್ ಮಟ್ಟದ ಅಧಿಕಾರಿಗಳ ಸಭೆಯಲ್ಲಿ, ಗಡಿ ಭದ್ರತೆಯ ವಿಚಾರವಾಗಿ ಉಭಯ ದೇಶಗಳ ನಡುವೆ ಇರುವ ಕೆಲವು "ಅಸಮ" ಒಪ್ಪಂದಗಳನ್ನು ರದ್ದುಗೊಳಿಸಲು ತಾನು ಬಯಸುತ್ತಿರುವುದಾಗಿ ಬಾಂಗ್ಲಾದೇಶದ ಮಧ್ಯಂತರ ಸರ್ಕಾರ ಭಾರತಕ್ಕೆ ತಿಳಿಸಿತ್ತು.

ಇನ್ನು, 2024ರ ಆಗಸ್ಟ್‌ನಲ್ಲಿ ಪ್ರಧಾನಿ ಶೇಕ್ ಹಸೀನಾ ದೇಶದಿಂದ ಪಲಾಯನಗೈದ ಬಳಿಕ ನೊಬೆಲ್ ಪ್ರಶಸ್ತಿ ಪುರಸ್ಕೃತ 84 ವರ್ಷದ ಮುಹಮ್ಮದ್ ಯೂನಸ್, ಬಾಂಗ್ಲಾದೇಶದ ಸರ್ಕಾರದ ಮುಖ್ಯ ಸಲಹೆಗಾರರಾಗಿ ಅಧಿಕಾರ ವಹಿಸಿಕೊಂಡಿದ್ದರು.

ಬಾಂಗ್ಲಾದಲ್ಲಿ ದೇಶವ್ಯಾಪಿ ನಡೆದ ಭಾರೀ ಹಿಂಸಾತ್ಮಕ ಪ್ರತಿಭಟನೆಗಳು ಹಸೀನಾ ನೇತೃತ್ವದ ಅವಾಮಿ ಲೀಗ್ ಸರ್ಕಾರವನ್ನು ಉರುಳಿಸಿದ್ದವು. ಇದರೊಂದಿಗೆ 16 ವರ್ಷಗಳ ಆಡಳಿತವೂ ಅಂತ್ಯಗೊಂಡಿತ್ತು. ಹಾಗಾಗಿ, ಕಳೆದ ಆಗಸ್ಟ್ 5ರಿಂದ 77 ವರ್ಷದ ಶೇಖ್ ಹಸೀನಾ ಭಾರತದಲ್ಲಿ ವಾಸಿಸುತ್ತಿದ್ದಾರೆ.

"ಮಾನವತೆಯ ವಿರುದ್ಧದ ಅಪರಾಧ, ನರಹತ್ಯೆ"ಗಳ ಆರೋಪ ಹೊರಿಸಿ ಬಾಂಗ್ಲಾದೇಶದ ಅಂತಾರಾಷ್ಟ್ರೀಯ ಅಪರಾಧಗಳ ಟ್ರಿಬ್ಯೂನಲ್, ಶೇಕ್ ಹಸೀನಾ ಹಾಗೂ ಅವರ ಸರ್ಕಾರದ ಕೆಲವು ಸಂಪುಟ ಸಚಿವರು, ಸಲಹೆಗಾರರು ಮತ್ತು ಸೇನೆ ಮತ್ತು ನಾಗರಿಕ ಸೇವೆಗಳ ಅಧಿಕಾರಿಗಳ ವಿರುದ್ಧ ಬಂಧನ ವಾರೆಂಟ್ ಹೊರಡಿಸಿದೆ. ಈ ಹಿನ್ನೆಲೆಯಲ್ಲಿ ಕಳೆದ ವರ್ಷ ಢಾಕಾ, ನವದೆಹಲಿಗೆ ರಾಜತಾಂತ್ರಿಕ ಟಿಪ್ಪಣಿ ಕಳುಹಿಸಿ, ಹಸೀನಾರ ಗಡಿಪಾರಿಗೆ ಆಗ್ರಹಿಸಿತ್ತು.

# ಶ್ರುತಿಗೆ ಶಾಕ್ ಕೊಟ್ಟ ನಿವೇದಿತಾ ಗೌಡ




ಸೋಷಿಯಲ್ ಮೀಡಿಯಾ ಸೆನ್ಸೇಷನ್ ನಿವೇದಿತಾ ಗೌಡ ಅವರು ಯಾಕೆ ಇಷ್ಟೊಂದು ಸುದ್ದಿ ಮಾಡ್ತಾರೆ ಅಲ್ಲ, ಅವ್ರು ಇರೋದೂ ಡಿಫ್ರೆಂಟ್, ಮಾಡೋದು, ಆಡೋದು ಎಲ್ಲವೂ ಡಿಫ್ರೆಂಟ್ ಎನ್ನಬಹುದು. ಅದೇ ಕಾರಣಕ್ಕೆ ಅವರು ಹೆಚ್ಚು ಸದ್ದು-ಸುದ್ದಿ ಮಾಡ್ತಿದಾರೆ. ಅರೇ, ಈಗೇನು ಸುದ್ದಿ ಮಾಡಿದ್ರು ಹಾಗಾದ್ರೆ ಎಂಬ ಕುತೂಹಲ ಸಹಜವಾಗಿಯೇ ಬಹುತೇಕರಿಗೆ ಬಂದಿರುತ್ತೆ. ಅದಕ್ಕೆ ಉತ್ತರ ಇಲ್ಲಿದೆ ನೋಡಿ..

'ಬಾಯ್ಸ್ VS ಗರ್ಲ್ಸ್' ವೇದಿಕೆ ಮೇಲೆ ಶ್ರುತಿ ಅವರು ನಿವೇದಿತಾ ಗೌಡಗೆ ಪ್ರಶ್ನೆ ಮಾಡಿದರು. 'ಯಾರಾದರೂ ನಿಮಗೆ ಮುದ್ದೆ ಕೊಟ್ಟರೆ ಅದನ್ನು ಹೇಗೆ ತಿನ್ನುತ್ತೀರಿ ಉಗುರಿನಿಂದ ತೊಂದರೆ ಆಗಲ್ವ' ಎಂದು ಕೇಳಿದ್ದಾರೆ. ಇದಕ್ಕೆ ಉತ್ತರಿಸಿದ ನಿವೇದಿತಾ, 'ನಾನು ಮುದ್ದೆ ತಿನ್ನೋಕೆ ಸ್ಪೂನ್ ಹಾಗೂ ಪೋರ್ಕ್ ಬಳಸುತ್ತಿದ್ದೆ. ಈಗ ಉಗುರನ್ನೇ ಚಮಚ ಹಾಗೂ ಪೋರ್ಕ್ ರೀತಿ ಬಳಸುತ್ತೇನೆ. ಒಂದರಲ್ಲಿ ಕಟ್ ಮಾಡ್ತೀನಿ, ಮತ್ತೊಂದರಲ್ಲಿ ತಿನ್ನುತ್ತೇನೆ' ಎಂದರು ನಿವೇದಿತಾ. ಅವರ ಉತ್ತರ ಕೇಳಿ ಶ್ರುತಿ ಅಕ್ಷರಶಃ ಶಾಕ್ ಆಗಿ ಹೋದರು.

ನಿವೇದಿತಾ ಗೌಡ ಇರುವುದೇ ಹಾಗಾ ಎಲ್ಲದರಲ್ಲೂ ವಿಭಿನ್ನತೆ ಮೆರೆಯುತ್ತಾರಾ ಹೌದು ಎನ್ನಬಹುದು ಅಂತಾರೆ ಹಲವರು ನೆಟ್ಟಿಗರು. ಮುದ್ದೆ ಮುರಿಯಲು ಉಗುರು ಬಳಸ್ತಾರೆ ಅಂದ್ರೆ ಸುಮ್ನೆನಾ? ಬಳಸುವುದು ಹಾಗಿರಲಿ, ಅದನ್ನು ಲೈವ್ ಸ್ಟೇಜ್‌ನಲ್ಲಿ ಧೈರ್ಯವಾಗಿ ಹೇಳಿದ್ದಾರೆ ಕೂಡ. ಸ್ವತಃ ಶ್ರುತಿ ಅವರು ತಾವು ಕೇಳಿದ ಪ್ರಶ್ನೆಗೆ ನಿವೇದಿತಾ ಗೌಡ ಕೊಟ್ಟ ಉತ್ತರದಿಂದ ಶಾಕ್ ಆಗಿದ್ದಾರೆ. ನಿವಿ ಉತ್ತರದ ಬಳಿಕ ನಟಿ ಶ್ರುತಿ ಕೊಟ್ಟ ಎಕ್ಸ್‌ಪ್ರೆಶನ್ ನೋಡಿಯೇ ಅವರೆಷ್ಟು ಶಾಕ್ ಆಗಿದ್ದಾರೆ ಎಂಬುದನ್ನು ಅರ್ಥೈಸಿಕೊಳ್ಳಬಹುದು.

ಇನ್ನು, ಬಿಗ್ ಬಾಸ್ ಖ್ಯಾತಿಯ ನಿವೇದಿತಾ ಗೌಡ ಅವರು ಸೋಷಿಯಲ್ ಮೀಡಿಯಾ ಸೆನ್ಸೇಷನ್ ಎಂಬುದು ಬಹುತೇಕ ಎಲ್ಲರಿಗೂ ಗೊತ್ತು. ನಿವೇದಿತಾ ನಿಂತರೂ ಕುಂತರೂ, ಕುಣಿದರೂ ಕ್ಯಾಕರಿಸಿ ಉಗಿದರೂ ಅದು



ಸೋಷಿಯಲ್ ಮೀಡಿಯಾದಲ್ಲಿ ದೊಡ್ಡ ಸುದ್ದಿಯೇ ಆಗುತ್ತದೆ. ಯಾಕೆ ಹೀಗೆ ಜನರ ಗಮನ ಸೆಳೆಯಲು ನಿವೇದಿತಾ ಏನೋನೋ ಮಾಡುತ್ತಾ ಇರುತ್ತಾರೆ. ಜನರೂ ಕೂಡ ಹಾಗೇ, ಅವರು ಏನೆಲ್ಲ ಮಾಡುತ್ತಾರೋ ಅದಕ್ಕೆಲ್ಲಾ ಪ್ರತಿಕ್ರಿಯೆ ಕೊಡುತ್ತಲೇ ಇರುತ್ತಾರೆ. ಹೀಗೆ ಇದು ಎಲ್ಲಿಯವರೆಗೆ ಹೋಗುತ್ತೋ ಬಲ್ಲವರಾರು

ನಿವೇದಿತಾ ಗೌಡ ಯಾವುದೋ ಕೆಲಸಕ್ಕೆ ಶ್ರೀಲಂಕಾಗೆ ಯಾವತ್ತೋ ಹೋಗಿದ್ದಾರೆ. ಅಲ್ಲಿ ಕ್ಯಾಸಿನೋದಲ್ಲಿ ಡಾನ್ಸ್ ಮಾಡಿದ್ದಾರೆ. ಅಲ್ಲಿದ್ದವರು ಅದನ್ನು ಎಂಜಾಯ್ ಮಾಡಿದ್ದಾರೆ. ಆ ವಿಡಿಯೋ ಸೋಷಿಯಲ್ ಮೀಡಿಯಾದಲ್ಲಿ ಪೋಸ್ಟ್ ಆಗಿದ್ದೇ ತಡ, ನೆಟ್ಟಿಗರು ಯದ್ವಾತದ್ವಾ ನಿವೇದಿತಾಗೆ ಬಯ್ಯತೊಡಗಿದ್ದಾರೆ. ಅದೊಂದೇ ಸ್ಟೆಪ್ ಅವ್ರಿಗೆ ಬರೋದು ಎಂಬಲ್ಲಿಂದ ಹಿಡಿದು ವಯಸ್ಸು ಇರುವಾಗ ಮೆರಿತಾರೆ, ಆಮೇಲೆ ಬುದ್ಧಿ ಬರುತ್ತೆ' ಅಂತೆಲ್ಲಾ ಕಾಮೆಂಟ್‌ಗಳ ಸುರಿಮಳೆಯೇ ಆಗುತ್ತಿದೆ. ಯಾಕೆ ಹೀಗೆ?





# ಕದ್ದುಮುಚ್ಚಿ ಡೇಟಿಂಗ್ ಮಾಡೋದು ನಿಲ್ಲಿಸಿದ ಸಮಂತಾ?

ನಟ ನಾಗ ಚೈತನ್ಯ ಅವರಿಂದ ವಿಚ್ಛೇದನ ಪಡೆದ ಬಳಿಕ ಸಮಂತಾ ಅವರು ಒಬ್ಬಂಟಿ ಆಗಿ ಇದ್ದರು. ಅತ್ತ ನಾಗ ಚೈತನ್ಯ ಮತ್ತೊಂದು ವಿವಾಹ ಆದರೆ, ಸಮಂತಾ ಮಾತ್ರ ಎಲ್ಲ ಕಡೆಗಳಲ್ಲಿ ಒಬ್ಬಂಟಿಯಾಗಿ ಕಾಣಿಸಿಕೊಳ್ಳುತ್ತಿದ್ದರು. ಆದರೆ, ಈಗ ಅವರಿಗೂ ಜೀವನದಲ್ಲಿ ಸಂಗಾತಿ ಸಿಕ್ಕರೇ ಎನ್ನುವ ಪ್ರಶ್ನೆ ಮೂಡುವಂತೆ ಆಗಿದೆ. ಸಮಂತಾ ಅವರು ನಿರ್ದೇಶಕ ರಾಜ್ ನಿದಿಮೋರು ಜೊತೆ ಡೇಟಿಂಗ್ ಮಾಡುತ್ತಿದ್ದಾರೆ ಎನ್ನುವ ಸುದ್ದಿ ಹರಿದಾಡಿತ್ತು. ಈ ಸುದ್ದಿಗೆ ಈಗ ಮತ್ತಷ್ಟು ಬಲ ಸಿಕ್ಕಿದೆ.

ಸಮಂತಾ ಹಾಗೂ ರಾಜ್ ಇತ್ತೀಚೆಗೆ ಹೆಚ್ಚು ಒಟ್ಟಾಗಿ ಕಾಣಿಸಿಕೊಳ್ಳುತ್ತಿದ್ದಾರೆ. ಈ ಮೊದಲು ರಾಜ್ ನಿರ್ದೇಶನದ 'ದಿ ಫ್ಯಾಮಿಲಿ ಮ್ಯಾನ್' ಹಾಗೂ 'ಸಿಟಾಡೆಲ್: ಹನಿ ಬನಿ' ಸೀರಿಸ್‌ಗಳಲ್ಲಿ ಸಮಂತಾ ನಟಿಸಿದ್ದರು. ಆ ಸಂದರ್ಭದಲ್ಲಿ ಇವರ ಮಧ್ಯೆ ಆಪ್ತತೆ ಬೆಳೆದಿದೆ. ಇಷ್ಟು ದಿನ ಕದ್ದುಮುಚ್ಚಿ ಓಡಾಡುತ್ತಿದ್ದ ಇವರು ಈಗ ಓಪನ್ ಆಗಿ ಸುತ್ತಾಟ ಆರಂಭಿಸಿದ್ದು, ಇದರ ಫೋಟೋಗಳನ್ನು ಹಂಚಿಕೊಳ್ಳುತ್ತಿದ್ದಾರೆ.

ಇತ್ತೀಚೆಗೆ ಸಮಂತಾ ಅವರು 'ಪಿಕಲ್ ಬಾಣಟಿಜಜಜುಟಿಜಜ ಟೂರ್ನ್‌ಮೆಂಟ್' ಒಂದರಲ್ಲಿ ಭಾಗಿ ಆಗಿದ್ದರು. ಇದರಲ್ಲಿ ರಾಜ್ ಕೂಡ ಸಮಂತಾ ಜೊತೆ ಇದ್ದರು. ಈ ಫೋಟೋಗಳನ್ನು ಸಮಂತಾ ಹಂಚಿಕೊಂಡಿದ್ದು, ಅವರು ನಗು ನಗುತ್ತಾ ಕಾಣಿಸಿಕೊಂಡಿದ್ದಾರೆ. ಈ ಸಂದರ್ಭದಲ್ಲಿ ಅವರು ನಿರ್ದೇಶಕನ ಕೈ ಹಿಡಿದು ನಿಂತಿದ್ದಾರೆ. ಇದು ಅನುಮಾಗಳನ್ನು ಹೆಚ್ಚಿಸಿದೆ.

ರಾಜ್ ಅವರಿಗೆ ಈಗಾಗಲೇ ವಿವಾಹ ಆಗಿದೆ. ಅವರು ಶ್ಯಾಮಲಿ ಡೇ ಅವರನ್ನು ಮದುವೆ ಆಗಿದ್ದರು. ಈಗ ಸಮಂತಾ ಜೊತೆ ವಿವಾಹ ಆಗುತ್ತಾರೆ ಎಂದರೆ ಅವರು ಮೊದಲ ಪತ್ನಿಗೆ ವಿಚ್ಛೇದನ ನೀಡಬೇಕಿದೆ. ಈ ರೀತಿಯಲ್ಲಿ ಚರ್ಚೆಗಳು ನಡೆಯುತ್ತಿವೆ.

ಸಮಂತಾ ಹಂಚಿಕೊಂಡ ಫೋಟೋಗೆ ಫ್ಯಾನ್ಸ್ ನಾನಾ ರೀತಿಯಲ್ಲಿ ಕಮೆಂಟ್ ಮಾಡುತ್ತಿದ್ದಾರೆ. 'ಸಮಂತಾ ಈ ವಿಚಾರವನ್ನು ಶೀಘ್ರವೇ ಅಧಿಕೃತ ಮಾಡಬಹುದು. ಅವರು ಹೀಗೆ ನಗುತ್ತಾ ಇರಬೇಕು' ಎಂದು ಕೆಲವರು ಹೇಳಿದ್ದಾರೆ. ಇನ್ನೂ ಕೆಲವರು 'ಕಳೆದು ಹೋದ ನಗು ಮತ್ತೆ ಸಿಕ್ಕಿದೆ' ಎಂದು ಬರೆದಿದ್ದಾರೆ.

# ಶಿವಕಾರ್ತಿಕೇಯನ್ ದೊಡ್ಡ ನಟ ಹೇಗಾದ್ರು!



ಕೆಡಿ ಬಿಲ್ಲಾ ಕಿಲ್ಲಾಡಿ ರಂಗ ಚಿತ್ರದಲ್ಲಿ ಶಿವಕಾರ್ತಿಕೇಯನ್ ಜೊತೆ ನಟಿಸಿದ್ದ ರೆಜಿನಾ, ಆನಂತರ ಕೆಲವು ಚಿತ್ರಗಳಲ್ಲಿ ನಟಿಸಿದ್ರು. ಆದ್ರೆ ಯಾವ ಚಿತ್ರವೂ ಹಿಟ್ ಆಗಲಿಲ್ಲ. ವಿಶಾಲ್ ನಟಿಸಿದ್ದ ಚಕ್ರ ಚಿತ್ರದಲ್ಲಿ ವಿಲನ್ ಆಗಿ ನಟಿಸಿ ಮೆಚ್ಚುಗೆ ಗಳಿಸಿದ್ದರು. ಈಗ ಅಜಿತ್ ನಟನೆಯ ವಿಡಾಮುಯಾರ್ಚಿ ಚಿತ್ರದಲ್ಲಿ ಅರ್ಜುನ್ ಜೊತೆಗೆ ವಿಲನ್ ಆಗಿ ನಟಿಸಿದ್ದಾರೆ.

ಈ ಚಿತ್ರ 6ನೇ ತಾರೀಕು ಬಿಡುಗಡೆಯಾಗುತ್ತಿದೆ. ಮಗಿಳ್ ತಿರುಮೇನಿ ನಿರ್ದೇಶನದಲ್ಲಿ ಅಜಿತ್, ಆರವ್, ಅರ್ಜುನ್, ತ್ರಿಷಾ ಮತ್ತು ರೆಜಿನಾ ಕಸಾಂಡ್ರ ನಟಿಸಿದ್ದಾರೆ. ಶಿವಕಾರ್ತಿಕೇಯನ್ ಬಗ್ಗೆ ರೆಜಿನಾ ಹೇಳಿದ ಮಾತು ವೈರಲ್ ಆಗಿದೆ. ಚಿತ್ರದ ಪ್ರಚಾರಕ್ಕಾಗಿ ರೆಜಿನಾ ಖಾಸಗಿ ವಾಹಿನಿಗೆ ಸಂದರ್ಶನ ನೀಡಿದ್ದರು.


ಅದರಲ್ಲಿ ಅವರನ್ನು ಶಿವಕಾರ್ತಿಕೇಯನ್ ಬಗ್ಗೆ ಕೇಳಲಾಗಿತ್ತು. ಅದಕ್ಕೆ ಅವರು ಉತ್ತರಿಸಿದ್ದಾರೆ. ನಾನು ಮತ್ತು ಶಿವಕಾರ್ತಿಕೇಯನ್ 'ಕೆಡಿ ಬಿಲ್ಲಾ ಕಿಲ್ಲಾಡಿ ರಂಗ' ಚಿತ್ರದಲ್ಲಿ ನಟಿಸಿದ್ದೆವು. ಈ ಚಿತ್ರ ಬಿಡುಗಡೆಯಾಗಿ 12 ವರ್ಷಗಳಾಗಿವೆ. ಆದರೆ, ಶಿವಕಾರ್ತಿಕೇಯನ್ ಆಗ ಹೇಗಿದ್ದರೋ ಈಗಲೂ ಹಾಗೇ ಇದ್ದಾರೆ. ಯಾವುದೇ ಬದಲಾವಣೆ ಇಲ್ಲ.

ಅವರ ಜೊತೆ ನಟಿಸುವಾಗ ಅವರು ಇಷ್ಟು ದೊಡ್ಡ ನಟ ಆಗ್ತಾರೆ ಅಂತ ನಾನು ಊಹಿಸಿರಲಿಲ್ಲ. ಯಾಕಂದ್ರೆ ಸಿನಿಮಾ ಅಂದ್ರೆ ಕಷ್ಟದ ಕ್ಷೇತ್ರ. ಅವರು ಹೇಗೆ ಇಷ್ಟು ದೊಡ್ಡ ನಟ ಆದ್ರು ಅಂತ ಗೊತ್ತಿಲ್ಲ. ನಟನಾಗಿ ಅವರು ಬೇರೆ. ಆದರೆ, ಆಗಿನಿಂದ ಈಗ ತನಕ ಅವರು ಹಾಗೇ ಇದ್ದಾರೆ ಅಂತ ಹೇಳಿದ್ದಾರೆ.

ಶಿವಕಾರ್ತಿಕೇಯನ್ ಕಾಮಿಡಿ ನಟನಾಗಿದ್ದವರನ್ನ ಆಕ್ಷನ್ ಹೀರೋ ಆಗಿ ಬದಲಿಸಿದ್ದು ಅಮರನ್ ಚಿತ್ರ. ಈ ಚಿತ್ರದ ಮೂಲಕ ಹೊಸ ಅವತಾರ ತಾಳಿ ಇಂದು ಸ್ಟಾರ್ ನಟರಲ್ಲಿ ಒಬ್ಬರಾಗಿದ್ದಾರೆ.

ಅಮರನ್ ಚಿತ್ರದ ಯಶಸ್ಸಿನಿಂದ ದೊಡ್ಡ ದೊಡ್ಡ ನಿರ್ದೇಶಕರ ಚಿತ್ರಗಳಲ್ಲಿ ನಟಿಸುತ್ತಿದ್ದಾರೆ. ಈಗ ಎ ಆರ್ ಮುರುಗದಾಸ್ ನಿರ್ದೇಶನದ ಚಿತ್ರದಲ್ಲಿ ಮತ್ತು ಸುಧಾ ಕೊಂಗರಾ ಅವರ ಪರಶಕ್ತಿ ಚಿತ್ರದಲ್ಲಿ ನಟಿಸುತ್ತಿದ್ದಾರೆ. ಇವುಗಳ ನಂತರ ಇನ್ನೂ ಕೆಲವು ಚಿತ್ರಗಳಲ್ಲಿ ನಟಿಸಲಿದ್ದಾರೆ ಎನ್ನಲಾಗಿದೆ.

# ಭಾರತ ಮೂಲದ ಅಮೆರಿಕ ಉದ್ಯಮಿ ಚಂದ್ರಿಕಾ ಟಂಡನ್‌ಗೆ ಗ್ರ್ಯಾಮಿ ಅವಾರ್ಡ್



ಭಾರತ ಮೂಲದ ಅಮೆರಿಕ ಪ್ರಜೆ ಹಾಗೂ ಉದ್ಯಮಿ ಚಂದ್ರಿಕಾ ಟಂಡನ್ ಅವರು 67ನೇ ಸಾಲಿನ ಗ್ರ್ಯಾಮಿ ಅವಾರ್ಡ್ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪಡೆದು ಸಾಧನೆ ಮಾಡಿದ್ದಾರೆ. ಅವರು ಸಿದ್ಧಪಡಿಸಿದ 'ತ್ರಿವೇಣಿ' ಆಲ್ಬಮ್‌ಗೆ 'ಬೆಸ್ಟ್ ನ್ಯೂ ಏಜ್' ವಿಭಾಗದಲ್ಲಿ ಪ್ರಶಸ್ತಿ ದೊರೆತಿದೆ. ಸ್ಪರ್ಧೆಯಲ್ಲಿ ಇದ್ದ ಭಾರತದ ರಿಕ್ಕಿ ಕೇಜ್ ಮೊದಲಾದವರನ್ನು ಅವರು ಹಿಂದಿಕ್ಕಿದ್ದಾರೆ.

ಲಾಸ್ ಏಂಜಲೀಸ್‌ನಲ್ಲಿ ಭಾನುವಾರ (ಫೆಬ್ರವರಿ 2) ಅವಾರ್ಡ್ ಕಾರ್ಯಕ್ರಮ ನಡೆದಿದೆ. ದಕ್ಷಿಣ ಆಫ್ರಿಕಾದ ಫ್ಲೌಟಿಸ್ಟ್ ವೂಟರ್ ಕೆಲ್ಲರ್‌ಮ್ಯಾನ್ ಮತ್ತು ಜಪಾನಿನ ಸೆಲಿಸ್ಟ್ ಎರು ಮಾಟ್ಸುಮೊಟೊ ಅವರ ಜೊತೆ ಸೇರಿ ಚಂದ್ರಿಕಾ ಅವರು 'ತ್ರಿವೇಣಿ' ಆಲ್ಬಂ ಮಾಡಿದ್ದರು. 'ನನಗೆ ಖುಷಿ ಆಗುತ್ತಿದೆ' ಎಂದು ಚಂದ್ರಿಕಾ ಅವರು ಹೇಳಿಕೊಂಡಿದ್ದಾರೆ. ಈ ರೇಸ್‌ನಲ್ಲಿ , ಅನೌಷ್ಕಾ ಶಂಕರ್, ರಾಧಿಕಾ ವೆಕಾರಿಯಾ ಕೂಡ ಇದ್ದರು.


'ತ್ರಿವೇಣಿ' ಆಲ್ಬಂ ಭಾರತೀಯ ಶಾಸ್ತ್ರೀಯ ಸಂಗೀತ, ವೈದಿಕ ಪಠಣಗಳು ಮತ್ತು ಅಂತರಾಷ್ಟ್ರೀಯ ಸಂಪ್ರದಾಯಗಳನ್ನು ಒಳಗೊಂಡಿದೆ. ಇದು ಕೇಳುಗರನ್ನು ಧ್ಯಾನಸ್ಥ ಮಾಡುವ ತಾಕತ್ತು ಹೊಂದಿದೆ. ಈ ಕಾರಣಕ್ಕೆ ಇದಕ್ಕೆ ಅವಾರ್ಡ್ ಸಿಕ್ಕಿದೆ ಎಂದು ಅನೇಕರು ಅಭಿಪ್ರಾಯಪಟ್ಟಿದ್ದಾರೆ

ಚಂದ್ರಿಕಾ ಟಂಡನ್ ಯಾರು?

ಚಂದ್ರಿಕಾ ಅವರು ಉದ್ಯಮ ಹಾಗೂ ಸಂಗೀತ ಲೋಕಕ್ಕೆ ಸಾಕಷ್ಟು ಕೊಡುಗೆ ನೀಡಿದ್ದಾರೆ. ಚಂದ್ರಿಕಾ ಹುಟ್ಟಿ ಬೆಳೆದಿದ್ದು ಚೆನ್ನೈನಲ್ಲಿ. 'ಸೋಲ್ ಚಾಂಟ್ಸ್ ಮ್ಯೂಸಿಕ್' ಹೆಸರಿನ ನಾನ್ ಪ್ರಾಫಿಟೆಬಲ್ ಮ್ಯೂಸಿಕ್ ಲೇಬಲ್‌ನ 2005ರಲ್ಲಿ ಆರಂಭಿಸಿದರು. ಅವರು ವರ್ಷ ಕಳೆದಂತೆ ಹಲವು ಆಲ್ಬಂಗಳನ್ನು ಇದರ ಅಡಿಯಲ್ಲಿ ರಿಲೀಸ್ ಮಾಡಿದರು. ಅವರು ಶಿಕ್ಷಣ ಕ್ರೇತ್ರದಲ್ಲೂ ಸಾಧನೆ ಮಾಡಿದ್ದಾರೆ. ಉನ್ನತ ಶಿಕ್ಷಣ ಕ್ಷೇತ್ರದ ಕಲ್ಯಾಣಕ್ಕೆ ಅವರು ಶ್ರಮಿಸಿದ್ದಾರೆ. ನ್ಯೂಯಾರ್ಕ್‌ನ ಹಿಂದೂ ದೇವಾಲಯಕ್ಕೆ ಅವರು ಸಾಕಷ್ಟು ದಾನ ಮಾಡಿದ್ದಾರೆ. ಮಹಿಳಾ ಕಲ್ಯಾಣದತ್ತವೂ ಅವರು ಗಮನ ಹರಿಸಿದ್ದಾರೆ. ಚಂದ್ರಿಕಾ ಅವರ ಸಹೋದರಿ ಇಂದ್ರಾ ನೂಯಿ 'ಪೆಪ್ಸಿಕೋ'ನ ಸಿಇಒ ಆಗಿದ್ದಾರೆ.

# ಕುಂಭಮೇಳದಲ್ಲಿ ಅಮೃತಸ್ನಾನ ಶ್ರೀನಿಧಿ

ಕೆಜಿಎಫ್ ಬ್ಯೂಟಿ ಶ್ರೀನಿಧಿ ಶೆಟ್ಟಿ ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ಗೆ ಭೇಟಿ ನೀಡಿದ ಮಹಾ ಕುಂಭಮೇಳದಲ್ಲಿ ಅಮೃತಸ್ನಾನ ಮಾಡಿದ್ದಾರೆ. ಮಹಾಕುಂಭ ಮೇಳ ನಗರದ ತ್ರಿವೇಣಿ ಸಂಗಮದಲ್ಲಿ ಅವರು ಅಮೃತಸ್ನಾನ ಮಾಡಿದ ವಿಡಿಯೋವನ್ನು ತಮ್ಮ ಇನ್ಸ್‌ಟಾಗ್ರಾಮ್ ಪೇಜ್‌ನಲ್ಲಿ ಹಂಚಿಕೊಂಡಿದ್ದಾರೆ. 'ಮೌನಿ ಅಮಾವಾಸ್ಯೆಯಂದು ಮಹಾಕುಂಭ ಮೇಳದಲ್ಲಿನ ತ್ರಿವೇಣಿ ಸಂಗಮದಲ್ಲಿ ನಾನು ಪವಿತ್ರವಾದ ಸ್ನಾನ ಮಾಡುತ್ತೇನೆ ಎಂದು ಕನಸು ಮನಸಿನಲ್ಲಿಯೂ ಕೂಡ ಅಂದುಕೊಂಡಿರಲಿಲ್ಲ. ಈ ಅದ್ಭುತವಾದ ಅನುಭವವನ್ನು ನಾನು ಸಂಪೂರ್ಣವಾಗಿ ಅನುಭವಿಸಿದ್ದೇನೆ' ಎಂದು ಬರೆದುಕೊಂಡಿದ್ದಾರೆ. ಮೌನಿ ಅವಮಾಸ್ಯೆಯ ದಿನವೇ ಕುಂಭಮೇಳದಲ್ಲಿ ಕಾಲ್ತುಳಿತ ಉಂಟಾಗಿ 30 ಮಂದಿ ಸಾವು ಕಂಡಿದ್ದರು. ಆದರೆ, ಶ್ರೀನಿಧಿ ಶೆಟ್ಟಿ ಬೆಳಗಿನ ಜಾವದಲ್ಲಿ ಅಮೃತಸ್ನಾನದಲ್ಲಿ ಭಾಗಿಯಾಗಿದ್ದು ಕಂಡಿದೆ.



ಬದುಕು ಅಚ್ಚರಿಯ ಸಂತೆ ಈ ದೈವಿಕ ಅನುಗ್ರಹ ಮತ್ತು ಆಶೀರ್ವಾದದಿಂದ ನನ್ನ ಹೃದಯ ತುಂಬಿದೆ ಎಂದು ಅವರು ಇನ್ಸ್‌ಟಾಗ್ರಾಮ್ ಪೇಜ್‌ನಲ್ಲಿ ಬರೆದುಕೊಂಡಿದ್ದಾರೆ. ಇತ್ತೀಚೆಗೆ ನಿರ್ದೇಶಕ ಹಾಗೂ ನಟ ರಾಜ್ ಬಿ ಶೆಟ್ಟಿ, ಚಾರ್ಲಿ ಸಿನಿಮಾದ ನಿರ್ದೇಶಕ ಕೆ. ಕಿರಣ್ ರಾಜ್, ನಿರೂಪಕಿ ಅನುಶ್ರೀ ಕೂಡ ಮಹಾ ಕುಂಭಮೇಳದಲ್ಲಿ ಅಮೃತಸ್ನಾನ ಮಾಡಿದ್ದರು.

ಪ್ರಯಾಗ್‌ರಾಜ್ ಕುಂಭಮೇಳಕ್ಕೆ ದಿನದಿಂದ ದಿನಕ್ಕೆ ಭಕ್ತಸಾಗರವೇ ಬರುತ್ತಿದ್ದು. ಇಲ್ಲಿಯವರೆಗೂ 35 ಕೋಟಿ ಮಂದಿ ಪ್ರಯಾಗ್‌ರಾಜ್‌ಗೆ ಭೇಟಿ ನೀಡಿದ್ದಾರೆ ಎಂದು ಉತ್ತರ ಪ್ರದೇಶ ಸರ್ಕಾರ ತಿಳಿಸಿದೆ. ಇನ್ನು ಶ್ರೀನಿಧಿ ಶೆಟ್ಟಿ ಪ್ರಯಾಗ್‌ರಾಜ್‌ನಲ್ಲಿ ಇಡೀ ದಿನ ಮಾಸ್ಕ್ ಹಾಕಿಕೊಂಡೇ ಪ್ರಯಾಣ ಮಾಡಿದ್ದು, ಪ್ರದೇಶದ ಆಧ್ಯಾತ್ಮಿಕ ಅನುಭವಬನ್ನು ಪಡೆದುಕೊಂಡಿದ್ದಾರೆ.

ಕೆಜಿಎಫ್-1 ಹಾಗೂ ಕೆಜಿಎಫ್-2 ಸಿನಿಮಾದಲ್ಲಿ ಯಶ್‌ಗೆ ನಾಯಕಿಯಾಗಿ ನಟಿಸಿದ್ದ ಶ್ರೀನಿಧಿ ಶೆಟ್ಟಿ ಆ ಬಳಿಕ ತಮಿಳು ಹಾಗೂ ತೆಲುಗು ಸಿನಿಮಾರಂಗದಲ್ಲಿ ಬ್ಯೂಸಿಯಾಗಿದ್ದು, ಸದ್ಯ ನ್ಯಾಚುರಲ್ ಸ್ಟಾರ್ ನಾನಿ ಅವರ ಹಿಟ್-3 ಸಿನಿಮಾದಲ್ಲಿ ಹಾಗೂ ಹಲವು ಜಾಹೀರಾತುಗಳಲ್ಲಿ ನಟಿಸುತ್ತಿದ್ದಾರೆ.



ಪ್ರಕಾಶಕ- ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು-560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು-562123 ಇಲ್ಲಿ ಮುದ್ರಿಸಲ್ಪಟ್ಟಿದೆ. RNI.KAR/KAN/2009/31934, ದೂರವಾಣಿ: 9448074878
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
RNI.KAR/KAN/2009/31934.VOLUME-16/ISSUE-52 Email-mussanje2010@gmail.com, Phone: 9448074878